ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 239

18-3-2025 ಮಂಗಳವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 239

## ಹರಿಹರ ಊರಮ್ಮ ಜಾತ್ರೆಯಲ್ಲಿ ಪ್ರಾಣಿಬಲಿ ನಿಷೇಧಕ್ಕೆ ಮನವಿ

**ದಾವಣಗೆರೆ:** ಜಿಲ್ಲೆಯ ಹರಿಹರ ತಾಲ್ಲೂಕಿನಲ್ಲಿ ಮಾ.18ರ ಮಂಗಳವಾರದಿಂದ ನಡೆಯಲಿರುವ ಊರಮ್ಮ ದೇವಿಯ ಜಾತ್ರೆಯಲ್ಲಿ, ಜಾತ್ರೆ ಹೆಸರಿನಲ್ಲಿ ಪ್ರಾಣಿ ಬಲಿ ಮಾಡಬಾರದೆಂದು, ಅದಕ್ಕೆ ಜಿಲ್ಲಾಡಳಿತ/ತಾಲೂಕು ಆಡಳಿತ, ನಗರ ಪೊಲೀಸ್‌ಠಾಣೆ ಅಧಿಕಾರಿಗಳು ಅವಕಾಶ ನೀಡಬಾರದೆಂದು ಒತ್ತಾಯಿಸಿ, ವಿಶ್ವ ಪ್ರಾಣಿಕಲ್ಯಾಣ ಮಂಡಳಿ ಅಧ್ಯಕ್ಷ ದಯಾನಂದ ಸ್ವಾಮೀಜಿ ಮನವಿ ಮಾಡಿದ್ದಾರೆ.

ಮಾ 18 ರಿಂದ ಮಾ.22 ರ ವರೆಗೂ ಗ್ರಾಮದೇವತೆ ಊರಮ್ಮಜಾತ್ರೆ ನಡೆಯುವುದರಿಂದ ಈ ಜಾತ್ರೆಗೆ ಜಿಲ್ಲೆ ಸೇರಿದಂತೆ, ಅಕ್ಕ-ಪಕ್ಕದ ಜಿಲ್ಲೆಗಳಿಂದ, ರಾಜ್ಯದ ನಾನಾ ಊರುಗಳಿಂದ ಸಹಸ್ರಾರು ಸಂಖ್ಯೆಯಲ್ಲಿಭಕ್ತರು ಆಗಮಿಸಿ, ಪೂಜಾಹಾಗೂ ಧಾರ್ಮಿಕ ಸೇವಾ ಕಾರ್ಯಗಳನ್ನು ಸಲ್ಲಿಸುತ್ತಾರೆ. ಇದೇ ಸಂದರ್ಭದಲ್ಲಿ ಹಲವು ಭಕ್ತರು ದೇವರು ಮತ್ತು ಧರ್ಮದ ಹೆಸರಿನಲ್ಲಿ ಹರಕೆಯ ರೂಪದಲ್ಲಿ ಆಡು,ಕುರಿ, ಕೋಳಿ,ಕೋಣ ಮುಂತಾದ ಪ್ರಾಣಿಗಳ ಬಲಿ ನೀಡುತ್ತಾ-ರೆ. ಆದರೆ,ಕರ್ನಾಟಕ ಪ್ರತಿಬಂಧಕ ಅಧಿನಿಯಮ 1959 ಮತ್ತು 1963 ತಿದ್ದುಪಡಿಕಾಯ್ದೆ, 1975 ಪ್ರಕಾರ ಪ್ರಾಣಿ ಬಲಿ ಮಾಡುವುದು ಅಪರಾಧವಾಗುತ್ತದೆ. ಹೈಕೋರ್ಟ್ ಆದೇಶಗಳ ಅಡಿಯಲ್ಲಿ ಸಂಪೂರ್ಣವಾಗಿ ಪ್ರಾಣಿ ಬಲ ನೀಡುವುದನ್ನು ತಡೆಯಬೇಕೆಂದು ಅವರು ಕೋರಿದ್ದಾರೆ.

## ರಾಷ್ಟ್ರ ಮಟ್ಟದ ಬಾಸ್ಕೆಟ್ ಬಾಲ್ ತಂಡಕ್ಕೆ ಎನ್.ಎಂ. ವಿಷ್ಣು ಆಯ್ಕೆ


**ದಾವಣಗೆರೆ:** ಬಾಸ್ಕೆಟ್ ಬಾಲ್ ಫೆಡರೇಶನ್ ಆಫ್ ಇಂಡಿಯಾ ಹಾಗೂ ಅಸ್ಸಾಂ ಬಾಸ್ಕೆಟ್ ಬಾಲ್ ಅಸೋಸಿಯೇಷನ್ ಸಂಯುಕ್ತಾಶ್ರಯದಲ್ಲಿ ನಡೆಲಿರುವ ಮೊದಲ ರಾಷ್ಟ್ರಮಟ್ಟದ 23 ವರ್ಷ ವಯಸ್ಸಿನ ಬಾಸ್ಕೆಟ್ ಬಾಲ್ ತಂಡಕ್ಕೆ ದಾವಣಗೆರೆಯ ಬಾಸ್ಕೆಟ್ ಬಾಲ್ ಕ್ಲಬ್ ನ ಎನ್. ಎಂ. ವಿಷ್ಣು ಆಯ್ಕೆಯಾಗಿದ್ದಾರೆ.




ಮಾ.18 ರಿಂದ 24 ರವರೆಗೆ ಅಸ್ಸಾಂ ನ ಗುವಾಹಟಿಯಲ್ಲಿ ನಡೆಯಲಿದ್ದು, ವಿಷ್ಣು ಪಾಲ್ಗೊಳ್ಳಲಿದ್ದಾರೆ. ವಿಷ್ಣು ತಂದೆ ನಾಗಪ್ಪ ಮಂಟಗಣಿ ತಾಯಿ ಸುಧಾ ಮಂಟಗಣಿ.

ಕ್ಲಬ್ ನ ಗೌರವಾಧ್ಯಕ್ಷ ರಾಮಮೂರ್ತಿ ಸಿ, ಅಧ್ಯಕ್ಷ ಕಿರಣ್ ಕುಮಾರ್ ಆರ್, ಉಪಾಧ್ಯಕ್ಷ ಗಡಿಗುಡಾಳ್ ಮಂಜುನಾಥ್, ವಿಜಯ್ ಕುಮಾರ್, ಕಾರ್ಯದರ್ಶಿ ವೀರೇಶ್ ಆರ್, ಸಹ ಕಾರ್ಯದರ್ಶಿ ಉದಯ್ ಸ್ವಾಮಿ, ಖಜಾಂಚಿ ಪ್ರಸನ್ನ ಕುಮಾರ್, ತರಬೇತಿದಾರ ದರ್ಶನ್ ಆರ್ ಹಾಗೂ ದಾವಣಗೆರೆ ಬಾಸ್ಕೆಟ್ ಬಾಲ್ ಕ್ಲಬ್ಬಿನ ಎಲ್ಲಾ ಸದಸ್ಯರು ಶುಭ ಹಾರೈಸಿದ್ದಾರೆ.

## ಚಿನ್ನ ಕಳ್ಳಸಾಗಣೆ: ನವೆಂಬರ್‌ನಲ್ಲಿ ರನ್ಯಾ ರಾವ್ ಜೊತೆ ವಿವಾಹ, ಡಿಸೆಂಬರ್‌ನಲ್ಲಿ ದೂರ: ನ್ಯಾಯಾಲಯಕ್ಕೆ ಜತಿನ್ ಹುಕ್ಕೇರಿ



**ಬೆಂಗಳೂರು:** ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟಿ ರನ್ಯಾ ರಾವ್ ಅವರ ಪತಿ ಜತಿನ್ ಹುಕ್ಕೇರಿ ಕೂಡ ಇದೀಗ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬಂಧನದಿಂದ ವಿನಾಯಿತಿ ಕೋರಿ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದು, ಮುಂದಿನ ವಿಚಾರಣೆಯವರೆಗೆ ಜತಿನ್ ಅವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದಂತೆ ಕರ್ನಾಟಕ ಹೈಕೋರ್ಟ್ ಈ ಹಿಂದೆ ಆದೇಶಿಸಿದೆ.

ಜತಿನ್ ಹುಕ್ಕೇರಿ ಅವರ ಮಂಡಿಸಿದ ವಕೀಲ ಪ್ರಭುಲಿಂಗ ನಾವದಗಿ ಅವರು, ತಮ್ಮ ಕಕ್ಷಿದಾರರು ನವೆಂಬರ್‌ನಲ್ಲಿ ರನ್ಯಾ ರಾವ್ ಅವರನ್ನು ವಿವಾಹವಾದರು. ಆದರೆ, ಕೆಲವು ಸಮಸ್ಯೆಗಳಿಂದಾಗಿ ಡಿಸೆಂಬರ್‌ನಿಂದ ಅನಧಿಕೃತವಾಗಿ ಅವರಿಂದ ಬೇರ್ಪಟ್ಟಿದ್ದಾರೆ ಎಂದು ಹೇಳುವ ಮೂಲಕ ಬಂಧನದಿಂದ ವಿನಾಯಿತಿ ಕೋರಿದ್ದರು.

ಕಂದಾಯ ಗುಪ್ತಚರ ನಿರ್ದೇಶನಾಲಯ (ಆಖಖ) ಪರ ವಕೀಲ ಮಧು ರಾವ್, ಮುಂದಿನ ಸೋಮವಾರ ತಮ್ಮ ಆಕ್ಷೇಪಣೆಯನ್ನು ಸಲ್ಲಿಸುವುದಾಗಿ ನ್ಯಾಯಾಲಯಕ್ಕೆ ತಿಳಿಸಿದ್ದಾರೆ. ಹೀಗಾಗಿ, ಜತಿನ್ ಹುಕ್ಕೇರಿ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಬಾರದು ಎಂಬ ತನ್ನ ಹಿಂದಿನ ಆದೇಶವು ಮಾರ್ಚ್ 24ರ ಸೋಮವಾರ ನಡೆಯಲಿರುವ ಮುಂದಿನ ವಿಚಾರಣೆಯವರೆಗೆ ಜಾರಿಯಲ್ಲಿರುತ್ತದೆ ಎಂದು ಹೈಕೋರ್ಟ್ ತೀರ್ಪು ನೀಡಿದೆ. ಮುಂದಿನ ವಿಚಾರಣೆ-ಯಂದು ಆಖಖ ತನ್ನ ಆಕ್ಷೇಪಣೆ ಸಲ್ಲಿಸಲಿದೆ.

ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಸಿಲುಕಿರುವ ರನ್ಯಾ ರಾವ್ ಅವರೊಂದಿಗಿನ ಸಂಬಂಧದ ಕಾರಣಕ್ಕೆ ತಮ್ಮನ್ನು ಕಸ್ಟಡಿಗೆ ತೆಗೆದುಕೊಳ್ಳಬಹುದೆಂಬ ಭಯದಿಂದ ಜತಿನ್ ಹುಕ್ಕೇರಿ ನ್ಯಾಯಾಲಯದ ಮೆಟ್ಟಿಲೇರಿದ್ದರು.

## ಚಾಲಕನ ನಿಯಂತ್ರಣ ತಪ್ಪಿ ಮರಕ್ಕೆ ಕಾರು ಡಿಕ್ಕಿ; ಮೂವರು ಯುವಕರ ದುರ್ಮರಣ

**ವಿಜಯಪುರ:** ವಿಜಯಪುರ ತಾಲೂಕಿನ ಹೆಗಡಿಹಾಳ ಕ್ರಾಸ್ ಬಳಿ ಚಾಲಕನ ನಿಯಂತ್ರಣ ತಪ್ಪಿ ಮರಕ್ಕೆ ಕಾರು ಡಿಕ್ಕಿ ಹೊಡೆದ ಪರಿಣಾಮ ಮೂವರು ಸಾವನ್ನಪ್ಪಿರುವಂತಹ ದಾರುಣ ಘಟನೆ ನಡೆದಿದೆ. ಮೃತರನ್ನು 30 ವರ್ಷದ ಉತ್ನಾಳದ ಬೀರಪ್ಪ ಗೋಡೆಕರ್, 25 ವರ್ಷದ ಹಣಮಂತ ಕಡ್ಲಿಮಟ್ಟಿ ಮತ್ತು ಜುಮನಾಳ ಗ್ರಾಮದ 19 ವರ್ಷದ ಯಮನಪ್ಪ ನಾಟೀಕಾರ್ ಎಂದು ಗುರುತಿಸಲಾಗಿದೆ. ಏಂ 28, ಜ 0379 ನಂಬರಿನ ಕಾರು ಚಾಲಕನ ಅತಿವೇಗದಿಂದ ಅಪಘಾತ ಸಂಭವಿಸಿದೆ ಎನ್ನಲಾಗದೆ. ಸದ್ಯ ಶವಗಳನ್ನು ಕಾರಿನಿಂದ ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಶಿಫ್ಟ್ ಮಾಡಲಾಗಿದೆ. ಅಪಘಾತದಲ್ಲಿ ಉಮೇಶ್ ಭಜಂತ್ರಿಗಂಭೀರವಾಗಿ ಗಾಯಗೊಂಡಿದ್ದು ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ವಿಜಯಪುರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

## 60 ವರ್ಷ ವಯೋಮಾನದ ಅಸಂಘಟಿತ ಕಾರ್ಮಿಕರಿಗೆ ಇ- ಶ್ರಮ ಪೋರ್ಟಲ್ ನೊಂದಣಿಗೆ ಸಂಸದರ ಮನವಿ

**ದಾವಣಗೆರೆ/ನವದೆಹಲಿ;** ಅಸಂಘಟಿತ ಕ್ಷೇತ್ರದ ಬಹುಸಂಖ್ಯಾತ ಕಾರ್ಮಿಕರು 60 ವರ್ಷ ವಯೋಮಿತಿಯ ನಂತರವೂ ಕೆಲಸ ಮಾಡುತ್ತಿರುವ ಸಂದರ್ಭದಲ್ಲಿಯೂ ಕೇಂದ್ರ ಸರ್ಕಾರವು ಇ-ಶ್ರಮ್ ಪೋರ್ಟಲ್ ನೋಂದಣಿಯನ್ನು ಕೇವಲ 16 ರಿಂದ 59 ವರ್ಷದ ಕಾರ್ಮಿಕರಿಗೆ ಮಾತ್ರ ಸೀಮಿತಗೊಳಿಸಿರುವ ಬಗ್ಗೆ ದಾವಣಗೆರೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಸದನದಲ್ಲಿ ಮಾತನಾಡಿದ್ದಾರೆ.



ಸಂಸತ್ ಸದನದ ಪ್ರಶ್ನೋತ್ತರ ವೇಳೆಯಲ್ಲಿ ಈ ಬಗ್ಗೆ ಕೇಂದ್ರ ಸರ್ಕಾರದ ಗಮನಸೆಳೆದ ಸಂಸದರು

ಈ ವಯೋಮಿತಿಯ ಕಾರಣದಿಂದ ಉಂಟಾಗುವ ಪರಿಣಾಮಗಳ ಕುರಿತು ಸರ್ಕಾರ ಅಧ್ಯಯನ ನಡೆಸಿದೆಯೇ? ಹಾಗೂ ಹಿರಿಯ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ವ್ಯಾಪ್ತಿಯನ್ನು ವಿಸ್ತರಿಸಲು ಅರ್ಹತೆ ವಿಸ್ತರಿಸುವ ಯಾವುದೇ ಯೋಜನೆಗಳಿವೆಯೇ? ಎಂದು ಪ್ರಶ್ನಿಸುವ ಮೂಲಕ ಸದನದ ಗಮನಸೆಳೆದರು.ಸಂಸದರ ಪ್ರಶ್ನೆಗೆ ಉತ್ತರಿಸಿದ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಇಲಾಖೆಯ ಸಚಿವರಾದ ಡಾ.ಮನ್ ಸುಖ್ ಮಾಂಡವೀಯ ಅವರು ನೋಂದಾಯಿತ ಕಾರ್ಮಿಕರಿಗೆ ವಿವಿಧ ಯೋಜನಾ ಲಾಭಗಳು ಲಭ್ಯವಿದ್ದು, ಉದ್ಯೋಗಾವಕಾಶಗಳನ್ನು ಒದಗಿಸಲು ಇ-ಶ್ರಮ ಪೋರ್ಟಲ್ ಅನ್ನು ನ್ಯಾಷನಲ್ ಕೆರಿಯರ್ ಸರ್ವಿಸ್ ಪೋರ್ಟಲ್‌ನೊಂದಿಗೆ ಏಕೀಕೃತಗೊಳಿಸಲಾಗಿದೆ ಎಂದು ತಿಳಿಸಿದರು. ಹಿರಿಯ ಕಾರ್ಮಿಕರಿಗೆ ಲಭ್ಯವಿರುವ ಉಪಯೋಗದ ಬಗ್ಗೆ ಸಂಸದರು ವಿಶೇಷವಾಗಿ ಕೇಳಿದಾಗ, ಸಚಿವರು ಪ್ರಧಾನಮಂತ್ರಿ ಶ್ರಮ್ ಯೋಗಿ ಮಾನಧನ್ ಯೋಜನೆ ಬಗ್ಗೆ ಉಲ್ಲೇಖಿಸಿದರು, ಇದು 60 ವರ್ಷಗಳ ನಂತರ ಪ್ರತಿ ತಿಂಗಳು 3,000 ರೂ ಕನಿಷ್ಠ ಖಾತರಿ ಪಿಂಚಣಿಯನ್ನು ಒದಗಿಸುತ್ತದೆ. ಆದರೆ, 60 ವರ್ಷಕ್ಕಿಂತ ಮೇಲ್ಪಟ್ಟ ವಯಸ್ಸಿನ ಕಾರ್ಮಿಕರನ್ನು ಇ-ಶ್ರಮ ನೋಂದಣಿಯಿಂದ ಹೊರಗುಳಿಸಲಾಗುತ್ತಿದೆ ಎಂಬ ಪ್ರಮುಖ ಪ್ರಶ್ನೆಗೆ ಕೇಂದ್ರ ಸಚಿವರು ಸಮರ್ಪಕ ಮಾಹಿತಿ ಒದಗಿಸಲು ಸಾಧ್ಯವಾಗಲಿಲ್ಲ. ಆದರೆ ಸಂಸದರು 60 ವರ್ಷ ವಯಸ್ಸಿನ ನಂತರವೂ ಕೆಲಸ ಮಾಡುತ್ತಿರುವ ಅಸಂಘಟಿತ ಕಾರ್ಮಿಕರ ಶ್ರಮದ ಬಗ್ಗೆ ಮಾತನಾಡಿದ್ದು ಗಮನಸೆಳೆಯುವಂತಿತ್ತು.



ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಅವರಿಗೆ ಹುಟ್ಟು ಹಬ್ಬದ ಶುಭಾಶಯವನ್ನು ಕನ್ನಡ ಭಾರತಿ ಬಳಗದಿಂದ ಕೋರಲಾಯಿತು.

## ಸೋರಿದ ಭದ್ರನಾಲೆ

### ಮಲೆಬೆನ್ನೂರು ಭಾಗಕ್ಕೆ ನೀರಿಲ್ಲ



**ದಾವಣಗೆರೆ:** ಅನವೇರಿ ನಾಲ ವಿಭಾಗದ ಸಾಸಿವೆ ಹಳ್ಳಿ ದಿಗ್ಗೆನ ಹಳ್ಳಿ ಹತ್ತಿರ ಭದ್ರಾ ನಾಲೆ ತೊಟ್ಟಿಲು ಹೊಡೆದಿದ್ದು ತುರ್ತು ರಿಪೇರಿ ಮಾಡುವಂತೆ ಭಾರತೀಯ ರೈತ ಒಕ್ಕೂಟ ಆಗ್ರಹಿಸಿದೆ.

ನಾಲೆ


ಭದ್ರಾ ಮಾಲೆ ಹೊಡೆದು ಮಲೇಬೆನ್ನೂರು ಭಾಗದ 25 ಹೆಕ್ಟೇರ್ ಪ್ರದೇಶಕ್ಕೆ ನೀರಿಲ್ಲದಂತಾಗಿದೆ. ಕೂಡಲೆ ಸರ್ಕಾರ ತ್ವರಿತವಾಗಿ ನಾಲೆ ದುರಸ್ತಿ ಮಾಡಬೇಕೆಂದು ಒಕ್ಕೂಟದ ಅಧ್ಯಕ್ಷ ಶಾಮನೂರು ಲಿಂಗರಾಜ್, ಉಪಾಧ್ಯಕ್ಷ ನಾಗರಾಜರಾವ್ ಇತರರು ಆಗ್ರಹಿಸಿದ್ದಾರೆ.

## ಒಂದು ರೂ. ಸಂಬಳ ಪಡೆಯುವ ಅಮಿತ್ ಕಟಾರಿಯಾ ಭಾರತದ ಅತ್ಯಂತ ಶ್ರೀಮಂತ ಐಎಎಸ್ ಅಧಿಕಾರಿ

**ಹೊಸದಿಲ್ಲಿ:** ಕೆಲ ದಿನಗಳಿಂದ ಸಾಮಾಜಿಕ ಜಾಲತಾಣದಲ್ಲಿ ಸುದ್ದಿಯಲ್ಲಿರುವ ಐಎಎಸ್ ಅಧಿಕಾರಿ ಅಮಿತ್ ಕಟಾ-ರಿಯಾ ಭಾರತೀಯರಷ್ಟೇ ಅಲ್ಲ, ಜಗತ್ತಿನ ಹಲವು ಜನರ ಗಮನ ಸೆಳೆದಿದ್ದಾರೆ.

ಗುರುಗ್ರಾಮ್ ನಿವಾಸಿಯಾದ ಈ ಅಧಿಕಾರಿ ಛತ್ತೀಸ್‌ಗಢದ ಬಸ್ತಾರ್ ಜಿಲ್ಲೆ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದರು. ಏಳು ವರ್ಷಗಳ ನಂತರ ಇತ್ತೀಚೆಗೆ ಕೇಂದ್ರ ನಿಯೋಜನೆಗೆ ಮರಳಿದ್ದಾರೆ. ಇವರ ಘೋಷಿತ ಆಸ್ತಿಯೇ 8.90 ಕೋಟಿ ರೂ. ಇದ್ದು, ದೇಶದ ಅತ್ಯಂತ ಶ್ರೀಮಂತ ಐಎಎಸ್ ಅಧಿಕಾರಿ ಎಂದು ವರದಿಯಾಗಿದೆ.

2004-ಕೇಡರ್ ಐಎಎಸ್ ಆಗಿರುವ ಕಟಾರಿಯಾ, ದೇಶದ ಉನ್ನತ ನಾಗರಿಕ ಸೇವಕರಲ್ಲಿ ಒಬ್ಬರಾಗಿದ್ದು, ಐಎಎಸ್ ಟೀನಾ ಡಾಬಿ ಮತ್ತು ಐಪಿಎಸ್ ಅಮಿತ್ ಲೋಧಾ ಅವರಂತಹ ಇತರ ಅಧಿಕಾರಿಗಳಂತೆ ಹಲವು ಬಾರಿ ಬೆಳಕಿಗೆ ಬಂದಿದ್ದಾರೆ.



**ಕಟಾರಿಯಾ ಶೈಕ್ಷಣಿಕ ಅರ್ಹತೆ:** ಭಾರತದ ಅತ್ಯಂತ ಶ್ರೀಮಂತ ಐಎಎಸ್ ಅಧಿಕಾರಿ ಅಮಿತ್ ಕಟಾರಿಯಾ ಪ್ರಭಾವಶಾಲಿ ಶೈಕ್ಷಣಿಕ ಹಿನ್ನೆಲೆಯನ್ನು ಹೊಂದಿದ್ದಾರೆ. ಅವರು ಆರ್‌ಕೆ ಪುರಂನ ದೆಹಲಿ ಪಬ್ಲಿಕ್ ಶಾಲೆಯಲ್ಲಿ ಶಿಕ್ಷಣ ಪೂರ್ಣಗೊಳಿಸಿದರು. ನಂತರ ದೆಹಲಿಯ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಐಐಟಿ) ಯಿಂದ ಪದವಿಪೂರ್ವ ಪದವಿ ಪೂರ್ಣಗೊಳಿಸಿದರು ಮತ್ತು ಎಲೆಕ್ಟ್ರಿಕಲ್ ಎಂಜಿನಿಯರಿಂಗ್‌ನಲ್ಲಿ ಪದವಿ ಪಡೆದರು.

**ಸನ್ ಗ್ಲಾಸ್ ವಿವಾದ:** ಅಮಿತ್ ಕಟಾರಿಯಾ ಹಲವಾರು ಕಾರಣಗಳಿಂದ ಸುದ್ದಿಯಾದರು. ಸನ್ ಗ್ಲಾಸ್ ಧರಿಸಿ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾದಾಗ ಅವರನ್ನು ಬಸ್ತಾರ್‌ನಲ್ಲಿ ಜಿಲ್ಲಾಧಿಕಾರಿಯಾಗಿ ನೇಮಿಸಲಾಯಿತು. ನಂತರ ಛತ್ತೀಸ್‌ಗಢ ಆಡಳಿತವು ಐಎಎಸ್ ಅಧಿಕಾರಿಯಾಗಿ ಪ್ರಧಾನಿ ಮೋದಿಯವರನ್ನು ಭೇಟಿಯಾದಾಗ ಸರಿಯಾದ ಬಟ್ಟೆ ಧರಿಸದಿದ್ದಕ್ಕಾಗಿ ಮತ್ತು ಸನ್ ಗ್ಲಾಸ್ ಧರಿಸಿದ್ದಕ್ಕಾಗಿ ಶೋ-ಕಾಸ್ ನೋಟಿಸ್ ನೀಡಿತು.

## ಬಟ್ಟೆ ತೊಳೆಯಲು ತೆರಳಿದ್ದ ಮೂವರು ಮಹಿಳೆಯರು ನೀರು ಪಾಲು

ಚನ್ನಗಿರಿ ತಾಲೂಕಿನ ದಿಗ್ಗೇನಹಳ್ಳಿ ಕೆರೆಯಲ್ಲಿ ಬಟ್ಟೆ ತೊಳೆಯಲು ತೆರಳಿದ್ದ ಮೂವರು ಮಹಿಳೆಯರು ಆಕಸ್ಮಿಕ ಕಾಲು ಜಾರಿ ಕೆರೆಯ ಪಾಲಾದ ಘಟನೆ ಸೋಮವಾರ ಮಧ್ಯಾಹ್ನ ಸಂಭವಿಸಿದೆ.

ಮೃತ ಮಹಿಳೆಯರು ದಿಗ್ಗೇನಹಳ್ಳಿ ಪಕ್ಕದ ಗ್ರಾಮವಾದ ಲಕ್ಷ್ಮಿಸಾಗರ ಗ್ರಾಮದವರಾಗಿದ್ದು ದೀಪ(22) ದಿವ್ಯಾ(28) ಮತ್ತು ಚಂದನ(26) 'ಗ್ರಾಮಕ್ಕೆ ಹೊಂದಿಕೊಂಡಿದ್ದ ಕೆರೆಯಲ್ಲಿ ಒಟ್ಟು 5 ಜನ ಮಹಿಳೆಯರು ಕೆರೆಗೆ ಬಟ್ಟೆ ತೊಳೆಯಲು ಹೋಗಿದ್ದು ಬಟ್ಟೆ ತೊಳೆದ ನಂತರ ಮುಖ ತೊಳೆಯಲು ಹೋದಂತಹ ಸಂದರ್ಭದಲ್ಲಿ



ದೀಪ ಕಾಲು ಜಾರಿದ್ದು ಅವಳನ್ನು ರಕ್ಷಿಸಿಲು ಹೋದ ಇಬ್ಬರು ಮಹಿಳೆಯರು ನೀರಿನೊಳಕ್ಕೆ ಹೋಗಿದ್ದಾರೆ. ಮತ್ತೊಬ್ಬ ಮಹಿಳೆ ಮುಳುಗುತ್ತಿದ್ದ ಕಂಡು ದಡದಲ್ಲಿದ್ದ ಮತ್ತೊಬ್ಬ ಮಹಿಳೆಯನ್ನು ಸೀರೆಯನ್ನು ಹಾಕಿ ಎಳೆದು ರಕ್ಷಿಸಿದ್ದಾರೆ.

ಘಟನೆಯ ವಿಷಯ ತಿಳಿದಾಕ್ಷಣ ಚನ್ನಗಿರಿ ಅಗ್ನಿಶಾಮಕ ದಳದ ಸಿಬ್ಬಂದಿಗಳು ಬೇಟಿ ನೀಡಿ ಕೆರೆಯಲ್ಲಿ ಮುಳುಗಿದ್ದ ಶವಗಳನ್ನು ತೆಗೆದು ಪೋಷಕರಿಗೆ ಒಪ್ಪಿಸಿದರು. ಮಹಿಳೆಯರು ಮೃತರಾಗಿದ್ದ ವಿಷಯ ತಿಳಿದಾಕ್ಷಣ ಸುತ್ತಮುತ್ತಲಿನ ಗ್ರಾಮಸ್ಥರು ಕೆರೆಯ ದಡಕ್ಕೆ ದೌಡಾಯಿಸಿದರು. ಕಣ್ಣೆದುರೇ ಮಗಳು ನೀರೊಳಗೆ ಮುಳುಗುತ್ತಿದ್ದರೂ ರಕ್ಷಣೆ ಮಾಡಲು ಸಾಧ್ಯವಾಗದ ತಾಯಿಯ ಆಕ್ರಂಧನ ಮತ್ತು ತಾಯಿಯನ್ನು ಕಳೆದುಕೊಡ ತಬ್ಬಲಿಯಾದ ಮಕ್ಕಳ ಆಕ್ರಂದನ ಮುಗಿಲು ಮುಟ್ಟುವಂತಿತ್ತು. ಸ್ಥಳಕ್ಕೆ ತಹಶೀಲ್ದಾರ್ ಎನ್. ಜೆ. ನಾಗರಾಜ್ ಬೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವಾನ ಹೇಳಿ ಸರಕಾರದಿಂದ ದೊರಕಿಸಿಕೊಡಬಹುದಾದ ಸೌಲಭ್ಯಗಳನ್ನು ದೊರಕಿಸಿಕೊಡುವ ಭರವಸೆ ನೀಡಿದರು.

ಸ್ಥಳಕ್ಕೆ ಪಿ.ಐ. ರವೀಶ್, ಪಿ.ಎಸ್.ಐ. ಸುರೇಶ್ ಬೇಟಿ ನೀಡಿ ಪ್ರಕರಣವನ್ನು ದಾಖಲಿಸಿದ್ದಾರೆ.

## ಕನ್ನಡ ನಾಟಕ ಜಗತ್ತಿಗೆ ಗ್ರಾಮೀಣ ರಂಗಭೂಮಿಯ ಕೊಡುಗೆ ಅಪಾರ: ಡಾ. ಸಾಸ್ವೇಹಳ್ಳಿ ಸತೀಶ್




**ದಾವಣಗೆರೆ:** ಕನ್ನಡ ನಾಟಕ ಜಗತ್ತನ್ನು ಶ್ರೀಮಂತಗೊಳಿಸುವಲ್ಲಿ ವೃತ್ತಿ ರಂಗಭೂಮಿಯಷ್ಟೇ ಕೊಡುಗೆಯನ್ನು ಗ್ರಾಮೀಣ ರಂಗಭೂಮಿ ನೀಡಿದೆ ಎಂಬ ಅಭಿಪ್ರಾಯವನ್ನು ಶಿವಮೊಗ್ಗದ ಡಾ. ಸಾಸ್ವೆಹಳ್ಳಿ ಸತೀಶ್ ವ್ಯಕ್ತಪಡಿಸಿದರು.

ನಗರದ ದೃಶ್ಯಕಲಾ ಮಹಾವಿದ್ಯಾಲಯದ ಸಕ್ಕರಿ ಬಾಳಾಚಾರ್ಯ ರಂಗವೇದಿಕೆಯಲ್ಲಿ ವೃತ್ತಿ ರಂಗಭೂಮಿ ರಂಗಾಯಣ ವತಿಯಿಂದ ಹಮ್ಮಿಕೊಂಡಿರುವ ರಾಷ್ಟ್ರೀಯ ವೃತ್ತಿ ರಂಗೋತ್ಸವದಲ್ಲಿ 'ಗ್ರಾಮೀಣ ರಂಗಭೂಮಿ: ತಿರುಳು ನೋಟ' ವಿಷಯ ಮಂಡನೆ ಮಾಡಿದರು.

ಗ್ರಾಮೀಣ ರಂಗಭೂಮಿ ಬೆಳೆದು ಬಂದ ಹಾದಿ ಅವಲೋಕಿಸಿದಾಗ ಶನಿಪುರಾಣ, ಭಜನೆ, ಪುರವಂತಿಕೆ, ಒಗಟು ಹೇಳುವವರು, ಹರಿಕಥೆ ಈ ಎಲ್ಲ ಪ್ರಕಾರಗಳಿಂದ ಗ್ರಾಮೀಣ ರಂಗಭೂಮಿ ಪ್ರಭಾವಿತವಾಗಿದೆ ಎಂದು ತಿಳಿದು ಬರುತ್ತದೆ. ಅಲ್ಲದೆ, ಜಾತ್ರೆಯಲ್ಲಿ ಇತರೆಡೆಗಳಿಂದ ಬಂದು ಪ್ರದರ್ಶಿಸಿದ ನಾಟಕಗಳನ್ನು ಗ್ರಾಮೀಣ ರಂಗಭೂಮಿಯಲ್ಲಿ ಕಲಿಸಲಾಗುತ್ತಿತ್ತು. ರಟ್ಟೀಹಳ್ಳಿ, ನ್ಯಾಮತಿ, ಸವಳಂಗ ಈ ಭಾಗಗಳಲ್ಲಿ ಪುರವಂತಿಕೆ ಹೇಳುವವರೇ ರಂಗ ಕಲಾವಿದರಾಗಿರುವುದನ್ನು ಕಾಣುತ್ತೇವೆ ಎಂದರು.

ಗ್ರಾಮೀಣ ರಂಗಭೂಮಿಯಿಂದ ಹಂಚಿ ತಿನ್ನುವ ಸಂಸ್ಕೃತಿ ಬಂತು. ಒಂದು ಹಳ್ಳಿ ಸಾಂಸ್ಕೃತಿಕವಾಗಿ, ಸಾಮಾಜಿಕವಾಗಿ ಬೆಳೆದು ಬಂದಿದೆ ಎಂದರೆ ರಂಗಭೂಮಿಯ ಪಾತ್ರ ಹಿರಿದು. ಇಲ್ಲಿ ಜಾತೀಯತೆ ಇರುತ್ತಿರಲಿಲ್ಲ. ನಾಟಕಕಾರರಿಗೆ ಗೌರವ, ಸಹಕಾರ, ಸಹಾಯ ನೀಡಲಾಗುತ್ತಿತ್ತು. ನಾವೆಲ್ಲರೂ ಒಂದೇ ಎಂಬ ನೀತಿ ಸಾರಿತು. ಎಲ್ಲರೂ ಒಂದೆಡೆ ಸೇರುತ್ತಿದ್ದರು. ಆದರೆ ಪ್ರಸ್ತುತ ಇಡೀ ಹಳ್ಳಿಯೇ ವಿಘಟನೆಯಾಗುತ್ತಿರುವುದು ವಿಷಾದದ ಸಂಗತಿ ಎಂದರು.

ಹಿಂದೆ ಯುವಜನ ಮೇಳ ನಡೆಸುವ ನಾಟಕ ಸ್ಪರ್ಧೆಗಾಗಿ ಹಳ್ಳಿಗಳಲ್ಲಿ ನಾಟಕ ಕಲಿಯುತ್ತಿದ್ದರು. ದೊಡ್ಡ ದೊಡ್ಡ ನಾಟಕಗಳನ್ನು ಸ್ಪರ್ಧೆಗಾಗಿ ಕಲಿತು ಪ್ರದರ್ಶಿಸುತ್ತಿದ್ದರು. ಗ್ರಾಮೀಣ ಭಾಗದ ಬರವಣಿಗೆಕಾರರನ್ನು ಬಡಿದೆಬ್ಬಿಸುತ್ತಿತ್ತು. ಆದರೆ ಈಗ ನಾಟಕ ಸ್ಪರ್ಧೆಯನ್ನು ನಿಲ್ಲಿಸಲಾಗಿದೆ. ಹಾಗಾಗಿ ಗ್ರಾಮೀಣ ರಂಗಚಟುವಟಿಕೆಗಳು ಸ್ಥಗಿತವಾಗಿದೆ. ಮೇಳಗಳು ಮತ್ತೆ ರಂಗ ಚಟುವಟಿಕೆಯನ್ನು ಆರಂಭಿಸುವ ಮೂಲಕ ಗ್ರಾಮೀಣ ರಂಗಭೂಮಿಗೆ ಪ್ರೋತ್ಸಾಹ ನೀಡಬೇಕಿದೆ ಎಂದು ಅಭಿಪ್ರಾಯಪಟ್ಟರು.

ಹಿಂದೆಲ್ಲಾ 3-4 ಗಂಟೆಯ ನಾಟಕಗಳನ್ನು ಗ್ರಾಮೀಣ ರಂಗಭೂಮಿಯಲ್ಲಿ ಪ್ರದರ್ಶಿಸಲಾಗುತ್ತಿತ್ತು. ಆದರೆ ಪ್ರಸ್ತುತ ಅದರ ಅವಧಿ ಒಂದೂವರೆ ಗಂಟೆ-ಗೆ ಇಳಿಕೆಯಾಗಿದೆ. ಮೊಬೈಲ್ ನಿಂದ ಗ್ರಾಮೀಣ ರಂಗಭೂಮಿ ಮರೆಯಾಗುತ್ತಿದೆ. ಹೆಚ್ಚು ಹೊತ್ತು ಕುಳಿತು ವೀಕ್ಷಿಸುವ ತಾಳ್ಮೆಯನ್ನು ಪ್ರೇಕ್ಷಕರು ಕಳೆದುಕೊಂಡಿದ್ದಾರೆ. ಅಲ್ಲದೆ ಅದ್ದೂರಿತನ ಒಳಹೊಕ್ಕಿದ್ದು, 'ಮನರಂಜನೆ ಹೆಚ್ಚಾಗಿ ವಿಚಾರ ಗೌಣವಾಗುತ್ತಿದೆ' ಎಂದು ಹೇಳುವ ಮೂಲಕ ಗ್ರಾಮೀಣ ರಂಗಭೂಮಿಯ ಸ್ಥಿತಿಗತಿಗಳನ್ನು ತೆರೆದಿಟ್ಟರು.

'ರಂಗಭೂಮಿಗೆ ಇಣುಕಲಿದೆಯೇ ಕೃತಕ ಬುದ್ಧಿಮತ್ತೆ?' ವಿಷಯವನ್ನು ಮಂಡಿಸಿದ ದೃಶ್ಯಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಜೈರಾಜ್ ಎಂ. ಚಿಕ್ಕ ಪಾಟೀಲ್, ಕೃತಕ ಬುದ್ಧಿಮತ್ತೆ ಕುರಿತು ಪರ-ವಿರೋಧ ಚರ್ಚೆಗಳು ನಡೆಯುತ್ತಿದೆ. ಚಿಂತನೆಗಳು ಆಯಾ ಕಾಲಕ್ಕೆ ತಕ್ಕಂತೆ ಬದಲಾಗುತ್ತವೆ. ಎಐ ಎಲ್ಲಾ ಕ್ಷೇತ್ರಗಳಲ್ಲೂ ಕಾಲಿರಿಸಿದ್ದು, ಬದುಕಿನ ಅನಿವಾರ್ಯತೆಯಾಗುತ್ತಿದೆ. ಆದರೆ ನಾವು ಕೃತಕ ಬುದ್ಧಿಮತ್ತೆಗೆ ಅಗತ್ಯವಾಗಿರಬೇಕೇ ಹೊರತು ಅದು ನಮಗೆ ಅಗತ್ಯವಾಗಿರಬಾರದು ಎಂಬುದು ಮುಖ್ಯ ಎಂದರು.

### ಮಾರುತಿ ಪ್ರೌಢಶಾಲೆಯಲ್ಲಿ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ 3 ತಿಂಗಳ ಕಾಲ ತರಬೇತಿ ಶಿಬಿರ

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಸಮಾಜಮುಖಿ ಕಾರ್ಯಗಳು ಸರ್ವರಿಗೂ ಪ್ರಯೋಜನ : ಶ್ರೀನಿವಾಸ್



**ದಾವಣಗೆರೆ :** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಮಾಜಮುಖಿ ಕಾರ್ಯಗಳು ಸರ್ವರಿಗೂ ಪ್ರಯೋಜನವಾಗಲಿದೆ ಎಂದು ಯೋಜನಾಧಿಕಾರಿ ಶ್ರೀನಿವಾಸ್ ತಿಳಿಸಿದರು.

ನಗರದ ಹದಡಿ ರಸ್ತೆಯಲ್ಲಿರುವ ಸರ್ಕಾರಿ ಮಾರುತಿ ಪ್ರೌಢಶಾಲೆಯ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ 3 ತಿಂಗಳ ಕಾಲ ತರಬೇತಿ ಶಿಬಿರ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಬಗ್ಗೆ ತಿಳುವಳಿಕೆ ನೀಡಿ ಎಸ್ಸೆಸ್ಸೆಲ್ಸಿಯಲ್ಲಿ ಉತ್ತಮ ಅಂಕ ಪಡೆಯುವ ಮೂಲಕ ಶಿಕ್ಷಕರು ಮಾರ್ಗದರ್ಶನ ನೀಡಲು ಕರೆ ನೀಡಿದರು.

ಶಾಲೆಯ ಮುಖ್ಯೋಪಾಧ್ಯಾಯ ಚಂದ್ರಶೇಖ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳದ ಪೂಜ್ಯ ದಂಪತಿಗಳು ಸಮಾಜಮುಖಿ ಕೆಲಸವನ್ನು ನಡೆಸುತ್ತಿರುವುದು ಪ್ರತಿಯೊಬ್ಬರಿಗೂ ಸಹಕಾರಿಯಾಗಿದೆ. ನಮ್ಮ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ತರಬೇತಿ ಶಿಬಿರ ಆಯೋಜಿಸಿರುವುದು ತುಂಬಾ ಪ್ರಯೋಜನಕಾರಿಯಾಗಿದೆ ಎಂದು ತಿಳಿಸಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೇಲ್ವಿಚಾರಕ ಶಿವಪ್ರಸಾದ, ಮಂಜುನಾಥ, ಎನ್. ವಿ. ಸತೀಶ್, ಜ್ಞಾನವಿಕಾಸ ಸಮನ್ವಯಾಧಿಕಾರಿ ಶ್ರೀಮತಿ ಶಾಮಲಾ, ಶಿಕ್ಷಕಿ ಪದ್ಮಶ್ರೀ, ಶಾಲೆಯ ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಷಣ್ಮುಖ ಸ್ವಾಗತಿಸಿದರು. ರವಿಕುಮಾರ ನಿರೂಪಿಸಿದರು.

## ಕೆಎಸ್‌ಆರ್‌ಟಿಸಿ ನಿಲ್ದಾಣ ಎದುರು ಸಂಚಾರ ದಟ್ಟಣೆ ತಡೆಗೆ ಮನವಿ

**ದಾವಣಗೆರೆ:** ದಾವಣಗೆರೆಯಲ್ಲಿ ದಿನೇ ದಿನೇ ಸಂಚಾರ ದಟ್ಟಣೆ ಹೆಚ್ಚಾಗುತ್ತಿದ್ದು ಇದನ್ನು ತಡೆಯಲು ಕ್ರಮವಹಿಸುವಂತೆ ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ನೊಂದ ಸಾರ್ವಜನಿಕರು ಮನವಿ ಸಲ್ಲಿಸಿದ್ದಾರೆ.

ದಾವಣಗೆರೆಯಲ್ಲಿ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಹತ್ತಿರ ಸಂಚಾರ ದಟ್ಟಣೆ ನೋಡಿದರೆ ಬೆಂಗಳೂರಿನಲ್ಲಿ ಕೂಡ ಈ ತೊಂದರೆ ಅನುಭವಿಸಲು ಸಾಧ್ಯವಿಲ್ಲ. ಯಾಕೆಂದರೆ ಬಸ್ ನಿಲ್ದಾಣ ಎದುರುಗಡೆ ಸಂಚಾರ ಪೊಲೀಸ್ ಠಾಣೆ ಇದೆ. ಇಲ್ಲಿ ಭರತ್ ಹೋಟೆಲ್‌ನವರು ರಸ್ತೆ ನುಂಗಿದ್ದಾ-ರೆ. ಬಂಡೆ ಹೋಟೆಲ್‌ನವರು ಫುಟ್ಪಾತ್



ನುಂಗಿದ್ದಾರೆ. ರಸ್ತೆ ಮಧ್ಯದಲ್ಲಿ ವಾಹನ ನಿಲ್ಲಿಸಿ, ತರಕಾರಿ ಮಾರುಕಟ್ಟೆಗೆ ಹೋಗುತ್ತಿದ್ದಾರೆ. ಇದರಿಂದ ಸಂಚಾರ ದಟ್ಟಣೆಯಿಂದ ದಾವಣಗೆರೆಗೆ ಬರುವ ಎಲ್ಲಾ ಸಾರ್ವಜನಿಕರಿಗೆ ವಿಪರೀತ ತೊಂದರೆಯಾಗುತ್ತಿದೆ. ಕೆಎಸ್‌ಆರ್‌ಟಿಸಿ ನಿಲ್ದಾಣದ ಎದುರು ಸುಗಮ ಸಂಚಾರಕ್ಕೆ ಹೋಟೆಲ್ ಮಾಲೀಕರಿಗೆ ಕ್ರಮ ಕೈಗೊಂಡು ತೆರವುಗೊಳಿಸಬೇಕಾಗಿ ವಿನಂತಿಸಿದ್ದಾರೆ.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ತಮ್ಮ ಹಣವನ್ನು ಇನ್ನೊಬ್ಬರಿಗೆ ನೀಡಲು ಇಷ್ಟಪಡುವುದಿಲ್ಲ ಆದರೆ ಇಂದು ನೀವು ಅಗತ್ಯವಿರುವವರಿಗೆ ಹಣವನ್ನು ಕೊಟ್ಟು ವಿಶ್ರಾಂತಿಯನ್ನು ಅನುಭವಿಸುವಿರಿ. ನಿಮ್ಮ ನಡೆಯಲ್ಲಿ ಉದಾರ ಮನೋಭಾವ ಹೊಂದಿರಿ ಮತ್ತು ನಿಮ್ಮ ಕುಟುಂಬದ ಸದಸ್ಯರ ಜೊತೆಗೆ ಉತ್ತಮವಾದ ಪ್ರೀತಿಯ ಕ್ಷಣಗಳನ್ನು ಕಳೆಯಿರಿ. ಮೊಂಬತ್ತಿ ಬೆಳಕಿನಲ್ಲಿ ಪ್ರೀತಿಪಾತ್ರರ ಜೊತೆ ಆಹಾರ ಹಂಚಿಕೊಳ್ಳುವುದು.

### ವೃಷಭ ರಾಶಿ

ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ-ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಏನಾದರೂ ಸರಿಪಡಿಸಲು ಹಾಗೂ ಸ್ನೇಹಿತರ ಜೊತೆ ಏನಾದರೂ ಕುತೂಹಲಕಾರಿ ಹಾಗೂ ಮನರಂಜನೀಯವಾದದ್ದನ್ನು ಮಾಡಲು ಒಂದು ಪರಿಪೂರ್ಣ ದಿನ.

### ಮಿಥುನ ರಾಶಿ

ವಿಜಯೋತ್ಸವವು ನಿಮಗೆ ಪ್ರಚಂಡ ಸಂತೋಷವನ್ನು ನೀಡುತ್ತದೆ. ನಿಮ್ಮ ಸಂತೋಷವನ್ನು ಅನುಭವಿಸಲು ನೀವಿದನ್ನು ನಿಮ್ಮ ಸ್ನೇಹಿತರ ಜೊತೆ ಹಂಚಿಕೊಳ್ಳಬಹುದು. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಮಕ್ಕಳು ಮತ್ತು ಕುಟುಂಬ ಇಂದು ನಿಮ್ಮ ಕೇಂದ್ರಬಿಂದುವಾಗಿರುತ್ತದೆ. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ

### ಕರ್ಕ ರಾಶಿ

ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆವರಿಸಬಹುದು. ಖಾಲಿ ಮೆದುಳು ದೆವ್ವಗಳ ಕಾರ್ಖಾನೆಯಾದ್ದರಿಂದ ದೈಹಿಕ ವ್ಯಾಯಾಮದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಲು ಪ್ರಯತ್ನಿಸಿ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು.

### ಸಿಂಹ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ನಿಮ್ಮ ಪ್ರೀತಿಯ ಜೀವನದಲ್ಲಿ ಕಹಿ ಘಟನೆಗಳನ್ನು ಕ್ಷಮಿಸಿ. ನೀವು ಕೆಲಸದಲ್ಲಿ ತುಂಬ ಒತ್ತಡ ಹೇರಿದಲ್ಲಿ ಕೋಪ ಹೆಚ್ಚಾಗುತ್ತದೆ. ಯಾವುದೇ ನಿರ್ಧಾರಗಳನ್ನು ತೆಗೆದುಕೊಳ್ಳುವ ಮೊದಲು ಇತರರರ ಅವಶ್ಯಕತೆಗಳನ್ನು ತಿಳಿಯಲು ಪ್ರಯತ್ನಿಸಿ. ಚಂದ್ರನ ಸ್ಥಿತಿಯನ್ನು ನೋಡಿದರೆ, ಇಂದು ನಿಮಗೆ ಸಾಕಷ್ಟು ಉಚಿತ ಸಮಯ ಸಿಗುತ್ತದೆ ಎಂದು ಹೇಳಬಹುದು

### ಕನ್ಯಾ ರಾಶಿ

ನಿಮ್ಮ ಭಾವನೆಗಳನ್ನು ವಿಶೇಷವಾಗಿ ಕೋಪವನ್ನು ನಿಯಂತ್ರಿಸಲು ಪ್ರಯತ್ನಿಸಿ. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ನೀವು ಇಂದು ನಿಮ್ಮ ಸಿಹಿಯಾದ ಪ್ರೀತಿಯ ಜೀವನದಲ್ಲಿನ ಉತ್ಕಟತೆಯನ್ನು ಆನಂದಿಸುತ್ತೀರಿ.

### ತುಲಾ ರಾಶಿ

ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ. ನಿಮ್ಮ ಜೊತೆಗಿರುವ ನಿಮ್ಮೊಂದಿಗೆ ಬಹಳ ಸಂತೋಷದಿಂದಿರುವುದಿಲ್ಲ ನೀವು ಅವರನ್ನು ಸಂತೋಷಗೊಳಿಸಲು ಏನೇ ಮಾಡಿದರೂ ಕೂಡ. ಕಳೆದ ಸಂತೋಷದ ನೆನಪುಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ.

### ವೃಶ್ಚಿಕ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಇಂದು ನೀವು ಸಲಹೆ ಕೊಟ್ಟರೆ ಅದನ್ನು ಸ್ವೀಕರಿಸಲೂ ಸಿದ್ಧವಾಗಿರಿ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ. ನೀವು ಪ್ರಮುಖ ಭೂಮಿ ಒಪ್ಪಂದಗಳನ್ನು ಮಾಡಲು ಹಾಗೂ ಮನರಂಜನಾ ಯೋಜನೆಗಳಿಗಾಗಿ ಅನೇಕರನ್ನು ಸಂಘಟಿಸುವ ಒಂದು ಸ್ಥಾನದಲ್ಲಿರುತ್ತೀರಿ.

### ಧನು ರಾಶಿ

ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ಇತರರಿಗೆ ನಿಮ್ಮ ಸಮಯ ನೀಡಲು ಒಳ್ಳೆಯ ದಿನ.

### ಮಕರ ರಾಶಿ

ಕ್ರೀಡೆಗಳು ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಪಾಲಕರು ಮತ್ತು ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸಲು ಅವರಿಗೆ ಸಾಧ್ಯವಾದದ್ದನ್ನೆಲ್ಲ ಮಾಡುತ್ತಾರೆ.

### ಕುಂಭ ರಾಶಿ

ನಿಮ್ಮ ಭಯವನ್ನು ಗುಣಪಡಿಸಲು ಇದು ಒಳ್ಳೆಯ ಸಮಯ. ಇದು ಭೌತಿಕ ಚೈತನ್ಯವನ್ನು ಕಡಿಮೆ ಮಾಡುವುದಲ್ಲದೇ ಜೀವಿತಾವಧಿಯನ್ನೂ ಕಡಿಮೆ ಮಾಡುತ್ತದೆ ಎಂದು ನೀವು ಅರ್ಥ ಮಾಡಿಕೊಳ್ಳಬೇಕು. ನಿಮ್ಮ ಜೀವನದ ಕಳಪೆ ಆರೋಗ್ಯದಿಂದಾಗಿ, ನಿಮ್ಮ ಹಣವನ್ನು ಇಂದು ಖರ್ಚು ಮಾಡಬಹುದು, ಆದರೆ ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ ಏಕೆಂದರೆ ಹಣವನ್ನು ಉಳಿಸಲಾಗಿದೆ ಇದರಿಂದ ಅದು ಕೆಟ್ಟ ಸಮಯದಲ್ಲಿ ನಿಮಗೆ ಉಪಯುಕ್ತವಾಗಿರುತ್ತದೆ.

### ಮೀನ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

# ವಲಯ ಅರಣ್ಯ ಅಧಿಕಾರಿಗಳ ನೂತನ ಕಚೇರಿ ಮತ್ತು ನೂತನ ವಸತಿಗೃಹ ಕಟ್ಟಡಕ್ಕೆ ಭೂಮಿ ಪೂಜೆ



**ಗದಗ :** ಕರ್ನಾಟಕ ಅರಣ್ಯ ಇಲಾಖೆ, ಕರ್ನಾಟಕ ಮೃಗಾಲಯ ಪ್ರಾಧಿಕಾರ ಹಾಗೂ ಪ್ರವಾಸೋದ್ಯಮ ಇಲಾಖೆ ಗದಗ ಇವರ ವತಿಯಿಂದ ಕಪ್ಪತ್ತಗುಡ್ಡ ಜೆಎಲ್‌ಆರ್ ಪ್ರಕೃತಿ ಶಿಬಿರದ ಶಂಕುಸ್ಥಾಪನೆ, ಗದಗದ ಮೃಗಾಲಯದ ಅಭಿವೃದ್ಧಿಗಾಗಿ ಭೂಸ್ವಾದೀನಪಡಿಸಿಕೊಂಡ ಭೂಮಿಯ ಶಂಕುಸ್ಥಾಪನೆ, ವಲಯ ಅರಣ್ಯ ಅಧಿಕಾರಿಗಳ ನೂತನ ಕಚೇರಿ ಮತ್ತು ನೂತನ ವಸತಿಗೃಹ , ಶಿಶುಗಳಿಗೆ ಹಾಲುಣಿಸುವ ಕೊಠಡಿ ಉದ್ಘಾಟನೆ ಕಾರ್ಯಕ್ರಮ ರವಿವಾರ ಗದುಗಿನ ಬಿಂಕದಕಟ್ಟಿಯಲ್ಲಿ ಜರುಗಿತು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು,

ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ. ಪಾಟೀಲ, ಅರಣ್ಯ ಸಚಿವರಾದ ಈಶ್ವರ ಖಂಡ್ರೆ, ಶಾಸಕರಾದ ಜಿ.ಎಸ್ ಪಾಟೀಲ, ರಾಜ್ಯ ವಿಧಾನಪರಿಷತ್ ಸದಸ್ಯರಾದ ಸಲೀಂ ಅಹಮದ್, ಗದಗ ಜಿಲ್ಲಾಧಿಕಾರಿಗಳಾದ ಸಿ.ಎನ್ ಶ್ರೀಧರ್ ಅವರು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಭಾನುವಳ್ಳಿ ವೈದ್ಯಕೀಯ ಮತ್ತು ರಕ್ತದಾನ ಶಿಬಿರ ನಿಮಿತ್ತ ಪೂರ್ವಭಾವಿ ಸಭೆ



**ಭಾನುವಳ್ಳಿ:** ಸ್ನೇಹ ಸಂಭ್ರಮ ಗೆಳೆಯರ ಬಳಗ ವತಿಯಿಂದ ಏಪ್ರಿಲ್ 12 ರಂದು ಭಾನುವಳ್ಳಿ ಹೈಸ್ಕೂಲ್ ಮೈದಾನದಲ್ಲಿ ನಡೆಯಲಿರುವ ವೈದ್ಯಕೀಯ ಶಿಬಿರ ಮತ್ತು ರಕ್ತದಾನ ಶಿಬಿರ ಅಂಗವಾಗಿ ಪ್ರಮುಖ ಮುಖಂಡರೊಂದಿಗೆ ನಿನ್ನೆ ಸಭೆ ನಡೆಸಲಾಯಿತು.

ಸಭೆಯಲ್ಲಿ ಕಾರ್ಯಕ್ರಮ ಸುಗಮವಾಗಿ ನಡೆಸಲು ವಿವಿಧ ವಿಷಯಗಳ ಕುರಿತು ಚರ್ಚಿಸಲಾಯಿತು. ಭಾನುವಳ್ಳಿಯ ಮುಖಂಡರು, ಈ ರೀತಿಯ ಶಿಬಿರಗಳು ಭಾನುವಳ್ಳಿಯ ಜನತೆಗೆ ಮತ್ತು ಸುತ್ತಮುತ್ತಲಿನ ಗ್ರಾಮಗಳ ಜನತೆಗೆ ಅತ್ಯಂತ ಉಪಯುಕ್ತವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಜಿಎಂ ವಿಶ್ವವಿದ್ಯಾಲಯದ ಪ್ಲೇಸ್ಮೆಂಟ್ ಇಲಾಖೆಯ ನಿರ್ದೇಶಕರು ಹಾಗೂ ಸ್ನೇಹ ಸಂಭ್ರಮ ಗೆಳೆಯರ ಬಳಗದ ಗೌರವ ಅಧ್ಯಕ್ಷ ತೇಜಸ್ವಿ ಕಟ್ಟಿಮನಿ ಟಿ.ಆರ್. ಮಾತನಾಡಿ, ವಿವಿಧ ವೈದ್ಯಕೀಯ ಸಂಸ್ಥೆಗಳು ಮತ್ತು ರಕ್ತದಾನ ಬ್ಯಾಂಕ್‌ಗಳ ಸಹಭಾಗಿತ್ವದ ಮೂಲಕ ಶಿಬಿರ ಯಶಸ್ವಿಯಾಗುವಂತೆ ಎಲ್ಲಾ ವ್ಯವಸ್ಥೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಸಭೆಯಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ವೆಂಕಟೇಶ್ ರೆಡ್ಡಿ ಹಾಗೂ ಗ್ರಾಮ ಪಂಚಾಯತ್ ಸದಸ್ಯರು ಭಾಗವಹಿಸಿದ್ದರು. ಕಣ್ಣಪ್ಪ, ಗುತ್ತೆಪ್ಪ, ನಾಗರಾಜ್, ಮಂಜುನಾಥ್, ನಿರಂಜನ್ ಮತ್ತು ಪ್ರಕಾಶ್ ಇನ್ನಿತರರು ತಮ್ಮ ಅಭಿಪ್ರಾಯವನ್ನು ಹಂಚಿಕೊಂಡರು.

ಸ್ನೇಹ ಸಂಭ್ರಮ ಗೆಳೆಯರ ಬಳಗದ ಅಧ್ಯಕ್ಷ ಶಿವಕುಮಾರ್, ವಿಶ್ವನಾಥ್, ರಾಮನಗೌಡ, ಪಕ್ಕಿರ, ಗಂಗಾಧರ ಮತ್ತು ಉಮೇಶ್ ಉಪಸ್ಥಿತರಿದ್ದರು.

# ಎಸ್ಸೆಸ್ಸೆಲ್ಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಲ್ಯಾಪ್ಟಾಪ್ ವಿತರಣೆ




**ದಾವಣಗೆರೆ:** ಕಳೆದ ಮಾರ್ಚ್ ತಿಂಗಳಲ್ಲಿ ನಡೆದ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ ಉಚಿತ ಲ್ಯಾಪ್ಟಾಪ್ ವಿತರಿಸಿದರು.

ಶಾಸಕರ ನಿವಾಸದಲ್ಲಿ ಶನಿವಾರ ವಿದ್ಯಾರ್ಥಿಗಳಿಗೆ ಲ್ಯಾಪ್ಟಾಪ್ ವಿತರಿಸಿ ಮಾತನಾಡಿದ ಶಾಸಕರು, ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆ ಇನ್ನು ಕೆಲವೇ ದಿನಗಳು ಮಾತ್ರ ಬಾಕಿ ಉಳಿದಿವೆ. ಎಸ್ಸೆಸ್ಸೆಲ್ಸಿ ತರಗತಿಯಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು ಪರೀಕ್ಷೆ ಬಗ್ಗೆ ಆಲಸ್ಯತನ ತೋರಿಸದೆ, ಈಗಿನಿಂದಲೇ ಪರೀಕ್ಷೆಯ ಕಡೆ ಹೆಚ್ಚು ಗಮನ ಕೊಟ್ಟು ತಯಾರಿ ಆರಂಭಿಸಬೇಕೆಂದು ಸಲಹೆ ನೀಡಿದರು.

ಇದೇ ಮಾ. 21ರಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆ ಆರಂಭವಾಗಲಿದೆ. ಎಸ್ಸೆಸ್ಸೆಲ್ಸಿ ಪರೀಕ್ಷೆಯು ಪ್ರತಿಯೊಬ್ಬ ವಿದ್ಯಾರ್ಥಿ ಜೀವನದ ಪ್ರಮುಖ ಘಟ್ಟವಾಗಿದೆ. ಪರೀಕ್ಷೆ ತಯಾರಿ ಆರಂಭಿಸಿರುವ ವಿದ್ಯಾರ್ಥಿಗಳು ಯಾವುದೇ ಆತಂಕ ಇಲ್ಲದೆ ಆತ್ಮವಿಶ್ವಾಸದಿಂದ ಹಬ್ಬದ ರೀತಿಯಲ್ಲಿ ಪರೀಕ್ಷೆ ಎದುರಿಸುವ ಮೂಲಕ ಉತ್ತಮ ಅಂಕಗಳನ್ನು ಪಡೆಯುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ದಕ್ಷಿಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಲತಾ, ಇಸಿಒ ಗೋವಿಂದರಾಜ್ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರಾಜ್ಯ ಬಜೆಟ್‌ನಲ್ಲಿ ಉತ್ತರ ಕರ್ನಾಟಕವನ್ನು ಸರ್ಕಾರ ನಿರ್ಲಕ್ಷಿಸಿದೆ: ವಿಜಯೇಂದ್ರ



**ಬೆಳಗಾವಿ:** ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರವು ರಾಜ್ಯ ಬಜೆಟ್‌ನಲ್ಲಿ ಉತ್ತರ ಕರ್ನಾಟಕವನ್ನು ನಿರ್ಲಕ್ಷಿಸಿದೆ ಎಂದು ಬಿಜೆಪಿ ಆರೋಪಿಸಿದ್ದು, ಸರ್ಕಾರಿ ಗುತ್ತಿಗೆ ಕಾಮಗಾರಿಯಲ್ಲಿ ಅಲ್ಪಸಂಖ್ಯಾತರಿಗೆ ಶೇ.4 ರಷ್ಟು ಮೀಸಲಾತಿಯನ್ನು ವಿರೋಧಿಸಿದೆ.

ಭಾನುವಾರ ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು, ಬಜೆಟ್ ಹಂಚಿಕೆಯಲ್ಲಿ ತಾರತಮ್ಯ ಮಾಡಲಾಗಿದ್ದು, ಉತ್ತರ ಕರ್ನಾಟಕವನ್ನು ನಿರ್ಲಕ್ಷಿಸಲಾಗಿದೆ. ಸರ್ಕಾರದ ಈ ಅನ್ಯಾಯವನ್ನು ಬಲವಾಗಿ ವಿರೋಧಿಸುತ್ತೇವೆಂದು ಹೇಳಿದ್ದಾರೆ.

ಮೀಸಲಾತಿ ವಿಚಾರವನ್ನು ಉಲ್ಲೇಖಿಸಿದ ಅವರು, ಸರ್ಕಾರಿ ಗುತ್ತಿಗೆಯಲ್ಲಿ ಅಲ್ಪಸಂಖ್ಯಾತರಿಗೆ ಶೇ.4ರಷ್ಟು ಮೀಸಲಾತಿಯನ್ನು ಪರಿಚಯಿಸುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿರ್ಧಾರವನ್ನು ಖಂಡಿಸಿದರು, ಇದು ಅಸಂವಿಧಾನಿಕ ಮತ್ತು ವಿಭಜಕ ಎಂದು ಕರೆದರು.

ಸರ್ಕಾರದ ಈ ಕ್ರಮವು ಧಾರ್ಮಿಕ ಸಮುದಾಯಗಳ ನಡುವೆ ಬಿರುಕುಗಳನ್ನು ಉಂಟುಮಾಡುತ್ತದೆ. ಈ ವಿಷಯವನ್ನು ವಿಧಾನಸಭೆಯಲ್ಲೆ ಪ್ರಸ್ತಾಪಿಸಲು ನಿರ್ಧರಿಸಲಾಗಿದ್ದು, ಇದರ ವಿರುದ್ಧ ಪ್ರತಿಭಟಿಸುತ್ತೇವೆಂದು ಹೇಳಿದರು.

ಬಿಜೆಪಿ ಅಧಿಕಾರಾವಧಿಯಲ್ಲಿ ಉತ್ತರ ಕರ್ನಾಟಕದ ನೀರಾವರಿ ಯೋಜನೆಗಳಿಗೆ ಸುಮಾರು 19,000 ಕೋಟಿ ರೂ. ಗಳನ್ನು ಹಂಚಿಕೆ ಮಾಡಲಾಗಿತ್ತು. ಆದರೆ, ಕಾಂಗ್ರೆಸ್ ಸರ್ಕಾರ ಈ ಯೋಜನೆಗಳನ್ನು ಸ್ಥಗಿತಗೊಳಿಸಿದೆ. ಈ ಪ್ರದೇಶದ ಅಭಿವೃದ್ಧಿಯನ್ನು ನಿರ್ಲಕ್ಷಿಸಿದೆ. ಕೃಷ್ಣಾ ನದಿ ಜಲಾನಯನ ಪ್ರದೇಶ ಅಭಿವೃದ್ಧಿಗೆ ವಾರ್ಷಿಕವಾಗಿ 10,000 ಕೋಟಿ ರೂ.ಗಳನ್ನು ಹಂಚಿಕೆ ಮಾಡುವ ಹಿಂದಿನ ಭರವಸೆಯನ್ನು ಈಡೇರಿಸುವಲ್ಲಿ ಸರ್ಕಾರ ವಿಫಲವಾಗಿದೆ. ಗ್ಯಾರಂಟಿ ಯೋಜನೆಗಳು ಅಗತ್ಯ ಅಭಿವೃದ್ಧಿ ಕಾರ್ಯಗಳ ಮೇಲೆ ಕರಿನೆರಳು ಬೀರಿದೆ ಎಂದು ಕಿಡಿಕಾರಿದರು.

ಇದೇ ವೇಳೆ ಬೆಳಗಾವಿ ನಗರ ನಿಗಮದ ಮೇಲೆ ಬಿಜೆಪಿ ಮತ್ತೆ ಹಿಡಿತ ಸಾಧಿಸಿರುವುದಕ್ಕೆ ಅಭಿನಂದನೆ ತಿಳಿಸಿದ ವಿಜಯೇಂದ್ರ ಅವರು, ನಗರದ ಅಭಿವೃದ್ಧಿಗೆ ಆದ್ಯತೆ ನೀಡಬೇಕು, ಎಲ್ಲಾ ಭಾಷೆ, ಸಮುದಾಯ ಮತ್ತು ಸಾಮಾಜಿಕ ಗುಂಪುಗಳ ಜನರೊಂದಿಗೆ ಒಗ್ಗೂಡಿ ಕೆಲಸ ಮಾಡಬೇಕೆಂದು ಒತ್ತಾಯಿಸಿದರು.

ಬೆಳಗಾವಿಯಲ್ಲಿ ಮರಾಠಿ ಮತ್ತು ಕನ್ನಡ ಸಮುದಾಯಗಳ ನಡುವಿನ ಸಾಮರಸ್ಯ ಹಾಳುಮಾಡಲು ಕೆಲವರು ಪ್ರಯತ್ನಿಸುತ್ತಿದ್ದಾರೆ. ಇದು "ಕ್ಷಮಿಸಲಾಗದ ಅಪರಾಧ" ರಾಜ್ಯ ಸರ್ಕಾರ ತಪ್ಪಿತಸ್ಥರ ??ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

# ಗ್ಯಾರಂಟಿ ಯೋಜನೆಗಳಿಗೆ ಅರ್ಥವಿಲ್ಲ: ಬಿ.ಎಸ್.ಯಡಿಯೂರಪ್ಪ



**ಬೆಂಗಳೂರು:** ಗ್ಯಾರಂಟಿ ಯೋಜನೆಗಳು ನಿಷ್ಪರಿಣಾಮಕಾರಿ ಮತ್ತು ಅರ್ಥಹೀನ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ತುಘಲಕ್ ದರ್ಬಾರ್ ನಡೆದಿದೆ. ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಅರ್ಥವಿಲ್ಲ. ಜನರನ್ನು ತೃಪ್ತಿಪಡಿಸಲು ಜಾರಿಗೆ ತಂದ ಯಾವ ಯೋಜನೆಗಳೂ ಕಾರ್ಯರೂಪಕ್ಕೆ ಬರುತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.

ಮತದಾರರನ್ನು ಆಕರ್ಷಿಸಲು ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ, ಇದರಿಂದ ಯಾವುದೇ ಪ್ರಯೋಜನಗಳಾಗಿಲ್ಲ ಎಂದು ಹೇಳಿದರು.

ಉತ್ತರ ಕರ್ನಾಟಕದ ಅಭಿವೃದ್ಧಿಗೆ ಆದ್ಯತೆ ನೀಡುವಲ್ಲಿ ಸರ್ಕಾರ ವಿಫಲವಾಗಿದೆ. ಅಲ್ಪಸಂಖ್ಯಾತರಿಗೆ ಶೇಕಡಾ 4 ರಷ್ಟು ಮೀಸಲಾತಿ ನೀಡುವ ಸರ್ಕಾರದ ನಿರ್ಧಾರವು ಅನ್ಯಾಯುತವಾದದ್ದು ಎಂದು ಆರೋಪಿಸಿದರು.

ರಾಜ್ಯದಲ್ಲಿ ಬಿಜೆಪಿ ಪರ ಅಲೆ ಹೆಚ್ಚುತ್ತಿದ್ದು, ಮುಂಬರುವ ಚುನಾವಣೆಯಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಈ ಗುರಿ ಸಾಧಿಸಲು ಪಕ್ಷವು ಪ್ರಾಮಾಣಿಕ ಮತ್ತು ಒಗ್ಗಟ್ಟಿನ ಪ್ರಯತ್ನಗಳನ್ನು ಮಾಡುತ್ತದೆ ಎಂದು ತಿಳಿಸಿದರು.

# ಕೇಂದ್ರದ ತಪ್ಪು ನೀತಿಗಳಿಂದಾಗಿ ಶೇ.50 ರಷ್ಟು ಶಿಕ್ಷಕರ ಹುದ್ದೆಗಳು ಖಾಲಿಯಾಗಿವೆ: ಮಲ್ಲಿಕಾರ್ಜುನ ಖರ್ಗೆ



**ಗದಗ:** ಕೇಂದ್ರ ಸರ್ಕಾರವು ಶಿಕ್ಷಣಕ್ಕೆ ಆದ್ಯತೆ ನೀಡುತ್ತಿಲ್ಲ, ಇದರಿಂದಾಗಿ ಕೇಂದ್ರೀಯ ವಿದ್ಯಾಲಯಗಳು ಮತ್ತು ಕೇಂದ್ರೀಯ ವಿಶ್ವವಿದ್ಯಾಲಯಗಳಲ್ಲಿ ಶೇ.50 ರಷ್ಟು ಶಿಕ್ಷಕರ ಹುದ್ದೆಗಳು ಖಾಲಿಯಾಗಿವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಾನುವಾರ ಆರೋಪಿಸಿದರು.

ನಗರದಲ್ಲಿ ಭಾನುವಾರ ನಡೆದ ಕೆ.ಎಚ್.ಪಾಟೀಲ ಜನ್ಮಶತಮಾನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನವೋದಯ, ಕೇಂದ್ರೀಯ ವಿದ್ಯಾಲಯ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಶೇ 50ರಷ್ಟು ಹುದ್ದೆಗಳು ಖಾಲಿ ಉಳಿದಿವೆ. ಇಂಥ ಪರಿಸ್ಥಿತಿಯಲ್ಲಿ ಬಡಮಕ್ಕಳು ಉತ್ತಮ ಶಿಕ್ಷಣ ಪಡೆದು ಕೇಂದ್ರೀಯ ವಿಶ್ವವಿದ್ಯಾಲಯ, ಐಐಟಿ, ಐಐಎಂಗಳಲ್ಲಿ ಓದಲು ಸಾಧ್ಯವೇ ಎಂದು ಪ್ರಶ್ನಿಸಿದರು.ಹೈದರಾಬಾದ್-ಕರ್ನಾಟಕದಲ್ಲಿ 37,000 ಹುದ್ದೆಗಳು ಖಾಲಿ ಇವೆ. ನಮ್ಮ ಮಕ್ಕಳಿಗೆ ಶಿಕ್ಷಣ ನೀಡಲು ಶಿಕ್ಷಕರಿಲ್ಲದಿದ್ದರೆ, ಮಕ್ಕಳು ಪ್ರಗತಿ ಹೊಂದುವುದಾದರೂ ಹೇಗೆ? ದೇಶದಲ್ಲಿ, ನವೋದಯ ವಿಶ್ವವಿದ್ಯಾಲಯದಲ್ಲಿ 40,000, ಕೇಂದ್ರೀಯ ವಿದ್ಯಾಲಯಗಳಲ್ಲಿ 7,400 ಮತು ವಿಶ್ವವಿದ್ಯಾಲಯಗಳಲ್ಲಿ 5,400 ಹುದ್ದೆಗಳು ಖಾಲಿ ಇವೆ. ಇದಲ್ಲದೆ, ದೇಶಾದ್ಯಂತ ಸುಮಾರು 90,000 ಸರ್ಕಾರಿ ಶಾಲೆಗಳು ಮುಚ್ಚಲ್ಪಟ್ಟಿವೆ, ಅವುಗಳಲ್ಲಿ 50,000 ಸರ್ಕಾರಿ ಶಾಲೆಗಳು ಉತ್ತರ ಪ್ರದೇಶ ಮತ್ತು ಬಿಹಾರದಲ್ಲಿವೆ.

# ಹಿಂದುತ್ವದಿಂದ ದೂರ ಸರಿದಿರುವ BJPಯನ್ನು ಮತ್ತೆ ಹಿಂದುತ್ವಕ್ಕೆ ಮರಳಿ ತರುತ್ತೇವೆ, ಹೊಸ ಪಕ್ಷ ಕಟ್ಟಲ್ಲ: ಯತ್ನಾಳ್



**ವಿಜಯಪುರ:** ಹಿಂದುತ್ವದಿಂದ ದೂರ ಸರಿದಿರುವ ಬಿಜೆಪಿಯನ್ನು ಮತ್ತೆ ಹಿಂದುತ್ವಕ್ಕೆ ಮರಳಿ ತರುತ್ತೇವೆ. ಹೊಸ ಪಕ್ಷ ಕಟ್ಟುವುದಿಲ್ಲ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಭಾನುವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಾದೇಶಿಕ ಪಕ್ಷ ಹುಟ್ಟುಹಾಕುವ ಚಿಂತನೆಗಳಿವೆ ಎಂಬ ಸುದ್ದಿಯಲ್ಲಿ ಯಾವುದೇ ಸತ್ಯವಿಲ್ಲ. ನಾವು ಹೊಸ ಪಕ್ಷವನ್ನು ಕಟ್ಟುವುದಿಲ್ಲ. ಬದಲಿಗೆ ಹಿಂದುತ್ವದಿಂದ ದೂರ ಸರಿದಿರುವ ಬಿಜೆಪಿಯನ್ನು ಮತ್ತೆ ಹಿಂದುತ್ವಕ್ಕೆ ಮರಳಿ ತರುತ್ತೇವೆಂದು ಹೇಳಿದರು.

ಮಧ್ಯಪ್ರದೇಶ, ದೆಹಲಿ, ಆಸ್ಸಾಂ, ಮಹಾರಾಷ್ಟ್ರ, ರಾಜಸ್ಥಾನ, ಗುಜರಾತ್ ಸೇರಿದಂತೆ ಎಲ್ಲ ರಾಜ್ಯಗಳಲ್ಲೂ ಬಿಜೆಪಿ ಹಿಂದುತ್ವದ ಆಧಾರದ ಮೇಲೆ ಅಧಿಕಾರಕ್ಕೆ ಬಂದಿದೆ. ಮುಂದೆ ಕರ್ನಾಟಕದಲ್ಲೂ ಬಿಜೆಪಿ ಹಿಂದುತ್ವದ ಆಧಾರದ ಮೇಲೆ ಅಧಿಕಾರಕ್ಕೆ ಬರಲಿದೆ. ಹಿಂದುತ್ವದ ಪರ ಗಟ್ಟಿಯಾಗಿ ಮಾತನಾಡುವ ನಾಯಕರನ್ನು ಪಕ್ಷ ಗುರುತಿಸಬೇಕಿದೆ ಎಂದು ತಿಳಿಸಿದರು.

ನಮಗೆ ಪ್ರಧಾನಿ ಮೋದಿ, ಬಿಜೆಪಿ ಮೇಲೆ ವಿಶ್ವಾಸ ಇದೆಯೇ ಹೊರತು ಯಡಿಯೂರಪ್ಪ, ವಿಜಯೇಂದ್ರ ಮೇಲೆ ಇಲ್ಲ. ಯತ್ನಾಳ ಏನು, ವಿಜಯೇಂದ್ರ ಏನು ಎಂಬುದು ಮೇಲಿನವರಿಗೆ ಗೊತ್ತಾಗಿದೆ. ಯತ್ನಾಳನನ್ನು ಹೊರಹಾಕಲು ಆಗುವುದಿಲ್ಲ ಎಂಬುದು ವಿಜಯೇಂದ್ರ ಬಣದವರಿಗೆ ಗೊತ್ತಾಗಿದೆ. ಮುಂದೆ ಯತ್ನಾಳ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಆದರೆ ಕಷ್ಟವಾಗುತ್ತದೆ ಎಂಬ ಕಾರಣಕ್ಕೆ ರೇಣುಕಾಚಾರ್ಯ ಅವರು ನನ್ನ ಬಗ್ಗೆ ಮೃದುವಾಗಿದ್ದಾರೆಂದು ಲೇವಡಿ ಮಾಡಿದರು.

# KPCC ಅಧ್ಯಕ್ಷ ಸ್ಥಾನದಿಂದ ಶೀಘ್ರವೇ ಮುಕ್ತನಾಗುತ್ತೇನೆ, ಕಾಯಿರಿ: ಸಂಚಲನ ಮೂಡಿಸಿದ ಡಿ. ಕೆ ಶಿವಕುಮಾರ್ ಹೇಳಿಕೆ



**ಬೆಂಗಳೂರು:** ನಾನು ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಮುಕ್ತನಾಗುತ್ತೇನೆ, ಕಾಯಿರಿ ಎಂದು ಡಿಕೆ ಶಿವಕುಮಾರ್ ನೀಡಿರುವ ಹೇಳಿಕೆ ಕಾಂಗ್ರೆಸ್‌ನಲ್ಲಿಈಗ ಬಿಸಿ ಬಿಸಿ ಚರ್ಚೆಗೆ ಗ್ರಾಸವಾಗಿದೆ.ಕೆಪಿಸಿಸಿ ಕಚೇರಿಯಲ್ಲಿ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು, ಡಿಸಿಸಿ ಅಧ್ಯಕ್ಷರು, ಮುಂಚೂಣಿ ಘಟಕ ಹಾಗೂ ಸೆಲ್ ವಿಭಾಗಗಳ ಅಧ್ಯಕ್ಷರೊಂದಿಗೆ ಡಿಕೆಶಿ ಸಭೆ ನಡೆಸಿ ಪಕ್ಷದ ಬಲವರ್ಧನೆ ಹಾಗೂ ಮುಂದೆ ಕೈಗೊಳ್ಳಬೇಕಿರುವ ಕಾರ್ಯಕ್ರಮಗಳ ಕುರಿತು ಚರ್ಚೆ ನಡೆಸಿದರು. ಈ ಸಭೆಯಲ್ಲಿ ಡಿಕೆಶಿ ಯಾರೂ ಬೇಕಾದರೂ ಕೆಪಿಸಿಸಿ ಜವಾಬ್ದಾರಿ ತೆಗೆದುಕೊಳ್ಳಬಹುದು ಎಂದು ಹೇಳುವ ಮೂಲಕ ಪವರ್ ಶೇರ್ ಗೇಮ್ ಗೆ ಚಾಲನೆ ನೀಡಿದ್ದಾರೆ,ಸಭೆಯಲ್ಲಿ ಕೆಪಿಸಿಸಿ ಪದಾಧಿಕಾರಿಯೊಬ್ಬರು ಜಿಲ್ಲಾ ಮಟ್ಟದಲ್ಲಿ ಎರಡು ಹುದ್ದೆಗಳ ಬಗ್ಗೆ ಪ್ರಸ್ತಾಪ ಮಾಡಿದರು. ಆಗ ಅಲ್ಲಿಯೇ ಇದ್ದ ಡಿಕೆಶಿ ತಕ್ಷಣವೇ, ನೋಡ್ರಪ್ಪ, ಸಮಯ, ಸಂದರ್ಭ ನೋಡಿಕೊಂಡು ನಮ್ ಪಾರ್ಟಿಯಲ್ಲಿ ಹಂಗೆ ಆಗುತ್ತೆ. ಖರ್ಗೆ ಸಾಹೇಬ್ರು ಎಐಸಿಸಿ ಅಧ್ಯಕ್ಷರು, ರಾಜ್ಯಸಭೆ ವಿರೋಧ ಪಕ್ಷದ ನಾಯಕರಾಗಿದ್ದಾರೆ. ನಾನು ಕೆಪಿಸಿಸಿ ಅಧ್ಯಕ್ಷ, ಡಿಸಿಎಂ, ಎರಡು ಖಾತೆ ಕೂಡ ನಿರ್ವಹಿಸ್ತಿದ್ದೇನೆ ಎಂದು ತಿಳಿಸಿದರು. ಮುಂದುವರಿದು, 100 ಕಾಂಗ್ರೆಸ್ ಕಚೇರಿಗಳ ಶಂಕುಸ್ಥಾಪನೆ ಬಳಿಕ ನಾನು ಮುಕ್ತನಾಗುತ್ತೇನೆ. ಬೇರೆಯವರು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಜವಾಬ್ದಾರಿ ವಹಿಸಿಕೊಳ್ಳಲಿ ಎಂದು ಹೇಳಿದರು.ಸಭೆಯಲ್ಲಿ ಕೆಪಿಸಿಸಿ ಪದಾಧಿಕಾರಿಯೊಬ್ಬರು ಜಿಲ್ಲಾ ಮಟ್ಟದಲ್ಲಿ ಎರಡು ಹುದ್ದೆಗಳ ಬಗ್ಗೆ ಪ್ರಸ್ತಾಪ ಮಾಡಿದರು. ಆಗ ಅಲ್ಲಿಯೇ ಇದ್ದ ಡಿಕೆಶಿ ತಕ್ಷಣವೇ, ನೋಡ್ರಪ್ಪ, ಸಮಯ, ಸಂದರ್ಭ ನೋಡಿಕೊಂಡು ನಮ್ ಪಾರ್ಟಿಯಲ್ಲಿ ಹಂಗೆ ಆಗುತ್ತೆ. ಖರ್ಗೆ ಸಾಹೇಬ್ರು ಎಐಸಿಸಿ ಅಧ್ಯಕ್ಷರು, ರಾಜ್ಯಸಭೆ ವಿರೋಧ ಪಕ್ಷದ ನಾಯಕರಾಗಿದ್ದಾರೆ. ನಾನು ಕೆಪಿಸಿಸಿ ಅಧ್ಯಕ್ಷ, ಡಿಸಿಎಂ, ಎರಡು ಖಾತೆ ಕೂಡ ನಿರ್ವಹಿಸ್ತಿದ್ದೇನೆ ಎಂದು ತಿಳಿಸಿದರು. ಮುಂದುವರಿದು, 100 ಕಾಂಗ್ರೆಸ್ ಕಚೇರಿಗಳ ಶಂಕುಸ್ಥಾಪನೆ ಬಳಿಕ ನಾನು ಮುಕ್ತನಾಗುತ್ತೇನೆ. ಬೇರೆಯವರು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಜವಾಬ್ದಾರಿ ವಹಿಸಿಕೊಳ್ಳಲಿ ಎಂದು ಹೇಳಿದರು. ಕಾಂಗ್ರೆಸ್ ನಿಯಮದ ಪ್ರಕಾರ ಒಬ್ಬರಿಗೆ ಒಂದು ಹುದ್ದೆ ಮಾತ್ರ ಸಿಗಬೇಕು. ಸದ್ಯ ಡಿಕೆಶಿ ಡಿಸಿಎಂ ಜೊತೆಗೆ ಕಾಂಗ್ರೆಸ್ ಅಧ್ಯಕ್ಷರಾಗಿದ್ದಾರೆ. ಈ ಹಿಂದೆಯೇ ಪಕ್ಷದ ಒಳಗಡೆಯೇ ಅಧ್ಯಕ್ಷ ಸ್ಥಾನ ಮತ್ತು ಡಿಸಿಎಂ ಎರಡನ್ನೂ ನಿಭಾಯಿಸುತ್ತಿರುವುದಕ್ಕೆ ಅಪಸ್ವರ ಎದ್ದಿತ್ತು. ಈಗ ಡಿಕೆಶಿ ಅವರೇ ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಮುಕ್ತನಾಗುತ್ತೇನೆ, ಕಾಯಿರಿ ಎಂದು ಹೇಳುವ ಮೂಲಕ ಪಕ್ಷದಲ್ಲಿ ಸಂಚಲನ ಮೂಡಿಸಿದ್ದಾರೆ.

# ಗ್ಯಾರಂಟಿ ಯೋಜನೆ ಬಳಕೆಯಲ್ಲಿ ಜಿಲ್ಲೆ ಪ್ರಥಮ ಸ್ಥಾನ : ಶಿವಾನಂದಸ್ವಾಮಿ

**ಚಿಕ್ಕಮಗಳೂರು :** ಪಂಚಗ್ಯಾರಂಟಿ ಯೋಜನೆ ಸದ್ಬಳಕೆಯಲ್ಲಿ ಜಿಲ್ಲೆ ಪ್ರಥಮ ಸ್ಥಾನದಲ್ಲಿದ್ದು,ಪ್ರಥಮ ಸ್ಥಾನದಿಂದ ಕೈಜಾರ–ದಂತೆ ವಿವಿಧ ಇಲಾಖೆ ಅಧಿಕಾರಿ ವೃಂದದೊಂದಿಗೆ ಸಭೆ ನಡೆಸಿ ಸಾಧಕ–ಬಾಧಕ ಚರ್ಚಿಸಲಾಗುತ್ತಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿಯ ಗ್ಯಾರಂಟಿ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಇಂದು ಅವರು ಮಾತನಾಡಿದರು.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆ ಯಶಸ್ವಿಯಾದ ಹಿನ್ನೆಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ರಾಜ್ಯ ಸರ್ಕಾರ 51 ಸಾವಿರ ಕೋಟಿ ರೂ.ಗಳನ್ನು ಗ್ಯಾರಂಟಿಗೆ ಮೀಸಲಿಟ್ಟು ಬಹುದೊಡ್ಡ ತೀರ್ಮಾನ ಕೈಗೊಂಡಿದೆ. ಅಲ್ಲದೇ ಜಿಲ್ಲೆಯ ಪ್ರತಿ ತಾಲ್ಲೂಕು ಮಟ್ಟದಲ್ಲೂ ಅಧ್ಯಕ್ಷರು ಸಭೆಗಳನ್ನು ನಡೆಸಿ ಜನಸಾಮಾನ್ಯರಿಗೆ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳ ಕುರಿತು ಮಾಹಿತಿ ನೀಡುತಿದ್ದಾ–ರೆ ಎಂದು ತಿಳಿಸಿದರು.

ಜಿಲ್ಲೆಯಾದ್ಯಂತ ಏಪ್ರೀಲ್ 2024ರ ರಿಂದ 2025 ವರೆಗೆ ಗೃಹಲಕ್ಷ್ಮಿ ಯೋಜನೆಯಡಿ 2,70,273 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದು ಒಟ್ಟು ರೂ. 52,25,18,000 ಗಳನ್ನು ನೇರವಾಗಿ ಫಲಾನುಭವಿಗಳ ಖಾತೆಗೆ ವರ್ಗಾಹಿಸಲಾಗಿದೆ. ಎಂದ ಅವರು ವಿವಿಧ ತಾಂತ್ರಿಕ ಸಮಸ್ಯೆಗಳಿಂದ ಬಾಕಿ ಇರುವ ಫಲಾನುಭವಿಗಳಿಗೆ ಹಣ ವರ್ಗಾಹಿಸಲು ಅಗತ್ಯಕ್ರಮವಹಿಸಿ ಎಂದರು.

ಶಕ್ತಿ ಯೋಜನೆಯು ಮಹಿಳಾ ಸಬಲೀಕರಣದ ಮಹತ್ವದ ಯೋಜನೆಯಾಗಿದ್ದು, ಈ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಒಟ್ಟು 3,64,99,536ಅಭ್ಯರ್ಥಿಗಳು ಉಚಿತವಾಗಿ ಪ್ರಯಾಣಿಸುವ ಮೂಲಕ ಯೋಜನೆಯ ಸೌಲಭ್ಯ ಪಡೆದಿದ್ದಾರೆ.

ನಿರುದ್ಯೋಗ ಸಮಸ್ಯೆ ಹೋಗಲಾಡಿಸುವ ಉದ್ದೇಶದಿಂದ ಜಾರಿಗೆ ತಂದಿರುವ ಯುವನಿಧಿ ಯೋಜನೆಯಡಿ ಜಿಲ್ಲೆಯಾದ್ಯಂತ ಒಟ್ಟು 3,935 ನೋಂದಾಯಿತ ಫಲಾನುಭವಿಗಳು ಒಟ್ಟು 4,70,95,500 ಯೋಜನೆಯ ಲಾಭ ಪಡೆದಿದ್ದಾರೆ ಎಂದ ಅವರು ಪ್ರತಿ ತಿಂಗಳು ಸಾರ್ವಜನಿಕರನ್ನೊಳಗೊಂಡ ಸಭೆ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಿ ವಿವಿಧ ತಾಂತ್ರಿಕ ದೋಷಗಳಿಂದ ಪಂಚಗ್ಯಾರಂಟಿ ಯೋಜನೆಯಿಂದ ವಂಚಿತರಾಗಿರುವವರನ್ನು ಗುರುತಿಸಿ ಅರ್ಹರಿಗೆ ಯೋಜನೆಯ ಫಲ ದೊರಕುವಂತೆ ಕ್ರಮವಹಿಸಿ ಎಂದರು. ಜಿಲ್ಲೆಯಲ್ಲಿ ಒಟ್ಟು 2,59,634 ಪಡಿತರ ಚೀಟಿದಾರರಿದ್ದಾರೆ ಇವುಗಳಲ್ಲಿ 2,49,481 ಪಡಿತರ ಚೀಟಿಗಳು ಡಿಬಿಟಿ ಯೋಜನೆಗೆ ಅರ್ಹವಾಗಿದೆ. ಮಾರ್ಚ್ ತಿಂಗಳಿಂದ ಫೆಬ್ರವರಿ ಹಾಗೂ ಈ ತಿಂಗಳ ಪಡಿತರವನ್ನು ಹಣದ ಬದಲಾಗಿ ಪ್ರತಿ ವ್ಯಕ್ತಿಗೆ 10 ಕೆ.ಜಿ ಅಕ್ಕಿ ವಿತರಿಸಲು ಸರ್ಕಾರ ಮುಂದಾಗಿದೆ,



ಯಾವ ಯಾವ ಪಡಿತರದಾರರಿಗೆ ಅನ್ನಭಾಗ್ಯ ಯೋಜನೆಯ ಹಣ ವರ್ಗಾವಣೆಯಾಗಿಲ್ಲ ಅಂತಹ ಪಡಿತರದಾರರ ಹಾಗೂ ಅವರುಗಳು ಯಾವ ನ್ಯಾಯಬೆಲೆ ಅಂಗಡಿ ವ್ಯಾಪ್ತಿಗೆ ಬರುತ್ತಾರೆಂಬ ಮಾಹಿತಿಯನ್ನು ಆಯಾ ಭಾಗದ ಪ್ರಾಧಿಕಾರದ ಪ್ರತಿನಿಧಿಗಳಿಗೆ ನೀಡಬೇಕು, ಪ್ರತಿನಿಧಿಗಳಿಗೆ ಯೋಜನೆ ಸಂಬಂಧ ಸಹಕರಿಸುವಂತೆ ಆಹಾರ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಮಾಹಿತಿಯನ್ನು ಜಿಲ್ಲೆಯ ಪ್ರತಿ ನಾಗರೀಕರಿಗೂ ತಲುಪಿಸಲು ಕಾರ್ಯಕ್ರಮಗಳನ್ನು ಆಯೋಜಿಸಿ ವ್ಯಾಪಕ ಪ್ರಚಾರ ಮಾಡಿ ಅರಿವು ಮೂಡಿಸಲಾಗುತ್ತಿದೆ. ಯುವ ಜನತೆಗೆ ಉದ್ಯೋಗ ಸೃಷ್ಠಿಸಿ ಹಾಗೂ ಸ್ವಾವಲಂಭಿ ಬದುಕು ನಿರ್ಮಿಸಿಕೊಡುವ ಉದ್ದೇಶದಿಂದ ಆಸಕ್ತಿ ಇರುವ ಕ್ಷೇತ್ರಗಳಲ್ಲಿ ತರಬೇತಿ ನೀಡಿ ನಿರುದ್ಯೋಗ ಸಮಸ್ಯೆಯನ್ನು ಹೋಗಲಾಡಿಸಲು ಕ್ರಮವಹಿಸಲಾಗುತ್ತಿದೆ ಎಂದ ಅವರು ಸಾರ್ವಜನಿಕ ಸ್ಥಳಗಳಲ್ಲಿ ಭಿತ್ತಿ ಪತ್ರಗಳು ಹಾಗೂ ಬ್ಯಾನರ್‌ಗಳನ್ನು ಅಳವಡಿಸಿ ಯೋಜನೆಗಳ ಕುರಿತು ಅರಿವು ಮೂಡಿಸಲಾಗುತ್ತಿದೆ ಎಂದರು.

. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,11,409 ಫಲಾನುಭವಿಗಳಿದ್ದು ಒಟ್ಟು 118,293,960 ರೂಗಳಷ್ಟು ವೆಚ್ಚ ಭರಿಸಲಾಗಿದೆ. 3,53,190 ಅರ್ಹಫಲಾನುಭವಿಗಳಿದ್ದಾರೆ.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಸಮಿತಿ ಉಪಾಧ್ಯಕ್ಷರು, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಆಯ್ಕೆಯಾದ ಪುಸ್ತಕಗಳ ಪಟ್ಟಿ ಬಿಡುಗಡೆ

**ಚಿಕ್ಕಮಗಳೂರು: ಮಾ.17:** 2021ನೇ ಸಾಲಿನಲ್ಲಿ ಮುದ್ರಣವಾಗಿ ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಯಲ್ಲಿ ಆಯ್ಕೆಯಾದ ಪುಸ್ತಕಗಳ ಪಟ್ಟಿಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಂತರ್ಜಾಲ www.dpl.karnataka.gov.in ವೆಬ್ ಸೈಟ್‌ನಲ್ಲಿ ಮಾರ್ಚ್ 15. ರಂದು ಪ್ರಕಟಿಸಲಾಗಿದೆ.

ಪ್ರಯುಕ್ತ, ಲೇಖಕರು, ಪ್ರಕಾಶಕರು ಪುಸ್ತಕ ಸರಬರಾಜುದಾರರು ತಾವುಗಳು ಸಲ್ಲಿಸಿರುವ ಪುಸ್ತಕಗಳ ಮಾಹಿತಿಯನ್ನು ಪರಿಶೀಲಿಸಿ ಯಾವುದೇ ಆಕ್ಷೇಪಣೆಗಳಿದ್ದರೆ ಮಾರ್ಚ್ 18 ರೊಳಗೆ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯಗೋಪುರ, 4ನೇ ಮಹಡಿ, ಅಂಬೇಡ್ಕರ್ ವೀದಿ, ಬೆಂಗಳೂರು 560001 ಇಲ್ಲಿಗೆ ಲಿಖಿತವಾಗಿ ಅಥವಾ dpl_dir_acts@yahoo.co.in ಇ–ಮೇಲ್ ಮುಖಾಂತರ ಸಲ್ಲಿಸಬಹುದಾಗಿದೆ.

## ಸಂಭ್ರಮದ ಬೆನಕೇಶ್ವರ ಸ್ವಾಮಿ ತಿರುಗಣಿ ರಥೋತ್ಸವ

**ಸಾಸ್ವೆಹಳ್ಳಿ:** ಹೊಬಳಿಯ ಬೆನಕನಹಳ್ಳಿ ಗ್ರಾಮದ ಬೆನಕೇಶ್ವರ ಸ್ವಾಮಿಯ ತಿರುಗಣಿ ರಥೋತ್ಸವ ಭಾನುವಾರ ಬೆಳಗ್ಗೆ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ನಡೆಯಿತು.

ಭಕ್ತರು ರಥವನ್ನು ಕನಕಾಂಬರ, ಸೇವಂತಿಗೆ, ಜಾಜಿ ಮಲ್ಲಿಗೆ ಹಾಗೂ ಆಳೇತ್ತರದ ಹೂವು ಭಕ್ತರನ್ನು ಸೂಜಿಗಲ್ಲಿನಂತೆ ಸೆಳೆಯುತ್ತಿದ್ದವು.

ಚಿಕ್ಕಬಾಸೂರು ಬಸವೇಶ್ವರಸ್ವಾಮಿ, ಗ್ರಾಮದ ಬೆನಕೇಶ್ವರ ಸ್ವಾಮಿ ರಥಾರೋಹಣ ಮಾಡುತ್ತಿದ್ದಂತೆ ನಾಡಿನ ವಿವಿಧೆಡೆಗಳಿಂದ ಆಗಮಿಸಿದ ಭಕ್ತರು ರಥವನ್ನು ಎಳೆದರು. ಹಣ್ಣು,ಕಾಯಿ ಒಡೆಸಿ ಸಕಲ ಇಷ್ಟಾರ್ಥಗಳ ನೆರವೇರಿಸಲಿ ಹಾಗೂ ಮಳೆ,ಬೆಳೆ ಸಮೃದ್ಧಿಯಾಗಲೆಂದು ದೇವರಲ್ಲಿ ಬೇಡಿಕೊಂಡರು. ರಥೋತ್ಸವದ ನಂತರ ಗ್ರಾಮದ ಆಂಜನೇಯ, ಬೀರಪ್ಪ, ಕರಿಯಮ್ಮ, ದುರ್ಗಮ್ಮ ದೇವಿ ಉತ್ಸವ ನಡೆಸಿ ಮೂರ್ತಿಗಳನ್ನು ಬೇನಕೇಶ್ವರ ದೇವಸ್ಥಾನದಲ್ಲಿ ಪ್ರತಿಷ್ಠಾಪಿಸಿದರು. ಭಕ್ತರಿಗೆ ಪ್ರಸಾದ, ಪಾನಕ ವ್ಯವಸ್ಥೆ ಮಾಡಿದ್ದರು. ಗ್ರಾಮದ ಹಲವು ಮಕ್ಕಳಿಗೆ ಜವಳ ಕಾರ್ಯಕ್ರಮ ನಡೆಯಿತು.




## ಮಾ.19ರಂದು ವಿಶ್ವ ಗ್ರಾಹಕರ ದಿನಾಚರಣೆ

**ಚಿತ್ರದುರ್ಗ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಕಾನೂನು ಮಾಪನಾ ಶಾಸ್ತ್ರ ಇಲಾಖೆ ಹಾಗೂ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಸಹಯೋಗದಲ್ಲಿ "ವಿಶ್ವ ಗ್ರಾಹಕರ ದಿನಾಚರಣೆ"ಯನ್ನು ಇದೇ ಮಾರ್ಚ್ 19ರಂದು ಬೆಳಿಗ್ಗೆ 10.30ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ಆಯೋಜಿಲಾಗಿದೆ.


**ಜಿಲ್ಲಾಧಿಕಾರಿಗಳ ಕಾರ್ಯಾಲಯ, ದಾವಣಗೆರೆ.**
**(ಜಿಲ್ಲಾ ನಗರಾಭಿವೃದ್ಧಿ ಕೋಶ)**
ದೂರವಾಣಿ ಸಂಖ್ಯೆ:08192–251168 e-mail:dudc_dvg@yahoo.co.in
ಸಂ:ಜಿ.ನ.ಕೋ.ದಾ(3)/ಸಿಆರ್/ಎಲ್ಇಡಿ/ಇ–10/2023–24 ದಿನಾಂಕ:11–03–2025

**ಇ–ಪ್ರೋಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ**

ದಾವಣಗೆರೆ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಿಗೆ (ದಾವಣಗೆರೆ ಮಹಾನಗರಪಾಲಿಕೆ ಹೊರತುಪಡಿಸಿ) ಸಿ.ಸಿ.ಎಂ.ಎಸ್ ಯೋಜನೆಯಡಿ ಎಲ್ಇಡಿ ದೀಪ ಅಳವಡಿಸುವ ಕಾರ್ಯಕ್ರಮಕ್ಕೆ ಪ್ರಾಜೆಕ್ಟ್ ಇಂಜಿನಿಯರ್ ಮತ್ತು ಎನರ್ಜಿ ಆಡಿಟರ್‌ಗಳನ್ನು ಮ್ಯಾನ್ ಪವರ್ ಏಜೆನ್ಸಿ ಮೂಲಕ ನೇಮಕ ಮಾಡಿಕೊಳ್ಳಲು ಈ ಕೆಳಗಿನ ಇಂಡೆಂಟ್ ನಂಬರ್‌ನಂತೆ ದ್ವಿ ಲಕೋಟೆ ಪದ್ಧತಿ (Two Covers System) ಇ–ಪ್ರೋಕ್ಯೂರ್‌ಮೆಂಟ್ ಮೂಲಕ ಆಹ್ವಾನಿಸಲಾಗಿದೆ.

**ಇಂಡೆಂಟ್‌ಗಳು:– ದಾವಣಗೆರೆ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಿಗೆ (ದಾವಣಗೆರೆ ಮಹಾನಗರ ಪಾಲಿಕೆ ಹೊರತುಪಡಿಸಿ) ಸಿ.ಸಿ.ಎಂ.ಎಸ್ ಯೋಜನೆ ಯಡಿ ಎಲ್ಇಡಿ ದೀಪ ಅಳವಡಿಸುವ ಕಾರ್ಯಕ್ರಮಕ್ಕೆ ಪ್ರಾಜೆಕ್ಟ್ ಇಂಜಿನಿಯರ್ ಮತ್ತು ಎನರ್ಜಿ ಆಡಿಟರ್‌ಗಳನ್ನು ಮ್ಯಾನ್ ಪವರ್ ಏಜೆನ್ಸಿ ಮೂಲಕ ನೇಮಕ ಮಾಡಿಕೊಳ್ಳಲು**
**Indent No.DMA/2024-25/ SE4919 ಅಂದಾಜು ಯೋಜನೆಯ ಮೊತ್ತ (ರೂ.ಲಕ್ಷಗಳಲ್ಲಿ):– 52.80 ಇ.ಎಂ.ಡಿ ಮೊತ್ತ (ರೂ.ಗಳಲ್ಲಿ):– 1,05,600.00 ಪೂರ್ವಭಾವಿ ಸಭೆ:– 17–03–2025 ಇ–ಪೋರ್ಟಲ್‌ನಲ್ಲಿ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ: 26–03–2025 ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 28–03–2025 ಆರ್ಥಿಕ ಬಿಡ್ ತೆರೆಯುವ ದಿನಾಂಕ: 01–04–2025**

ಸದರಿ ಕಾಮಗಾರಿಗಳ ವಿವರ, ಹಾಗೂ ಇತರೆ ಷರತ್ತುಗಳನ್ನು ಇ–ಪ್ರೋಕ್ಯೂರ್‌ಮೆಂಟ್ ಪೋರ್ಟಲ್ ವೆಬ್‌ಸೈಟ್ http://kppp.karnataka.gov.in ಮೂಲಕ ಹಾಗೂ ಹೆಚ್ಚಿನ ಮಾಹಿತಿ ಬೇಕಾದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ತಾಂತ್ರಿಕ ಶಾಖೆಯಿಂದ ಪಡೆದುಕೊಳ್ಳಬಹುದಾಗಿದೆ. ವೇಳಾಪಟ್ಟಿಯಲ್ಲಾಗುವ ಯಾವುದೇ ಬದಲಾವಣೆಯನ್ನು ಇ–ಪ್ರೋಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮಾತ್ರ ಸೂಚಿಸಲಾಗುವುದು. ದಿನ ಪತ್ರಿಕೆ ಅಥವಾ ಯಾವುದೇ ಜಾಹೀರಾತು ಪ್ರಕಟಣೆ ನೀಡಲಾಗುವುದಿಲ್ಲ.

ವಾಸಾಇ/ದಾವಣಗೆರೆ/855/ ಕೆಎಸ್‌ಎಂಸಿಎ/2024–25
**ಸಹಿ/– ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಾವಣಗೆರೆ.**



**IN THE COURT OF THE 2 ADDITIONAL CIVIL JUDGE (JR DN) AT DAVANAGERE**

P & SC NO. 8/2024

**Petitioners:**- Eli Kenchappa, and others

**Versus**

**Respondent:**- The State Bank of India,Represented by its Manager,

**COURT NOTICE**

Take Notice that the petitioner filed the above petition seeking an order to issue succession certificate in their favour in respect of the schedule property. If any body having any interest, claim therein shall appear in person or through an advocate and say regarding the petition on-22/04/2025. before this Hon'ble court of 11:00 AM, failing which the case against you will be heard and determined ex-parte.

Given under my hand and seal of the court this the 3 of March 2025.

SCHEDULE

1) In Savings Bank Account No. 35557263525 the amount available is Rs.2,20,500/-.

2) Insurance policy No.76001000135 the amount of Rs.2,00,000/-

By the Order of the Court

Advocate for Petitioners
Sri. D.B. Ravikiran,
Advocate,
Davanagere

BY ORDER
Chif ministerial office
pri.Civil judge(JR DN) Court
Davanagere


## ಸಂಗೀತ ಮನಕ್ಕೆ ಮುದ ನೀಡುತ್ತದೆ : ಶ್ರೀ ರಂಭಾಪುರಿ ಜಗದ್ಗುರುಗಳು



**ಬಾಳೆಹೊನ್ನೂರು:** ಜೀವನದ ಜಂಜಾಟದಲ್ಲಿ ಮುಳುಗಿರುವ ಮನುಷ್ಯನಿಗೆ ಸಂಗೀತ ಮನಕ್ಕೆ ಮುದ ನೀಡುತ್ತದೆ. ಅನೇಕ ರೋಗಗಳಿಗೆ ಸಂಗೀತ ಸಂಜೀವಿನಿಯಾಗಿದೆ. ಗಿಡ ಮರಗಳೂ ಸಂಗೀತವನ್ನು ಆಸ್ವಾದಿಸುತ್ತವೆ ಎಂಬುದು ವೈಜ್ಞಾನಿಕ ಸತ್ಯವಾಗಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಬುಧವಾರ ಸಂಜೆ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಸಂಗೀತ–ಸೌರಭ ಹಾಗೂ ನಗೆ ಹಬ್ಬ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಸಂಗೀತ ಆಸ್ವಾದಿಸುವುದರ ಜೊತೆಗೆ ಮನುಷ್ಯನಿಗೆ ಹಾಸ್ಯ ಪ್ರಜ್ಞೆಯೂ ಮುಖ್ಯವಾದುದು. ನಗುವುದರಿಂದ ಮನಸ್ಸು ಉಲ್ಲಸಿತಗೊಳ್ಳುತ್ತದೆ ಮೈ ನರ ನಾಡಿಗಳು ಸಡಿಲಗೊಳ್ಳುತ್ತವೆ. ಉತ್ತಮ ಹಾಸ್ಯದ ಮೂಲಕ ಜನರನ್ನು ನಗಿಸುವುದೂ ಒಂದು ಕಲೆಯಾಗಿದೆ ಎಂದರು.

ಮಲೆಬೆನ್ನೂರಿನ ಜೆಡಿಎಸ್ ಮುಖಂಡ ಬಿ.ಚಿದಾನಂದಪ್ಪ ಕಾರ್ಯಕ್ರಮ ಉದ್ಘಾಟಿಸಿದರು. ಸಮಾರಂಭದಲ್ಲಿ ಮುಕ್ತಿಮಂದಿರ, ಸುಳ್ಳ, ನಿಲೊಗಲ್ಲ, ಕಲಾದಗಿ, ಕವಲೇದುರ್ಗ, ಬಿಳಕಿ, ಬೇರುಗ–'ಂಡಿ, ಹಾರನಹಳ್ಳಿ ಕೆಂಭಾವಿ, ಸಿಂದಗಿ, ಸಂಗೊಳ್ಳಿ, ಸಿದ್ಧರಬೆಟ್ಟ, ಜಕ್ಕಲಿ–ಹಾರನಹಳ್ಳಿ ಮಠಗಳ ಶ್ರೀಗಳು ಉಪಸ್ಥಿತರಿದ್ದರು. ಕಲಬುರ್ಗಿ ಚವದಾಪುರಿ ಹಿರೇಮಠದ ಡಾ॥ ರಾಜಶೇಖರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು.

ಡಾ॥ ರಾಜಗುರು ಗುರುಸ್ವಾಮಿ ಕಲಕೇರಿ ಇವರು ನಡೆಸಿಕೊಟ್ಟ ಸಂಗೀತ ಸೌರಭ ಜನಮನವನ್ನು ಸೂರೆಗೊಂಡಿತು. 'ಸಾಹಿತ್ಯ–ಸಂಸ್ಕೃತಿ ಸಂವರ್ಧಿಸಲಿ ಶಾಂತಿ ಸಮೃದ್ಧಿ ಸರ್ವರಿಗಾಗಲಿ' ಎಂಬ ಸ್ವರಚಿತ ಕವನದೊಂದಿಗೆ ಆರಂಭಿಸಿದ ಅವರು ಕಡಕೋಳ ಮಡಿವಾಳಪ್ಪನವರ 'ಯಾಕ ಮಾಡತೀದಿ ಒಣ ಚಿಂತಿ' ಹಾಗೂ ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳನ್ನು ಕುರಿತು ರಚಿಸಿದ 'ಅಗಣಿತ ಚರಿತ ಮಹಾಸನ್ನಿಧಿ' ಗೀತೆಗಳನ್ನು ಹಾಡಿದರು. ಇವರ ಸಂಗೀತಕ್ಕೆ ಬಸಲಿಂಗಯ್ಯ ಹಿರೇಮಠ ತಬಲಾ ಸಾಥ ನೀಡಿದರೆ ಗುರುಲಿಂಗಸ್ವಾಮಿ ಹಿತ್ತಲ ಶಿರೂರ ಹಾರ್ಮೋನಿಯಂ ಸಾಥ ನೀಡಿದರು.

ಟಿ.ವಿ.ಹಾಸ್ಯ ಕಲಾವಿದ ಶರಣು ಹಿರೇಮಠ ಹಲವಾರು ಸಂಗತಿಗಳನ್ನು ಹಾಸ್ಯ ಭರಿತವಾಗಿ ಹೇಳುವ ಮೂಲಕ ಜನರನ್ನು ನಗೆಗಡಲಲ್ಲಿ ತೇಲಿಸಿದರು. ಗದಗ ಜಾನಪದ ಸಂಜೀವಿನಿಯ ಗವಿಸಿದ್ಧಯ್ಯ ಹಳ್ಳಿಕೇರಿಮಠ ಇವರು ಜಾನಪದ ಹಾಡುಗಳ ಮೂಲಕ ಜನತೆಯನ್ನು ರಂಜಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ಜರುಗಿತು. ಸಿಂಧನೂರು–ಕನ್ನೂರು ಮಠದ ಸೋಮನಾಥ ಶಿವಾಚಾರ್ಯ ಸ್ವಾಮಿಗಳು ಸ್ವಾಗತಿಸಿದರು. ಮಳಲಿ ಸಂಸ್ಥಾನಮಠದ ಡಾ॥ ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.

ಸಮಾರಂಭದ ನಂತರ ಹುಬ್ಬಳ್ಳಿಯ ಜೀವಿ ಚಿತ್ರಾಲಯುದವರು ನಿರ್ಮಿಸಿರುವ ಗುರುಜೀವಿ ನಿರ್ದೇಶನದ "ರೇಣುಕ ಬೋಧೆ" ಟೆಲಿ ಫಿಲ್ಮ ಪ್ರದರ್ಶನವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಉದ್ಘಾಟಿಸಿ ವೀಕ್ಷಿಸಿ ಶುಭ ಹಾರೈಸಿದರು. "ರೇಣುಕ ಬೋಧೆ" ಟೆಲಿ ಫಿಲ್ಮನಲ್ಲಿ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಶಿವನ ಸದ್ಯೋಜಾತ ಮುಖದಿಂದ ಉದ್ಭವಿಸಿದ ಕಾರಣವನ್ನು ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯರು ಕುಲ್ಯಪಾಕ ಸೋಮೇಶ್ವರ ಲಿಂಗದಿಂದ ಆವಿರ್ಭವಿಸಿ ಮಹಾಮುನಿ ಅಗಸ್ತ್ಯರಿಗೆ ವೀರಶೈವ ಧರ್ಮವನ್ನು ಬೋಧಿಸಲು ಬೋಧಿಸಿದ್ದನ್ನು ಸೊಗಸಾಗಿ ಚಿತ್ರೀಕರಿಸಿದ್ದಾರೆ.

## ಪಾಕಿಸ್ತಾನ ಮೋಸದಾಟಕ್ಕೆ ಅಟಲ್‌ಜೀ ತಕ್ಕ ಉತ್ತರ

**ಚಿಕ್ಕಮಗಳೂರು:** ರಾಷ್ಟ್ರದ ಉದ್ದಗಲಕ್ಕೂ ಹೆದ್ದಾರಿ, ಕೃಷಿ ಪದಾರ್ಥಗಳ ಸಾಗಣೆಗೆ ಗ್ರಾಮ್ ಸಡಕ್ ಹಾಗೂ ಪಾಕಿಸ್ತಾನದ ಮೋಸದಾಟಕ್ಕೆ ದಿಟ್ಟ ಹೆಜ್ಜೆಯಿಟ್ಟ ಅಟಲ್ ಬಿಹಾರಿ ವಾಜಪೇಯಿ ಅಪರೂಪದ ರಾಜಕಾರಣಿ ಎಂದು ಅಟಲ್‌ಜೀ ಜನ್ಮಶತಮಾನೋತ್ಸವ ಸಮಿತಿ ರಾಜ್ಯ ಸಂಚಾಲಕ ಜಗದೀಶ್ ಹಿರೇಮನಿ ಹೇಳಿದರು.ನಗರದ ಜಿಲ್ಲಾ ಬಿಜೆಪಿ ಪಾಂಚಜನ್ಯ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಅಟಲ್ ಜೀ ವಿರಾಸತ್ ಜಿಲ್ಲಾ ಸಮ್ಮೇಳನದಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು, ವಾಜಪೇಯಿ ರಾಜಕಾರಣಿಯಾಗಿ, ಪ್ರಧಾನಮಂತ್ರಿಯಾಗಿ ಕಾರ್ಯನಿರ್ವಹಿಸಿಲ್ಲ, ರಾಷ್ಟ್ರದ ಪ್ರತಿ ಪ್ರಜೆಯ ಪ್ರೀತಿ, ವಿಶ್ವಾಸ ವ್ಯಕ್ತಿಯಾಗಿ ರೂಪುಗೊಂಡ ಕಾರಣ ಅಜಾತಶತೃವಾಗಿ ಗುರುತಿಸಿಕೊಂಡಿದ್ದಾರೆ. ಬಾಲ್ಯದಿಂದಲೇ ಚತುರ ಹಾಗೂ ದೇಶಭಕ್ತಿ ರೂಢಿಸಿಕೊಂಡಿದ್ದ ಅಟಲ್‌ಜೀ, ರಾಷ್ಟ್ರದ ಹಿತ ಚಿಂತನೆಗೆ ವಿಶೇಷ ದೃಷ್ಟಿಕೋನ ಮೈಗೂಡಿಸಿಕೊಂಡಿದ್ದರು ಎಂದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಬಿಜೆಪಿ ರೈತ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಎಚ್.ಸಿ.ಕಲ್ಮರುಡಪ್ಪ, ರಾಜಕೀಯ ಮುತ್ಸದ್ದಿ ಜೊತೆಗೆ ಕವಿ ಹೃದಯದ ಅಟಲ್‌ಜೀ, ಪ್ರತಿ ಕಾರ್ಯಕ್ರಮದಲ್ಲಿ ದಿಕ್ಸೂಚಿ ಭಾಷಣಕ್ಕೆ ಹೆಸರಾದವರು. ಅಲ್ಲದೇ ಅಟಲ್ ಜೀ ಭಾಷಣವೆಂದರೆ ದೇಶ ಭಕ್ತಿಯಿಂದ ಕೂಡಿದ ಕಾರಣ ಕೆಲವು ವಿಪಕ್ಷ ನಾಯಕರು ಆಲಿಸುತ್ತಿದ್ದರು ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಎಂ.ಆರ್.ದೇವರಾಜ್‌ಶೆಟ್ಟಿ ಮಾತನಾಡಿ, ರಾಜ್ಯದಲ್ಲೇ ಮೊದಲ ಬಾರಿಗೆ ಜಿಲ್ಲೆಯಿಂದ ಅಟಲ್ ಜೀ ವಿರಾಸತ್ ಜಿಲ್ಲಾ ಸಮ್ಮೇಳನಕ್ಕೆ ಆರಂಭಗೊಂಡಿದೆ. ಚಿಕ್ಕಮಗಳೂರು, ಆಲ್ದೂರು ಭಾಗದಲ್ಲೂ ಅಂದಿನ ಕಾಲಘಟ್ಟದಲ್ಲಿ ವಾಜಪೇಯಿ ಭೇಟಿ ನೀಡಿರುವ ಪುರಾವೆಗಳಿವೆ ಎಂದರು.

## ಲಸಿಕೆಗಳು ಮಾರಕ ರೋಗಗಳಿಂದ ಮಕ್ಕಳನ್ನು ರಕ್ಷಿಸುತ್ತವೆ

**ಚಿತ್ರದುರ್ಗ:** ಲಸಿಕೆಗಳು ಮಾರಕ ರೋಗಗಳಿಂದ ಮಕ್ಕಳನ್ನು ರಕ್ಷಿಸುತ್ತವೆ ಎಂದು ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಹೇಳಿದರು.

ನಗರದ ಸಂತ ಜೋಸೆಫರ ಕಾನ್ವೆಂಟ್ ಶಾಲೆಯಲ್ಲಿ ಸೋಮವಾರ ಆರೋಗ್ಯ ಇಲಾಖೆಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಲಸಿಕಾ ದಿನದ ಅಂಗವಾಗಿ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿ ಮಗುವಿಗೆ ಲಸಿಕೆ ಹಾಕುವುದನ್ನು ಖಚಿತಪಡಿಸಿಕೊಳ್ಳಲು ಮುಂಚೂಣಿಯಲ್ಲಿರುವ ಆರೋಗ್ಯ ಕಾರ್ಯಕರ್ತರ ಶ್ರಮವನ್ನು ಗುರುತಿಸಲು ಮತ್ತು ಪ್ರಶಂಸಿಸಲು ಭಾರತ ಸರ್ಕಾರವು ಮಾರ್ಚ್ 16 ಅನ್ನು ರಾಷ್ಟ್ರೀಯ ಲಸಿಕೆ ದಿನವನ್ನಾಗಿ ಆಚರಿಸುತ್ತದೆ. ತೀವ್ರವಾದ ವ್ಯಾಕ್ಸಿನೇಷನ್ ಡ್ರೈವ್‌ಗಳ ಮೂಲಕ ದಿನನಿತ್ಯದ ಪ್ರತಿರಕ್ಷಣೆಯನ್ನು ಹೆಚ್ಚಿಸುವಲ್ಲಿ ಭಾರತವು ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಹೇಳಿದರು.



ಲಸಿಕೆಯ ಮಹತ್ವದ ಕುರಿತು ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶವಾಗಿದೆ. ದೇಶದಲ್ಲಿ ಮೊದಲ ಲಸಿಕೆ ದಿನಾಚರಣೆಯನ್ನು 1995ರ ಮಾರ್ಚ್ 16ರಂದು ಆಚರಣೆ ಮಾಡಲಾಯಿತು. ಅಂದು ದೇಶದಲ್ಲಿ ಪೋಲಿಯೊ ಹನಿ ಹಾಕುವ 'ಪಲ್ಸ್ ಪೋಲಿಯೊ' ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಎರಡು ದಶಕಗಳ ಬಳಿಕ ದೇಶದಲ್ಲಿ ಕ್ರಮೇಣ ಪೋಲಿಯೊ ಪ್ರಕರಣಗಳ ಸಂಖ್ಯೆ ಕಡಿಮೆಯಾಗಿ, 2014ರಲ್ಲಿ ಭಾರತವನ್ನು ಪೋಲಿಯೊ ಮುಕ್ತ ಎಂದು ಘೋಷಿಸಲಾಯಿತು. ಮಕ್ಕಳಿಗೆ ಪೋಲಿಯೊ ಹನಿ ಜತೆಗೆ ಮಕ್ಕಳಿಗೆ ದಡಾರ, ಸಿಡುಬು, ಕ್ಷಯಗಳ ಲಸಿಕೆ ಹಾಕಿಸುವುದೂ ಮುಖ್ಯ. ಲಸಿಕೆ ದಿನದಂದು ಈ ಅಂಶಗಳ ಬಗ್ಗೆಯೂ ಅರಿವು ಮೂಡಿಸಲಾಗುತ್ತದೆ. ಸಕಾಲದಲ್ಲಿ ಲಸಿಕೆ ಹಾಕಿಸುವುದರಿಂದ ಪ್ರತಿ ವರ್ಷ ಲಕ್ಷಾಂತರ ಮಕ್ಕಳು ಸಾವಿನಿಂದ ಪಾರಾಗುತ್ತಿದ್ದಾರೆ ಎಂದು ಹೇಳಿದರು.

ಜಿಲ್ಲಾ ಪೋಷಣ್ ಅಭಿಯಾನ ವ್ಯವಸ್ಥಾಪಕ ಕರಕಪ್ಪ ಮೇಟಿ ಮಾತನಾಡಿ, ಬೇಸಿಗೆಯಲ್ಲಿ ಬದುಕುವ ರೀತಿ, ಶಾಖದ ಅಲೆಯಿಂದ ಯಾವರೀತಿ ಸಂರಕ್ಷಣೆ ಮಾಡಿಕೊಳ್ಳುವ ಬಗೆ ತಿಳಿಸಿದರು. ತೆಳು ಕಾಟನ್ ಬಟ್ಟೆಗಳನ್ನು ಧರಿಸಬೇಕು. ಮಸಾಲೆ ಪದಾರ್ಥಗಳನ್ನು ಕರಿದ ತಿಂಡಿಗಳನ್ನು ತಿನ್ನಬಾರದು. ನಿರ್ಜಲೀಕರಣವಾಗದಂತೆ ಹೆಚ್ಚು ಹೆಚ್ಚು ನೀರು ಕುಡಿಯಬೇಕು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣಾನಾಯ್ಕ್, ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ್ , ಶಾಲೆಯ ಮುಖ್ಯ ಶಿಕ್ಷಕಿ ಇರುದ್ಯಾ ರಾಣಿ, ಸಹ ಶಿಕ್ಷಕರಾದ ಸುಶೀಲಾ, ಮೇರಿ, ರೀಟಾ, ದಾಕ್ಷಾಯಣಿ, ವಿಕ್ಟೋರಿಯಾ, ಕೆ.ಎಸ್.ಅಜ್ಜಯ್ಯ, ಶಿವಕುಮಾರ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ವಿಜಯಾಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿ ರೇಖಾ, ಆಶಾ ಕಾರ್ಯಕರ್ತೆ ಗೀತಾ ಇದ್ದರು.

## ಜಾಗತೀಕರಣದಿಂದ ನಶಿಸುತ್ತಿದೆ ಸಂಸ್ಕೃತಿ ತಾಯಿ ಬೇರು : ಮಂಜುನಾಥ

**ಶಿವಮೊಗ್ಗ :** ಜಾಗತೀಕರಣ ನಮ್ಮ ಸಂಸ್ಕೃತಿಯ ತಾಯಿ ಬೇರುಗಳಾಗಿದ್ದ ಕುಲಕಸುಬುಗಳನ್ನು ಕಸಿದುಕೊಳ್ಳುತ್ತಿವೆ. ಆ ಕಸುಬುಗಳ ಮಹತ್ವವನ್ನು ಸಮ ಸಮಾಜಕ್ಕೆ ತಿಳಿಸುವ ಕೆಲಸ ಆಗಬೇಕಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಿ.ಮಂಜುನಾಥ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಭಾನುವಾರ ಕೃಷಿನಗರದ ಶ್ರೀ ಗಾಯತ್ರಿ ವಿಶ್ವಕರ್ಮ ದೇವಾಲಯ ಭವನದಲ್ಲಿ ಎ.ಕಮಲಮ್ಮ, ಬಸಪ್ಪಾಚಾರ್ ಎ.ವಿ ಅವರ ದತ್ತಿ ಆಶಯದಂತೆ ವಿಶ್ವಕರ್ಮರ ಪಂಚಕಸುಬುಗಳು ಮತ್ತು ಕೊಡುಗೆಗಳು ಕುರಿತ ಚಿಂತನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ದತ್ತಿ ವಿಚಾರವಾಗಿ ಹಂಪಿ ವಿಶ್ವ ವಿದ್ಯಾಲಯದ ಹಸ್ತಪ್ರತಿಶಾಸ್ತ್ರ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ. ವೀರೇಶ ಬಡಿಗೇರ ಮಾತನಾಡಿ, ಅನೇಕ ಸಂಪ್ರದಾಯಗಳಲ್ಲಿ ವಿಶ್ವಕರ್ಮ ಹೆಸರಿದೆ. ಅಲ್ಲಿ ಕೌಶಲ್ಯ ಮತ್ತು ಕಸಬನ್ನು ವೈಜ್ಞಾನಿಕವಾಗಿ ವ್ಯಾಖ್ಯಾನ ಮಾಡುವ ಅಗತ್ಯವಿದೆ. ಜಗತ್ತಿಗೆ ಚಲನೆಯ ಪರಿವರ್ತನೆ ನೀಡಿದವರು ವಿಶ್ವಕರ್ಮ.

ಪ್ರಗತಿಪರ ಜಗತ್ತು ನಿರ್ಮಾಣ ಮಾಡಿದ ಸೃಷ್ಟಿಕರ್ತ ನಾದವನು. ಕಮ್ಮಾರ, ಬಡಿಗ, ಅಕ್ಕಸಾಲಿ ಸೇರಿದಂತೆ ಎಲ್ಲರೂ ಉದ್ಯೋಗ ಮಾಡುವುದಕ್ಕಿಂತ, ಹೊಸ ಉದ್ಯೋಗ ಸೃಷ್ಟಿ ಮಾಡಿದರು. ಲೋಕದ ಬೌದ್ಧಿಕ ಭೌತಿಕ ಕ್ಷೇತ್ರಕ್ಕೆ ಕೊಡುಗೆ ನೀಡಿದ್ದನ್ನು ವಿವರಿಸಿದರು.

## ಇ-ಖಾತಾ ಅಭಿಯಾನ ಆರಂಭ

**ಚಿಕ್ಕಮಗಳೂರು:** ಕಂದಾಯ ಭೂಮಿಯಲ್ಲಿ ನಿರ್ಮಿಸಿಕೊಂಡಿರುವ ಮನೆ, ಕಟ್ಟಡ, ನಿವೇಶನಗಳನ್ನು ಸಕ್ರಮಗೊಳಿಸಲು ಸರ್ಕಾರ ಸುತ್ತೋಲೆ ಹೊರಡಿಸಿದ್ದು, ಅದರಂತೆ ನಗರದಲ್ಲಿ ಇಂದು ಇ-ಖಾತಾ ಅಭಿಯಾನ ಆರಂಭಿಸಲಾಗಿದೆ ಎಂದು ನಗರಸಭಾ ಅಧ್ಯಕ್ಷೆ ಸುಜಾತ ಶಿವಕುಮಾರ್ ತಿಳಿಸಿದರು.ಅವರು ಸೋಮವಾರ ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಪೌರಾಡಳಿತ ನಿರ್ದೇಶನಾಲಯ ಮತ್ತು ನಗರಸಭೆ ಇವರುಗಳು ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಇ-ಖಾತಾ ಅಭಿಯಾನಕ್ಕೆ ಚಾಲನೆ ನೀಡಿ, ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದರು.ನಗರಸಭೆ ವ್ಯಾಪ್ತಿಯಲ್ಲಿ ಬರುವ ನಾಗರೀಕರು ಆಸ್ತಿ ತೆರಿಗೆಯನ್ನು ಪಾವತಿಸದೇ ಇರುವವರು ಇ-ಖಾತಾ ಅಭಿಯಾನದಲ್ಲಿ ಪಾಲ್ಗೊಂಡು ತೆರಿಗೆ ಪಾವತಿಸಿ, ಸಕ್ರಮ ಮಾಡಿಕೊಳ್ಳಲು ಅಪೂರ್ವ ಅವಕಾಶ ಇದಾಗಿದ್ದು, ಇದರಿಂದ ಸ್ವತ್ತಿನ ಬಿ-ಖಾತೆ ಮಾಡಿಕೊಂಡು ಅನುಕೂಲ ಪಡೆಯಿರಿ ಎಂದು ಹೇಳಿದರು.ನಗರದ ಸಮಗ್ರ ಅಭಿವೃದ್ಧಿ ದೃಷ್ಠಿಯಿಂದ ಈ ತೆರಿಗೆ ಸಂಗ್ರಹ ಬಹಳ ಮುಖ್ಯವಾಗಿದ್ದು, ಸರ್ಕಾರ ನೀಡಿರುವ ಈ ಮೂರು ತಿಂಗಳ ಕಾಲಾವಕಾಶವನ್ನು ಸದ್ಬಳಕೆ ಮಾಡಿಕೊಂಡು ಆಸ್ತಿಯ ಮೌಲ್ಯವರ್ಧಿತ ಗೊಳಿಸಿಕೊಳ್ಳುವಂತೆ ಎಂದು ಮನವಿ ಮಾಡಿದರು.ನಗರಸಭೆ ಪೌರಾಯುಕ್ತ ಬಿ.ಸಿ ಬಸವರಾಜು ಮಾತನಾಡಿ, ನಗರಸಭೆ ವ್ಯಾಪ್ತಿಯಲ್ಲಿ ಕಂದಾಯ ಭೂಮಿಯಲ್ಲಿ ಮನೆ ನಿವೇಶನ ನಿರ್ಮಿಸಿಕೊಂಡಿರುವ ನಾಗರೀಕರು ಕೂಡಲೇ ಸರ್ಕಾರ ನೀಡಿರುವ ಬಿ-ಖಾತಾ ಅಭಿಯಾನದಲ್ಲಿ ಪಾಲ್ಗೊಳ್ಳುವ ಮೂಲಕ ತಮ್ಮ ಆಸ್ತಿಗಳ ಮೌಲ್ಯ ಹೆಚ್ಚಿಸಿಕೊಳ್ಳುವಂತೆ ತಿಳಿಸಿದರು. ಈಗಾಗಲೇ ನಗರಸಭೆ ವ್ಯಾಪ್ತಿಯಲ್ಲಿ ಸುಮಾರು 10 ಸಾವಿರಕ್ಕೂ ಹೆಚ್ಚು, ಅನಧಿಕೃತ ಆಸ್ತಿಗಳು ಇವೆ ಎಂಬ ಮಾಹಿತಿ ಇದ್ದು, 2003-04 ನೇ ಸಾಲಿನಲ್ಲಿ ಸರ್ವೇ ಕಾರ್ಯ ಕೈಗೊಂಡಾಗ 6 ಸಾವಿರ ಅನಧಿಕೃತ ಕಟ್ಟಡಗಳು ಇರುವುದು ಪತ್ತೆಹಚ್ಚಲಾಗಿತ್ತು. ಈಗ ಈವರಗೆ ಇನ್ನೂ 4 ಸಾವಿರ ಹೆಚ್ಚಾಗಿರಬಹುದೆಂದು ಅಂದಾಜಿಸಲಾಗಿದೆ ಎಂದು ಹೇಳಿದರು. ಸರ್ಕಾರ ಸೌಲಭ್ಯ ಪಡೆದು, ಯಾವುದೇ ರೀತಿಯ ತೆರಿಗೆ ಪಾವತಿ ಮಾಡದೇ ವಾಸ ಮಾಡುತ್ತಿರುವ ನಿವಾಸಿಗಳಿಗೆ ಅನುಕೂಲವಾಗಬೇಕೆಂಬ ದೃಷ್ಠಿಯಿಂದ ಖಾಲಿ ನಿವೇಶನ ಅಥವಾ ಕಟ್ಟಡ ಮನೆ ಹೊಂದಿರುವ ನಾಗರೀಕರು 1 ವರ್ಷದ ಆಸ್ತಿ ತೆರಿಗೆಯನ್ನು ಪಾವತಿಸಿ, ಬಿ-ಖಾತಾ ಮಾಡಿಸಿಕೊಳ್ಳಬೇಕೆಂದು ಎಂದು ತಿಳಿಸಿದರು.ಬಿ-ಖಾತೆ ಆದ ನಂತರ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಆಸ್ತಿಗಳಿಗೆ ನಗರಸಭೆಯಲ್ಲಿ ಇ-ಖಾತೆ ಮಾಡಿಕೊಡುತ್ತೇವೆ ಈ ದಾಖಲೆಗಳನ್ನು ಪಡೆದುಕೊಂಡು ಬ್ಯಾಂಕಿನಲ್ಲಿ ಸಾಲ ಸೌಲಭ್ಯ ಮತ್ತು ಮಾರಾಟ ಮಾಡಲು ಸಹಾಯವಾಗುತ್ತದೆ ಎಂದರು.
10-05-2024 ಹಿಂದೆ ಆಗಿರುವ ಆಸ್ತಿ ನೊಂದಣಿ ಪತ್ರ ಪರಿಗಣಿಸಿ, 10-05-2025 ರವರೆಗೆ ಬಿ-ಖಾತಾ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ. ಈ ನಿಗಧಿತ ಅವಧಿಯಲ್ಲಿ ನಾಗರೀಕರು ಆಸ್ತಿ ನೊಂದಣಿ ಮಾಡಿಕೊಳ್ಳಬೇಕು ಇಲ್ಲವಾದರೆ ಮುಂದೆ ಸರ್ಕಾರ ಕಠಿಣ ಕ್ರಮ ಕೈಗೊಳ್ಳಲಿದೆ ಎಂದು ಎಚ್ಚರಿಸಿದರು.ಈ ತಿಂಗಳ ಅಂತ್ಯದೊಳಗೆ ಖಡ್ಡಾಯವಾಗಿ ನೀರಿನ ತೆರಿಗೆ ಸೇರಿದಂತೆ ಎಲ್ಲಾ ರೀತಿಯ ತೆರಿಗೆಗಳನ್ನು ಪಾವತಿಸಬೇಕು ವಿಳಂಬ ಮಾಡಿದರೆ ನಗರಸಭೆಯಿಂದ ನೀಡಲಾಗಿರುವ ಒಳಚರಂಡಿ ಸಂಪರ್ಕ, ಕುಡಿಯುವ ನೀರು ಮುಂತಾದ ಮೂಲಭೂತ ಸೌಕರ್ಯಗಳನ್ನು ಕಡಿತಗೊಳಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು.ಈ ಸಂಬಂಧ ನಗರ ವ್ಯಾಪ್ತಿಯಲ್ಲಿ ಪತ್ರಿಕೆ, ದೂರದರ್ಶನ ಆಟೋದಲ್ಲಿ ಧ್ವನಿವರ್ಧಕದ ಮೂಲಕ ಪ್ರಚಾರ ಮಾಡುತ್ತಿದ್ದೇವೆ ಇಂದಿನಿಂದ 10 ದಿನಗಳ ಕಾಲ ಜಾಥಾ ನಡೆಸಿ, ಜಾಗೃತಿ ಮೂಡಿಸಲಾಗುವುದು. ಬಾಕಿ ಉಳಿಸಿಕೊಂಡಿರುವ ನಗರದ ನಾಗರೀಕರು ಕೂಡಲೇ ತೆರಿಗೆಗಳನ್ನು ಪಾವತಿಸಿ ನಗರಸಭೆಯೊಂದಿಗೆ ಸಹಕರಿಸಬೇಕೆಂದು ಮನವಿ ಮಾಡಿದರು.ಮೊದಲಿಗೆ ಕಂದಾಯ ಅಧಿಕಾರಿ ಶಿವಾನಂದ ಸ್ವಾಗತಿಸಿದರು.

## ಮಹಿಳಾ ದಿನಾಚರಣೆ

**ಹರಿಹರ:** ರೈಲು ಮಜಾ ಟಾಕೀಸ್, ಸಾಂಸ್ಕೃತಿಕ ವೇದಿಕೆಯ ಗೆಳೆಯರ ಬಳಗದಿಂದ ಸೋಮವಾರ ಬೆಳಗಿನ ಶ್ರೀ ಸಿದ್ಧಗಂಗಾ ರೈಲಿನ ಡಿ.6 ನೇ ಬೋಗಿಯಲ್ಲಿ ಮಹಿಳಾ ದನಾಚರಣೆ ಆಚರಿಸಲಾಯಿತು. ನಗರದ ರಾಜಶೇಖರ ಮೂರ್ತಿ ಇವರ ನೇತೃತ್ವದಲ್ಲಿ ವಿಶ್ವ ಮಹಿಳಾ ದಿನಾಚರಣೆಯ ಅಂಗವಾಗಿ ದಿನ ನಿತ್ಯ ವಿವಿಧ ಇಲಾಖೆಯಲ್ಲಿ ಕೆಲಸ ಮಾಡುವ ಗೆಳೆಯರ ಬಳಗದ ಸದಸ್ಯರು ವರ್ಗಾವಣೆ ಗೊಂಡಿರುವ ಇಬ್ಬರು ಮಹಿಳೆಯರಿಗೆ ಸನ್ಮಾನಿಸಲಾಯಿತು. ಹೊಳಲ್ಕೆರೆ ನ್ಯಾಯಾಲಯದಲ್ಲಿ ಅಟೆಂಡರ್ ಆಗಿ ಕಾರ್ಯನಿರ್ವಹಿಸುತ್ತಿದ್ದ ರತ್ನಮ್ಮ ಎ.ವಿ. ಇವರು ಚಿತ್ರದುರ್ಗ ಜಿಲ್ಲಾ ನ್ಯಾಯಾಲಯಕ್ಕೆ ವರ್ಗಾವಣೆಯಾದ್ದು. ಹೊಳಲ್ಕೆರೆ ತಾಲ್ಲೂಕಿನ ನ್ಯಾಯಾಲಯದಿಂದ ದಾವಣಗೆರೆಯ ನ್ಯಾಯಾಲಯಕ್ಕೆ ವರ್ಗಾವಣೆಯಾಗಿರು ಕೊಟ್ರಮ್ಮ ಇವರಿಗೆ ಬಳಗದ ಡಾ.ಸವಿತ ಶ್ರೀಹರ್ಷ ಮತ್ತು ಆಸಂದಿ ಗ್ರಾಮ ಪಂಚಾಯಿತಿ ಸದಸ್ಯರಾದ ರೇಖಾ ರಮೇಶ್ ಅವರಿಂದ ಗೌರವ ಸನ್ಮಾನ ಮಾಡುವ ಮೂಲಕ ಬೀಳ್ಕೊಡಲಾಯಿತು.ಈ ವೇಳೆ ಹಾಸನದ ಗಣಿಗಾರಿಕೆ ಇಲಾಖೆಯ ಅಧಿಕಾರಿಗಳಾದ ಪರಮೇಶ ಬಣಕಾರ ,ಕೃಷಿ ಇಲಾಖೆಯ ಉಪನಿರ್ದೇಶಕ ಹಂಸವೇಣಿ ಕುಮಾರ್, ಬೀರೂರಿನ ಶಿಕ್ಷಣ ಇಲಾಖೆಯ ವ್ಯವಸ್ಥಾಪಕ ಚನ್ನವೀರ ನಾಯಕ್, ಸಂಪತ್ ಕುಮಾರ, ಜಿಲ್ಲಾ ಪಂಚಾಯಿತಿ, ಚಿಕ್ಕಮಗಳೂರು, ಹೊಸದುರ್ಗ ತಾಲ್ಲೂಕಿನ ಉಪ ದಂಡಾಧಿಕಾರಿ ಗುರುಪ್ರಸಾದ್ ಮತ್ತು ಮತ್ತಿತರ ಅಧಿಕಾರಿಗಳು, ಗೆಳೆಯರ ಬಳಗದ ಸದಸ್ಯರು ಉಪಸ್ಥಿತರಿದ್ದರು.

# ದಯೆ, ಸ್ನೇಹ, ಕೃತಜ್ಞತೆ, ಮಾನವೀಯ ಮೌಲ್ಯ ಬದುಕಿನ ಪಾಠದಲ್ಲಿ ಅಳವಡಿಸಿಕೊಳ್ಳಬೇಕು

**ತೀರ್ಥಹಳ್ಳಿ:** ಭಾಷೆಯ ಮೂಲಕ ಭಾವನಾತ್ಮಕ ಬೆಸುಗೆ ಸಾಧಿಸಬಹುದು. ದಯೆ, ಸ್ನೇಹ, ಕೃತಜ್ಞತೆ, ಮಾನವೀಯ ಮೌಲ್ಯಗಳನ್ನು ಬದುಕಿನ ಪಾಠದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕೆ. ಆರ್. ಉಮಾದೇವಿ ಹೇಳಿದರು. ಶಾಂತವೇರಿ ಗೋಪಾಲಗೌಡ ರಂಗಮಂದಿರದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ 11ನೇ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು ಅಂಕ ಪ್ರಧಾನತೆ, ಅಪ್ರಸ್ತುತ ಅಂಶಗಳ ಪಠ್ಯ ಕ್ರಮ. ಬದುಕು ರೂಪಿಸದ ಶಿಕ್ಷಣ ಪದ್ಧತಿ. ವಿದ್ಯುನ್ಮಾನ ಮಾಧ್ಯಮಗಳ ಪ್ರಚೋದಿತ ಲೈಂಗಿಕತೆ. ಸಮಾಜದ ಆದರ್ಶ ವ್ಯಕ್ತಿಗಳ ಕಣ್ಮರೆಯಿಂದ ಶಿಕ್ಷಣದಲ್ಲಿ ನೈತಿಕತೆ ಧೂಳೀಪಟವಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.
ಮಲೆನಾಡಿಗೆ ನೈಸರ್ಗಿಕ ಸಂಪತ್ತು ಮುಳುವಾಗುತ್ತಿದೆ. ಕುವೆಂಪು ವರ್ಣನೆಯ ಕಾಡು ಬಹುಶಃ ಅಭಿವೃದ್ಧಿ ಯೋಜನೆಗೆ ನಾಶವಾಗುತ್ತಿದೆ. ನೆಡುತೋಪು ಪದ್ಧತಿ, ಜಲವಿದ್ಯುತ್ ಯೋಜನೆ ಮಲೆನಾಡನ್ನು ಆಹುತಿ ಪಡೆದಿದೆ. ಮೂಲ ಸಂಸ್ಕೃತಿ, ಜನಪದ ಕಥೆಗಳು ಹಿನ್ನೀರಿನಲ್ಲಿ ಮಾಯವಾಗಿವೆ. ಮುಳುಗಡೆ ಸಂತ್ರಸ್ತರ ಅರಣ್ಯರೋಧನ ಸಮಾಜಕ್ಕೆ ಮಾರವಾಗಿದೆ ಎಂದು ಹೇಳಿದರು. ಹಳ್ಳ, ನದಿ, ಕೆರೆಗಳಿಗೆ ಅಳವಡಿಸಿರುವ ಪಂಪ್ ಸೆಟ್ಗಳು ಐಸಿಯು ರೋಗಿಗೆ ಅಳವಡಿಸಿದ ನಾಳಗಳಂತೆ ಭಾಸವಾಗುತ್ತಿದೆ. ಮರಳು ಲೂಟಿ, ಪ್ಲಾಸ್ಟಿಕ್ ಬಳಕೆ, ಜಲಮೂಲಗಳ ನಾಶ, ಮರ ಕಡಿತಲೆಯಂತಹ ಪ್ರಕೃತಿ ಮೇಲಿನ ಮಾನವ ದೌರ್ಜನ್ಯ ತಡೆಯಬೇಕು. ಬೆಂಗಳೂರಿನ ದಾಹ ತೀರಿಸುವ ಶರಾವತಿ ಪಂಪ್ಡ್ ಸ್ಟೋರೇಜ್ ನಿಲ್ಲಬೇಕು. ಅತ್ಯಾಚಾರ, ಆತ್ಮಹತ್ಯೆ, ದುಶ್ಚಟಗಳ ಸಮಾಜದ ಹೊಣೆಗೇಡಿತನ ಶಿಕ್ಷಣದಿಂದ ನಾಶ ಮಾಡಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭ ಮಾತನಾಡಿದ ಶಾಸಕ ಆರಗ ಜ್ಞಾನೇಂದ್ರ ಸಾಹಿತ್ಯ ಸಮ್ಮೇಳನ ಭಾವಿ ಸಾಹಿತಿಗಳಿಗೆ ಸ್ಫೂರ್ತಿಯ ಸೆಲೆಯಾಗಬೇಕು. ಈಚೆಗೆ ಸತ್ಪರಂಪರೆಯ ಕೊಂಡಿ ಕಳಚುತ್ತಿದೆ. ಟೀಕೆ ಮಾಡುವುದು ಸುಲಭ. ಕೆಲಸ ಮಾಡುವುದು ಬಹಳ ಕಷ್ಟ ಎಂದರು. ಡಿಸಿಸಿ ಬ್ಯಾಂಕ್ ಅಧ್ಯಕ್ಷ ಆರ್.ಎಂ.ಮಂಜುನಾಥ ಗೌಡ ಮಾತನಾಡಿ ಸಮಾಜದೊಳಗೆ ಆಗುವ ಸಮಸ್ಯೆಗಳನ್ನು ಪ್ರತಿರೋಧಿಸುವ ಶಕ್ತಿಗಳು ಕಡಿಮೆಯಾಗುತ್ತಿದೆ. ವ್ಯಕ್ತಿಯೊಳಗಿನ ಅಂತರ್ಗತ ಗುಪ್ತಗಾಮಿ ಸಾಹಿತ್ಯದಿಂದ ಪ್ರಜ್ವಲಿಸುತ್ತದೆ. ಪ್ರಕೃತಿ ಸಾಹಿತ್ಯಕ್ಕೆ ಪ್ರೇರಣೆ. ಮುದ್ರಿತ ವಿಚಾರಗಳ ಬಗ್ಗೆ ಹೆಚ್ಚು ಚರ್ಚೆಯಾಗಬೇಕು ಎಂದು ಅಭಿಪ್ರಾಯಪಟ್ಟರು. ಸಂಸ್ಕೃತಿ ಮಂದಿರದ ಆವರಣದಲ್ಲಿ ಶಾಸಕ ಆರಗ ಜ್ಞಾನೇಂದ್ರ ಧ್ವಜಾರೋಹಣ ನೆರವೇರಿಸಿದರು. ಬಾಳೇಬೈಲು ಕನ್ನಡ ಭವನದಿಂದ ಸಾಂಸ್ಕೃತಿ ಮೆರವಣಿಗೆ ನಡೆಯಿತು. ಮೆರವಣಿಗೆಯನ್ನು ಸಹಕಾರಿ ಮುಖಂಡ ನಾಗರಾಜ ಶೆಟ್ಟಿ ಡೋಲು ಬಾರಿಸುವ ಮೂಲಕ ಉದ್ಘಾಟಿಸಿದರು. ಮಾಜಿ ಶಿಕ್ಷಣ ಸಚಿವ ಕಿಮ್ಮನೆ ರತ್ನಾಕರ ಸಮ್ಮೇಳನಾಧ್ಯಕ್ಷರಿಗೆ ಗೌರವಾರ್ಪಣೆ ಸಲ್ಲಿಸಿದರು. ತಾಲ್ಲೂಕು ಕಸಾಪ ಅಧ್ಯಕ್ಷ ಟಿ.ಕೆ.ರಮೇಶ್ ಶೆಟ್ಟಿ ಪ್ರಸ್ತಾವಿಸಿದರು. 10ನೇ ಸಮ್ಮೇಳನಾಧ್ಯಕ್ಷ ಎಂ.ನವೀನ್ ಕುಮಾರ್ ಕನ್ನಡ ಧ್ವಜ ಹಸ್ತಾಂತರಿಸಿದರು. ವೇದಿಕೆ ಕಾರ್ಯಕ್ರಮವನ್ನು ಚಿತ್ರ ಸಾಹಿತಿ ಕವಿರಾಜ್ ಉದ್ಘಾಟಿಸಿದರು. ಪಟ್ಟಣ ಪಂಚಾಯಿತಿ ಅಧ್ಯಕ್ಷ ಟಿ.ರಹಮತ್ ಉಲ್ಲಾ ಅಸಾದಿ, ಉಪಾಧ್ಯಕ್ಷೆ ಗೀತಾ ರಮೇಶ್, ಜಿಲ್ಲಾ ಕಸಾಪ ಅಧ್ಯಕ್ಷ ಡಿ.ಮಂಜುನಾಥ, ತಹಶೀಲ್ದಾರ್ ಎಸ್.ರಂಜಿತ್, ಇಓ ಶೈಲಾ ಎನ್, ಪ್ರಮುಖರಾದ ಡಿ.ಎಂ.ಮನುದೇವ್, ಜ್ಯೋತಿ ಮೋಹನ್, ಮಂಜುಳಾ ನಾಗೇಂದ್ರ, ಸುಶೀಲ ಶೆಟ್ಟಿ ಇದ್ದರು.



# ಯಕ್ಕನಹಳ್ಳಿ ಶ್ರೀಬಸವೇಶ್ವರಸ್ವಾಮಿ ರಥೋತ್ಸವ



**ಹೊನ್ನಾಳಿ:** ತಾಲೂಕಿನ ಯಕ್ಕನಹಳ್ಳಿ ಗ್ರಾಮದ ಶ್ರೀ ಬಸವೇಶ್ವರ ಸ್ವಾಮಿ ರಥೋತ್ಸವ ಬೆಳಗಿನಜಾವ ವಿವಿಧವಾದ್ಯಗಳೊಂದಿಗೆ ವಿಜೃಂಭಣೆಯಿಂದ ನಡೆಯಿತು.ಶ್ರೀ ಬಸವೇಶ್ವರ ಸ್ವಾಮಿ ರಥೋತ್ಸವಕ್ಕೆ ರಥದ ಮೇಲೆ ಕಳಸವನ್ನುಟ್ಟು ವಿವಿಧ ಬಣ್ಣಗಳ ಬಾವುಟಗಳನ್ನು ಕಟ್ಟಿ ವಿವಿಧ ಹೂಗಳಿಂದ ಅಲಂಕರಿಸಿದ ರಥದ ಸುತ್ತ ಉತ್ಸವ ಮೂರ್ತಿಗಳನ್ನು ಮೂರು ಬಾರಿ ಸುತ್ತರಿಸಿ ಶ್ರೀ ಬಸವೇಶ್ವರ ಮೂರ್ತಿನ್ನುಟ್ಟು ಬಾಳೆದಲೆ ಮೇಲೆ ಅನ್ನದ ಎಡೆಹಾಕಿ ಭಕ್ತರು ಕಾಯಿ ಹೊಡೆದ ನಂತರ ಜೈಕಾರ ಹಾಕುತ್ತಾ ಭಕ್ತರು ರಥವನ್ನು ಎಳೆಯುತ್ತಾರೆ. ಈ ವೇಳೆ ಗಡ್ಡವೇರತಿಪ್ಪೇಶ್ ಸಂಗಡಿಗರಿಂದ ಪುರವಂತಿಕೆ ಒಡಕುಗಳನ್ನು ಹೇಳಿದರು ಈ ಸಂದರ್ಭದಲ್ಲಿ ರಥಕ್ಕೆ ಒಣಕೊಬರಿಯನ್ನು ಸುಡುತ್ತಾ ಭಕ್ತರು ಮಂಡಕ್ಕಿಮೆಣಸಿನಕಾಳನ್ನು ಎಸೆದು ರಥವನ್ನು ಎಳೆಯುತ್ತಾ ತಮ್ಮ ಭಕ್ತಿ ಸರ್ಮಪಿಸಿದರು.ಮಾ.9 ರ ಭಾನುವಾರ ಬೆಳಿಗ್ಗೆ ಉಚ್ಚಾಯ ಮಹೋತ್ಸವ ಗ್ರಾಮದ ರಾಜಬೀದಿಗಳಲ್ಲಿ ನಡೆಯಿತು. ನಂತರ ಮಧ್ಯಾಹ್ನ ಕೂಲಂಬಿ ಶ್ರೀದುರ್ಗಮ್ಮ ಕುಂದೂರು ಗ್ರಾಮದ ಶ್ರೀ ಆಂಜನೇಯ ಸ್ವಾಮಿ, ಯರೇಚಿಕ್ಕನಹಳ್ಳಿ ಶ್ರೀಬಸವೇಶ್ವರ ದೇವರುಗಳನ್ನು ವಿವಿಧ ವಾದ್ಯಗಳೊಂದಿಗೆ ಗ್ರಾಮಕ್ಕೆ ಬರಮಾಡಿಕೊಂಡು ಗದ್ದುಗೆಯಲ್ಲಿ ಪ್ರತಿಷ್ಠಾಪಿಸಲಾಯಿತು. ಸಂಜೆ ನೂರಾರು ಮಹಿಳೆಯರು ಬಾಯಿ ಬೀಗ, ಯುವಕರು,ಮಕ್ಕಳು ಉರುಳು ಸೇವೆ ಸಮರ್ಪಿಸಿದರು ನಂತರ ಜವಳ ಕಾರ್ಯಕ್ರಮಗಳೂ ನಡೆದವು. ರಾತ್ರಿ ಶ್ರೀ ಬಸವೇಶ್ವರ-ನೀಲಮ್ಮ ದೇವರುಗಳಿಗೆ ದಾರ್ಮಿಕ ವಿದಿವಿಧಾನಗಳ ಮೂಲಕ ವಿಶೇಷ ಪೂಜೆ ಕೈಂಕಾರ್ಯ ನಡೆದವು .ಸೋಮವಾರ ಸಂಜೆ 4ಕ್ಕೆ ಎತ್ತುಗಳ ಮೆರವಣಿಗೆ, ನಂತರ ಯುವಕರು ವಾದ್ಯಗಳೊಂದಿಗೆ ಮೆರವಣಗೆಯ ಮೂಲಕ ಬಂದು ಓಕಳಿ ಕಾರ್ಯ ನಡೆಯಿತು, ರಾತ್ರಿ ಶ್ರೀ ಬಸವೇಶ್ವರ ಸ್ವಾಮಿ ಅಡ್ಡಪಲ್ಲಕ್ಕಿ ಮಹೋತ್ಸವ ವಿವಿದ ವಾದ್ಯಮೇಳಗಳೊಂದಿಗೆ ನಡೆಯಿತು ಗ್ರಾಮಸ್ಥರು ಮುಖಂಡರು ಭಕ್ತರು ಉತ್ಸವದಲ್ಲಿ ಭಕ್ತಿ ಸೇವೆ ಸಲ್ಲಿಸಿದರು.

# ಆತ್ಮ ಸಂಯಮ ಆಧ್ಯಾತ್ಮದ ಅಡಿಪಾಯ: ಶ್ರೀ ರಂಭಾಪುರಿ ಜಗದ್ಗುರುಗಳು

**ಬಾಳೆಹೊನ್ನೂರು:** ಮಾನವನ ಬದುಕು ಒತ್ತಡಗಳಿಂದ ಬಳಲಿ ಹೋಗಿದೆ. ಯಂತ್ರದಂತೆ ದುಡಿದರೂ ಸಂಪತ್ತು ಗಳಿಸಿದರೂ ಶಾಂತಿ ಕಾಣುತ್ತಿಲ್ಲ. ಬಾಳಿನ ವಿಕಾಸಕ್ಕೆ ಆಧ್ಯಾತ್ಮದ ಅರಿವು ಬೇಕು. ಆತ್ಮ ಸಂಯಮ ಆಧ್ಯಾತ್ಮ ಜೀವನದ ಅಡಿಪಾಯವಾಗಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ವೀರಗಾಸೆ-ಪುರವಂತರ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.ವಿಜ್ಞಾನ ತಂತ್ರಜ್ಞಾನದಿಂದ ಮನುಷ್ಯನ ಪ್ರಗತಿ ಅದ್ಭುತವಾಗಿದೆ. ಭೌತಿಕ ಸಿರಿ ಸಂಪತ್ತು ಅಧಿಕಾರ ನೆಮ್ಮದಿ ತರಲಾರದು. ಸತ್ಯ ಧರ್ಮದ ವಿಷಯದಲ್ಲಿ ಒಂದಿಷ್ಟಾದರೂ ಆಧ್ಯಾತ್ಮ ಜ್ಞಾನದ ಅರಿವು ಇರಬೇಕಾದುದು ಅವಶ್ಯಕ. ಬಡವನಿಗೆ ನೆಮ್ಮದಿ ಇರುತ್ತೆ ಹಣ ಇರಲ್ಲ. ಶ್ರೀಮಂತನಿಗೆ ಹಣ ಇರುತ್ತೆ ನೆಮ್ಮದಿ ಇರಲ್ಲ. ಹಣ ನೆಮ್ಮದಿ ಇದ್ದವರಿಗೆ ಒಳ್ಳೆಯ ಗುಣ ಇರಲ್ಲ. ಹಣ ಗುಣ ಮತ್ತು ನೆಮ್ಮದಿ ಇದ್ದವರು ಈ ಭೂಮಿಯ ಮೇಲೆ ಜಾಸ್ತಿ ದಿನ ಇರಲ್ಲ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಎಚ್ಚರಿಸಿದ್ದಾರೆ. ಇಂದಿನ ವಿಜ್ಞಾನ ಯುಗದಲ್ಲಿಯೂ ಸಹ ಶ್ರೀ ವೀರಭದ್ರಸ್ವಾಮಿಯ ಲೀಲೆ ಪವಾಡಗಳು ಅದ್ಭುತವಾಗಿವೆ. ದುಷ್ಟಶಕ್ತಿಗಳ ನಿರ್ಮೂಲನೆಗೆ ಮತ್ತು ಶಿವಶಕ್ತಿ ಸಂವರ್ಧನೆ ಶ್ರೀ ವೀರಭದ್ರಸ್ವಾಮಿಯ ಅವತಾರವಾಗಿದೆ. ಜಗದ ಕತ್ತಲೆ ಕಳೆದು ಜ್ಞಾನದ ಬೆಳಗು ಬೀರಲು ಗುರು ಬಹಳಷ್ಟು ಮುಖ್ಯ. ವೀರಶೈವ ಸಂಸ್ಕೃತಿಯ ಬೆಳವಣಿಗೆಗೆ ವೀರಗಾಸೆ ಮತ್ತು ಪುರವಂತರ ಕೊಡುಗೆ ಅಪೂರ್ವವಾದುದು. ಪ್ರಾಚೀನ ಸಂಸ್ಕೃತಿಯ ಅರಿವು ಮೂಡಿಸುವುದೇ ಈ ಸಮಾರಂಭದ ಮೂಲ ಉದ್ದೇಶವೆಂದರು.ಸಮಾರಂಭವನ್ನು ಉದ್ಘಾಟಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಶಿವ ಧರ್ಮದ ತಂಗಾಳಿ ಜೀವನ ಉನ್ನತಿಗೆ ಸಹಕಾರಿ. ನಿರ್ಭಯದಿಂದ ಬಾಳುವುದೇ ನಿಜವಾದ ಬದುಕು. ಬದುಕು ಕಲಿಸುವ ಪಾಠಗಳು ಚಿತ್ರ ವಿಚಿತ್ರ. ಅಂಕಗಳನ್ನು ನೀಡಲು ಯಾರೂ ಇಲ್ಲ. ಸಹನೆ ತಾಳ್ಮೆ ಜೊತೆಗಿಲ್ಲದಿದ್ದರೆ ಉನ್ನತಿ ಸಾಧ್ಯವಿಲ್ಲ. ವೀರಶೈವ ಧರ್ಮದಲ್ಲಿ ವೀರಗಾಸೆ ಮತ್ತು ಪುರವಂತರಿಗೆ ವಿಶೇಷ ಗೌರವವಿದೆ. ವೀರಭದ್ರನ ಪರಾಕ್ರಮ ಧರ್ಮ ಸಂರಕ್ಷಣೆಗೆ ಮೂಲವಾಗಿದೆ ಎಂದರು. ವಾಣಿಜ್ಯ ತೆರಿಗೆ ಅಧಿಕಾರಿ ಭುವನೇಶ್ವರಿ ಪಾಟೀಲ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು. ರಂಭಾಪುರಿ ಬೆಳಗು ಮಾಸ ಪತ್ರಿಕೆಯನ್ನು ಬೆಂಗಳೂರು ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾ ಸಂಸ್ಥೆ ಅಧ್ಯಕ್ಷ ಯು. ಎಂ.ಬಸವರಾಜ್ ಬಿಡುಗಡೆ ಮಾಡಿ ಮಾತನಾಡಿದರು. ಧರ್ಮ ಧ್ವಜಾರೋಹಣ ನೆರವೇರಿಸಿದ ಚಿಕ್ಕಮಗಳೂರು ಶಾಸಕ ಹೆಚ್.ಡಿ.ತಮ್ಮಯ್ಯ ಮಾತನಾಡಿ ಮಾನವೀಯ ಸಂಬಂಧಗಳು ಶಿಥಿಲಗೊಳ್ಳುತ್ತಿರುವ ಇಂದಿನ ದಿನಗಳಲ್ಲಿ ಧರ್ಮ ಪ್ರಜ್ಞೆ, ರಾಷ್ಟ್ರ ಪ್ರಜ್ಞೆ ಹಾಗೂ ಸಾಮಾಜಿಕ ಪ್ರಜ್ಞೆ ಅವಶ್ಯಕ. ಮಾನವ ಧರ್ಮಕ್ಕೆ ಜಯವಾಗಲಿ ಎನ್ನುವ ಶ್ರೀ ರಂಭಾಪುರಿ ಪೀಠದ ಸಂದೇಶ ಭಾವೈಕ್ಯತೆಗೆ ಸಾಕ್ಷಿಯಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಸಕಲ ಜೀವಾತ್ಮರಿಗೆ ಶುಭ ಹಾರೈಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವವಹಿಸಿದ ಸಮಾರಂಭದಲ್ಲಿ ಕವಲೇದುರ್ಗ ಭುವನಗಿರಿ ಸಂಸ್ಥಾನ ಮಠದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು ಸವಿಸ್ತಾರವಾಗಿ ಪ್ರಾಸ್ತಾವಿಕ ನುಡಿ ನಮನ ಸಲ್ಲಿಸಿದರು. ಮಳಲಿ ಸಂಸ್ಥಾನ ಮಠದ ಡಾ॥ ನಾಗಭೂಷಣ ಶ್ರೀಗಳು, ಕಡೇನಂದಿಹಳ್ಳಿ ರೇವಣಸಿದ್ದೇಶ್ವರ ಶ್ರೀಗಳು, ಕಾರ್ಜುವಳ್ಳಿ ಸದಾಶಿವ ಶ್ರೀಗಳು ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ತೆಂಡೆಕೆರೆ, ಧನಗೂರು, ಸಂಗೊಳ್ಳಿ, ಬೇರುಗಂಡಿ, ದೋರನಹಳ್ಳಿ, ಅಚಲೇರಿ, ದೊಡ್ಡಸಗರ, ಸಿದ್ಧರಬೆಟ್ಟ, ನಂದಿತಾವರೆ ಶ್ರೀಗಳು ಉಪಸ್ಥಿತರಿದ್ದರು.

# ತಂದೆ-ತಾಯಿಯವರ ಪಾದಪೂಜೆ ಮಾಡಿದರೆ ಸಾಕು ಪುಣ್ಯ ಪ್ರಾಪ್ತಿ

**ರಿಪ್ಪನ್‌ಪೇಟೆ:** ಭಗವಂತನಲ್ಲಿ ಭಕ್ತಿಯಿಂದ ಪ್ರಾರ್ಥಿಸುವುದರೊಂದಿಗೆ ತಾಯಿ ತಂದೆಯವರು ಸಂಸ್ಕಾರ ಭರಿತರಾದರೆ ಮಕ್ಕಳು ಸಹ ಸಂಸ್ಕಾರ ಭರಿತರಾಗಲು ಸಾಧ್ಯ.ವೆಂದ ಮೂಲೆಗದ್ದೆ ಸದಾನಂದ ಶಿವಯೋಗಾಶ್ರಮದ ಮ.ನಿ.ಪ್ರ.ಅಭಿನವ ಚನ್ನಬಸವ ಮಹಾಸ್ವಾಮಿಜಿ ಹೇಳಿದರು. ರಿಪ್ಪನ್‌ಪೇಟೆ ಸಮೀಪದ ಕಾರಗೋಡು ಗ್ರಾಮದ ಶ್ರೀ ಕಲಾನಾಥೇಶ್ವರ ದೇವಸ್ಥಾನದ ಪ್ರಥಮ ವರ್ಷದ ಪ್ರತಿಷ್ಠಾ ವರ್ಧಂತೋತ್ಸವ ಧಾರ್ಮಿಕ ಸಮಾರಂಭದ ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿ ಇತ್ತೀಚೆಗೆ ಭಾರತದೇಶದಲ್ಲಿ ದೊಡ್ಡ ಕ್ರಾಂತಿಯಂತಾದ ಮಹಾನ್ ಕುಂಭ ಮೇಳದಲ್ಲಿ ಭಾಗವಹಿಸಿ ಗಂಗಾ ಯಮುನಾ ಸರಸ್ವತಿ ಸ್ನಾನ ಮಾಡುವುದರೊಂದಿಗೆ ಋಷಿ ಮುನಿಗಳ ಶಕ್ತಿಯುತ ಪುರುಷರಾಗಿದ್ದಾರೆ ಅವರ ದರ್ಶನ ಪಡೆದು ಪುಣ್ಯವಂತರಾಗುತ್ತಾರೆಂಬ ನಂಬಿಕೆಯಿದ್ದು ಹಲವರು ಈ ಪುಣ್ಯ ಕಾರ್ಯಕ್ಕೆ ಬಾಗವಹಿಸಲಾಗಿಲ್ಲ ಎಂದು ಬೇಸರ ಪಡುವ ಅಗತ್ಯವಿಲ್ಲ. ತಂದೆ.ತಾಯಿಯರ ಪಾದ ಪೂಜೆ ಮಾಡಿ ಪಾದ ತೊಳೆದ ಪಾದೋದಕವನ್ನು ಸ್ವೀಕರಿಸಿದರೆ ಸಾಕು ಹತ್ತು ಪಟ್ಟು ಪುಣ್ಯ ಲಭಿಸುವುದೆಂದು ಹೇಳಿದ ಶ್ರೀಗಳು ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ ಶಿಕ್ಷಣವನ್ನು ಕೊಡಿಸಿ ಸುಸಂಸ್ಕೃತ ಸಮಾಜವನ್ನಾಗಿಸುವ ಕಾರ್ಯವನ್ನು ತಂದೆ ತಾಯಂದಿರು ಮಾಡಬೇಕಾಗಿದೆ ಎಂದರು. ಧಾರ್ಮಿಕ ಕೇಂದ್ರಗಳಿಂದ ಶಾಂತಿ ನೆಮ್ಮದಿ ಪಡೆಯಲು ಸಾಧ್ಯವೆಂದ ಶ್ರೀಗಳು ಜಾತಿ ಬೇದ ಭಾವನೆ ಬೆಳಸದೆ ಚಾಡಿಮಾತಿನಿಂದ ಮನೆ ಒಡೆಯುವುದು ಯಾರಿಗೂ ಶೋಭೆ ತರುವುದಿಲ್ಲ.ದೇವಸ್ಥಾನ ಮಠ ಮಂದಿರಗಳಿಗೆ ಹೋಗಿ ಭಕ್ತಿಯಿಂದ ಭಗವಂತನ ನೆನೆದರೆ ಸಾಕು ಬದುಕಿನಲ್ಲಿ ಶಾಂತಿ ನೆಮ್ಮದಿಯಿಂದಿರಲು ಸಾಧ್ಯವೆಂದರು. ಧಾರ್ಮಿಕ ಸಭೆಯಲ್ಲಿ ಕಲಾನಾಥೇಶ್ವರ ಸ್ವಾಮಿ ದೇವಸ್ಥಾನ ಸೇವಾ ಸಮಿತಿಯ ಅಧ್ಯಕ್ಷ ನಾಗಭೂಷಣ,ಕಾರ್ಯದರ್ಶಿ ಮಂಜುನಾಥ, ಚೇತನಕುಮಾರ್,ಹಾಗೂ ಕಲಾನಾಥೇಶ್ವರ ಮಹಿಳಾ ಭಜನಾ ತಂಡದವರು ಹಾಗೂ ಕಾರಗೋಡು ಬೆಳಕೋಡು ಕರಡಿಗಾ ಕಣಬಂದೂರು ಮೂಗುಡ್ತಿ ವರನಹೊಂಡ ಸುತ್ತುಮುತ್ತಲಿನ ಭಕ್ತ ಸಮೂಹ ಪಾಲ್ಗೊಂಡಿದ್ದರು.



# ತಂದೆ-ತಾಯಂದಿರು ಸಂಸ್ಕಾರವಂತರಾದಾಗ ಮಕ್ಕಳನ್ನು ಸಂಸ್ಕಾರವಂತರನ್ನಾಗಿಸಲು ಸಾಧ್ಯವಿದೆ

**ತೀರ್ಥಹಳ್ಳಿ:** ತಂದೆತಾಯಂದಿರು ಸಂಸ್ಕಾರವಂತರಾದಾಗ ಮಕ್ಕಳನ್ನು ಸಂಸ್ಕಾರವಂತರನ್ನಾಗಿಸಲು ಸಾಧ್ಯವಿದೆ ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಅಶೋಕ ಹಾರ್ನಹಳ್ಳಿ ಅಭಿಪ್ರಾಯಪಟ್ಟರು. ಇಲ್ಲಿನ ಬ್ರಾಹ್ಮಣ ಸಂಘದ ಮುಖವಾಣಿ ವಿಪ್ರಭಾರತೀ ತ್ರೈಮಾಸಿಕವು 25ವರ್ಷಗಳನ್ನು ಪೂರೈಸಿ ಹೊರತಂದಿರುವ 100ನೆಯ ವಿಶೇಷ ಸಂಚಿಕೆಯನ್ನು ಬಿಡುಗಡೆಗೊಳಿಸಿ ಮಾತನಾಡಿದ ಇವರು ಇಂದಿನ ದಿನಮಾನದಲ್ಲಿ ಸಮಾಜ ಬಂಧುಗಳು ಆರ್ಥಿಕವಾಗಿ ಸಬಲರಾಗುತ್ತಿದ್ದಾರೆ. ಬಹುತೇಕರು ಹೊಂದಾಣಿಕೆಯ ಕೊರತೆಯನ್ನು ಕಾಣುತ್ತಿದ್ದಾರೆ. ಕೌಟುಂಬಿಕ ನ್ಯಾಯಾಲಯ ಸೇರಿದಂತೆ ಇತರೆಡೆ ವ್ಯಾಜ್ಯವನ್ನು ಎದುರಿಸುತ್ತಾರೆ. ಸರಳ ಬದುಕು ಮತ್ತು ಧರ್ಮದ ಔನ್ನತ್ಯೀಕರಣ ಅದರ ಮೌಲ್ಯಗಳನ್ನು ಅರಿತುಕೊಳ್ಳಲು ಸಂಸ್ಕಾರ ಶಿಬಿರಗಳ ಅಗತ್ಯ ಎದ್ದುಕಾಣುತ್ತಿದೆ. ತಮ್ಮ ಅಧ್ಯಕ್ಷೀಯ ಅವಧಿಯಲ್ಲಿ ಕೌಟುಂಬಿಕ ನ್ಯಾಯಾಲಯದ ಮೆಟ್ಟಲೇರದಂತೆ ತಡೆಯಲು ಸಮಾಲೋಚನೆಗೆ ಆದ್ಯತೆ ನೀಡುವ ಪ್ರೇರಣೆ ಹೊಂದಿದ್ದರೂ ಅದನ್ನು ಮಾಡುವಲ್ಲಿ ಅವಧಿ ಮುಕ್ತಾಯವಾಗುತ್ತಿದೆ. ಮುಂದೆ ಚುನಾವಣೆಗೆ ಸ್ಪರ್ಧಿಸಲಿರುವ ಭಾನುಪ್ರಕಾಶ್‌ರವರಿಂದ ಈಕಾರ್ಯ ವಾಗುತ್ತದೆಂದರು. ಇಂದು ಬಹುತೇಕ ಸಂಘಟನೆಗಳು ಮನೆಯೊಂದು ಮೂರು ಬಾಗಿಲು ಆಗಿದ್ದರೂ ಇಲ್ಲಿಯ ಬ್ರಾಹ್ಮಣ ಸಂಘದಲ್ಲಿ ಇದುವರೆಗೂ ಯಾವುದೇ ಭಿನ್ನಾಭಿಪ್ರಾಯಗಳನ್ನು ಹೊಂದದಿರುವುದಕ್ಕೆ ಪ್ರಶಂಸೆ ವ್ಯಕ್ತಪಡಿಸಿ, ಮುಂದೆಯೂ ಭಿನ್ನಾಭಿಪ್ರಾಯ ರೂಪುಗೊಳ್ಳದಂತೆ ಕಾರ್ಯನಿರ್ವಹಿಸುವಂತೆ ಕರೆನೀಡಿ ನೂರು ಸಂಚಿಕೆಗಳನ್ನು ಹೊರ ತಂದರೂ ಯಾವುದೇ ವಿವಾದವನ್ನು ತರದಂತೆ ಎಚ್ಚರಿಕೆವಹಿಸಿರುವುದರ ಕುರಿತು ಪ್ರಶಂಸೆ ವ್ಯಕ್ತಪಡಿಸಿದರು. ಇಂದಿನ ಜನತೆ ಸಾಮಾಜಿಕ ಜಾಲತಾಣಗಳಲ್ಲಿ ಗೊಂದಲಕ್ಕೆ ಸಿಲುಕುತ್ತಿದ್ದಾರೆ. ಅವರಿಗೆ ಸೂಕ್ತ ಮಾರ್ಗದರ್ಶನದ ಅಗತ್ಯವಿದೆ. ತಾಲೂಕು ಜಿಲ್ಲಾ ಸಂಘಟನೆಗಳು ಸಮಾಜದ ಪ್ರತಿಭಾನ್ವಿತರನ್ನು ಗುರುತಿಸಿ ಗೌರವಿಸುವ ಕಾರ್ಯಮಾಡಬೇಕು ಆಗ ರಾಜ್ಯ ಸಂಘವೂ ಅಂತಹರನ್ನು ಗುರುತಿಸಲು ಸಾಧ್ಯ ಎಂದು ಹೇಳಿದರು.
20 ವಿದ್ಯಾರ್ಥಿಗಳಿಗೆ ಸುಮಾರು 1.25ಲಕ್ಷರೂ.ಗಳ ಶೈಕ್ಷಣಿಕ ದತ್ತಿನಿಧಿಯನ್ನು ವಿತರಿಸಿ ಮಾತನಾಡಿದ ಹೊರನಾಡು ಆದಿಶಕ್ತ್ಯಾತ್ಮಕ ಅನ್ನಪೂರ್ಣೇಶ್ವರೀ ದೇವಸ್ಥಾನದ ಧರ್ಮದರ್ಶಿ ಭೀಮೇಶ್ವರ ಜೋಷಿಯವರು ಎಲ್ಲ ವರ್ಗದ ಸಮಾಜದವರೊಂದಿಗೆ ಸೇರಿ ಉನ್ನತ ಆದರ್ಶಗಳನ್ನು ಹೊಂದುವ ಮೂಲಕ ಇತರರಿಗೆ ಮಾದರಿಯಾಗಿರಬೇಕೆಂದು ಶೈಕ್ಷಣಿಕ ದತ್ತಿನಿಧಿ ಪುರಸ್ಕೃತ ವಿದ್ಯಾರ್ಥಿಗಳಿಗೆ ಕರೆನೀಡಿದರು. ಸಮಾಜದ ಆಚಾರ, ವಿಚಾರ, ಸಂಸ್ಕಾರ, ಸಂಸ್ಕೃತಿಗಳನ್ನು ಉಳಿಸಿ ಮುಂದುವರೆಸುವ ಕಾರ್ಯವಾಗಬೇಕು. ಎಂತಹಾ ಐಟಿ ಬಿಟಿ ಕಂಪೆನಿಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದರೂ ಸಿಗುವ ಶನಿವಾರ ಭಾನುವಾರದಂದು ಒಂದುವಾರ ಕುಟುಂಬದೊಂದಿಗೂ, ಇನ್ನೊಂದುವಾರ ಪೂರ್ವಿಕರ ಕೃಷಿಜಮೀನಿನಲ್ಲಿಯೂ, ಮತ್ತೊಂದು ವಾರ ವೈಯಕ್ತಿಕಕ್ಕೆ ಮೀಸಲಿಟ್ಟು ಮಗದೊಂದು ವಾರ ಸಮಾಜಮುಖಿ ಕಾರ್ಯಗಳಲ್ಲಿ ಪಾಲ್ಗೊಳ್ಳಬೇಕು. ಮನುಷ್ಯ ಭೂ ಋಣ, ಪಿತೃಋಣ, ದೈವ ಋಣಗಳನ್ನು ಹೊತ್ತುಕೊಂಡೇ ಹುಟ್ಟಿರುತ್ತಾನೆ. ತನ್ನ ಋಣಭಾರವನ್ನು ಕಡಿಮೆಮಾಡಿಕೊಳ್ಳಲು ಸಂಸ್ಕಾರಯುತ ಕಾರ್ಯಮಾಡಬೇಕೆಂದು ಕರೆನೀಡಿದರು.
ಈ ಸಂದರ್ಭದಲ್ಲಿ ವಿಪ್ರಭಾರತೀ ತ್ರೈಮಾಸಿಕದ ಪ್ರಧಾನ ಸಂಪಾದಕ ವಿ. ಆರ್. ಹೆಗಡೆಯವರನ್ನು ಅಭಿನಂದಿಸಲಾಯಿತು. ಸಂಘದ ನಿಕಟಪೂರ್ವಾಧ್ಯಕ್ಷ ಜಿ. ಎಸ್. ನಾರಾಯಣರಾವ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವೇದಿಕೆಯಲ್ಲಿ ಜಿಲ್ಲಾ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ನಟರಾಜ ಭಾಗವತ್, ತಾಲೂಕು ಸಂಘದ ಪ್ರಧಾನ ಕಾರ್ಯದರ್ಶಿ ವಿ. ಸತೀಶ್, ಖಜಾಂಚಿ ವೆಂಕಟೇಶ್ ಉಪಸ್ಥಿತರಿದ್ದರು. ಅಧ್ಯಕ್ಷ ಟಿ. ಎ. ಚಂದ್ರಶೇಖರ್ ಸಭಾಧ್ಯಕ್ಷತೆ ವಹಿಸಿದ್ದರು. ನಿರ್ದೇಶಕರುಗಳಾದ ಬಿ.ಕೆ. ವಾದಿವಾಜ್, ರಮೇಶ್ ಅಡಿಗ ಕಾರ್ಯಕ್ರಮ ನಿರೂಪಿಸಿದರು.



# ಅಂಬೇಡ್ಕರ್ ಎನ್ನುವ ಹೆಸರೇ ಪುರೋಹಿತ ವರ್ಗ – ನಾಮದೇವ ನಾಗರಾಜ

**ಗದಗ** : ಶಿವಶರಣ ಮಾದಾರ ಚನ್ನಯ್ಯರ ವೇದಿಕೆಯಲ್ಲಿ ಆಸೀನರಾಗಿರುವ ವಿವಿಧ ಸಮುದಾಯದ ಗಣ್ಯರಿಗೆ ಗದಗ ಜಿಲ್ಲಾ ಸವಿತಾ ಸಮಾಜದ ಪರವಾಗಿ ಗೌರವಗಳೊಂದಿಗೆ ಸ್ವಾಗತವನ್ನು ನಾಮದೇವ್.ನಾಗರಾಜ

ಮಾಲೀಕರು.ಸ್ಪಿನ್ ಸೇವಾ ಪ್ರತಿಷ್ಠಾನ ಬೆಂಗಳೂರು ಇವರು ಕೋರಿದರು

ರಾಜ್ಯದ ಅನೇಕ ಜಿಲ್ಲೆಗಳಿಗೆ ಮಾದರಿ ಆಗುವಂತಹ ಅನೇಕ ಕಾರ್ಯಕ್ರಮಗಳನ್ನು ಸವಿತಾ ಸಮಾಜದ ಯುವ ನಾಯಕ ಶ್ರೀ ಕೃಷ್ಣ ಎಚ್ ಹಡಪದ ನೇತೃತ್ವದಲ್ಲಿ ಹಿರಿಯರಾದ ಹನಮಂತಪ್ಪ ರಾಂಪೂರ ಪರಶುರಾಮ ಕೊಟೇಕಲ್ಲ ಅರುಣ ರಾಂಪೂರ ರಮೇಶ ರಾಂಪೂರ ರಾಜು ಮಾನೆ ವಿಕಾಸ ಕ್ಷೀರಸಾಗರ ಬಸವರಾಜ ಗೌಡರ ವಿನಾಯಕ ರಾಯಚೂರ ಹಾಗೂ ಇನ್ನಿತರೆ ಪ್ರಮುಖರ ಮುಂದಾಳತ್ವದಲ್ಲಿ ಕ್ರಮಬದ್ಧವಾಗಿ ಆಚರಿಸಿಕೊಂಡು ಬರುತ್ತಿರುವ ಗದಗ ಜಿಲ್ಲಾ ಸವಿತಾ ಸಮಾಜಕ್ಕೆ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸಿದರು

ಇಂದಿನ ಈ ಕಾರ್ಯಕ್ರಮಕ್ಕೆ ಬೆಂಗಳೂರು ಮೈಸೂರು ಮಂಡ್ಯ ಚಿತ್ರದುರ್ಗ ಚಿಕ್ಕಮಗಳೂರು ಕಾರವಾರ ಉತ್ತರಕನ್ನಡ

ಬಳ್ಳಾರಿ ಹುಬ್ಬಳ್ಳಿ ಧಾರವಾಡ ಹಾವೇರಿ ಯಾದಗಿರಿ ಸುರಪೂರ ಹೂವಿನ ಹಡಗಲಿ ವಿಜಯಪೂರ ದಾವಣಗೇರಿ ಜಿಲ್ಲೆಗಳಿಂದಲೂ ಆಗಮಿಸಿರುವ ನನ್ನ ಸಮುದಾಯದ ಬಂಧುಗಳಿಗೆ ಇಲ್ಲಿ ನೆರೆದಿರುವ ನನ್ನ ಸಹೋದರ ಸಮುದಾಯಗಳ ಪರವಾಗಿ ಸ್ವಾಗತವನ್ನು ಬಯಸಿ ಮಾತನಾಡುತ್ತಾ

ಗದಗ ಜಿಲ್ಲೆಯ ನಾಲ್ಕಾರು ತಾಲೂಕುಗಳಿಂದ ಆಗಮಿಸಿರುವ ಮಾತೆಯರನ್ನು ನೋಡಿದಾಗ ನನಗೊಂದು ಶ್ಲೋಕದ ನೆನಪಾಗುವುದು, ಅರುಂದತ್ಯನುಸೂಯಾಚ ಸಾವಿತ್ರಿ ಜಾನಕಿ ಸತೀ ದ್ರೌಪದಿ ಕನ್ನಗಿ ಗಾರ್ಗಿ ಮೀರಾ ದುರ್ಗಾವತೀತತಾ ಲಕ್ಷ್ಮೀ ರಹಲ್ಯ ಚನ್ನಮ್ಮ ರುದ್ರಮಾಂಬಾ ಸುವಿಕ್ರಮ ನಿವೇದಿತಾ ಸಾರದಾಚ ಪ್ರಣಮ್ಯಾ ಮಾತೃದೇವತಾ?

ಮುಂದಿನ ದಿನಗಳಲ್ಲಿ ಗದಗ ಜಿಲ್ಲಾ ಸವಿತಾ ಸಮಾಜದಿಂದ ಮಾತೆಯರಿಗೂ ಸ್ಥಾನಮಾನ ಸಿಗಲಿ, ಜಿಲ್ಲೆಯಲ್ಲಿ ಸಮುದಾಯದ ಮಹಿಳಾ ಸಂಘಟನೆಯೂ ಜಾಗೃತವಾಗಲಿ. ಗಂಗೇಚ ಯಮುನೇಚೈವ ಗೋದಾವರಿ ಸರಸ್ವತಿ

ನರ್ಮದೇ ಸಿಂಧು ಕಾವೇರಿ ಜಲೆಸ್ಮಿನ್ ಸನ್ನಿಧಿ ಕುರು.

ಭಾರತದ ಅನೇಕ ಪರ್ವತಗಳೂ ಸೇರಿದಂತೆ ನದಿಗಳಿಗೆ ಮಾತೆಯರ ಹೆಸರು ಇರುವುದು ಭಾರತ ಮಾತೃಪ್ರಧಾನ ದೇಶ ಆಗಿರುವುದರಿಂದ. ಈಗಷ್ಟೇ ಹಿರಿಯರೊಬ್ಬರು ಮಾತನಾಡಿದ್ದನ್ನು ಕೇಳಿದ ನಂತರ ನಾನು ಇಂದು ಮಾತನಾಡಬೇಕಿದ್ದ ವಿಷಯವೇ ಬದಲಾಯಿತು. ಶ್ರೀಯುತರ ಆವೇಶ ನುಡಿಗಳು ಮನುವಾದಿ, ಪುರೋಹಿತ ವರ್ಗದವರು ನಮ್ಮನ್ನು ಇಂದಿಗೂ ತುಳಿಯುತ್ತಿದ್ದಾರೆ ನಾವೆಲ್ಲರೂ ಬಹಳ ನೊಂದ ಸಮುದಾಯ ಎಂಬ ಆವೇಶ ಭರಿತ ಮಾತುಗಳನ್ನು ಕೇಳಿದ ನಾನು ಆಡಬೇಕಿದ್ದ ಮಾತುಗಳಲ್ಲಿಯೂ ಇಲ್ಲಿ ನಿಮಗೆ ಸ್ಪಷ್ಟ ಪಡಿಸುವ ಸಲುವಾಗಿ ಹೇಳುತ್ತಿದ್ದೇನೆ. ಇಂದು ಭಾರತ ಭಾರತವಾಗಿ ಉಳಿಯುವುದಕ್ಕೆ ಕಾರಣ ಡಾ? ಬಿ ಆರ್ ಅಂಬೇಡ್ಕರ್, ನಮ್ಮೆಲ್ಲರ ಹೃದಯದಲ್ಲಿ ಡಾ? ಬಿ ಆರ್ ಅಂಬೇಡ್ಕರ್ ರವರು ಇದ್ದಾರೆ. ಶ್ರೀಯುತರ ಆವೇಶ ಭರಿತ ಮಾತುಗಳಲ್ಲಿ ಪುರೋಹಿತ ವರ್ಗದವರು ನಮ್ಮನ್ನು ತುಳಿಯುತ್ತಿದ್ದಾರೆ ಅಂಬೇಡ್ಕರ್ ರವರು ಇರದಿದ್ದರೆ ಇಂದು ನಾವ್ಯಾರೂ ಇರುತ್ತಿರಲಿಲ್ಲ ಎಂದು ಹೇಳಿರುವುದು ಸತ್ಯವೇ ಆದರೂ ನಾವು ಇಲ್ಲಿ ಗಮನಿಸಬೇಕಾದ ವಿಷಯ ಅಂಬೇಡ್ಕರ್ ಎನ್ನುವ ಹೆಸರೇ ಪುರೋಹಿತ ವರ್ಗ, ಬ್ರಾಹ್ಮಣ ಸಮಾಜದ ಶ್ರೀಮಂತ ಹೃದಯದ ಶಿಕ್ಷಕರೇ ಅಂಬೇಡ್ಕರ್. ಮತ್ತು ಪೆಂಡ್ಸೆ. ಎಂದ ಅವರು

ಪೆಂಡ್ಸೆ ಮತ್ತು ಅಂಬೇಡ್ಕರ್ ಎಂಬ ಇಬ್ಬರು ಶಿಕ್ಷಕರು ಅಸ್ಪೃಶ್ಯತೆಯನ್ನು ಅನುಸರಿಸುತ್ತಿರಲಿಲ್ಲ. ಅಸ್ಪೃಶ್ಯತೆ ಆಚರಣೆ ಮಹಾಪಾಪ ಎನ್ನುತ್ತಿದ್ದ ಈರ್ವರು ಸಹೃದಯಿ ಮಾನವೀಯತೆ ಉಳ್ಳವರಾಗಿದ್ದರು. ಇವರು ಬಡ ವಿದ್ಯಾರ್ಥಿಗಳಿಗೆ ಧರಿಸಲು ಬಟ್ಟೆ ಕೊಡಿಸುವುದು, ಆರ್ಥಿಕ ಸಹಾಯ ಮಾಡುವುದು ಸೇರಿದಂತೆ ತಮ್ಮ ಕೈಲಾಗುವ ಎಲ್ಲಾ ತರಹದ ಸಹಾಯ ಮಾಡುತ್ತಿದ್ದರು. ಎಂದು ಹೇಳಿದರು

ಪ್ರಕೃತಿಯಲ್ಲಿ ಕೆಟ್ಟದ್ದು ಎಷ್ಟಿತ್ತೋ ಒಳ್ಳೆಯದೂ ಸಹ ಅಷ್ಟೇ ಇರುತ್ತದೆ. ಎಲ್ಲದ್ದೂ ಕೆಟ್ಟದಿದ್ದರೆ ಪ್ರಕೃತಿ ಜೀವಂತವಾಗಿ ಉಳಿಯುತ್ತಿರಲಿಲ್ಲ. ಅದೇ ರೀತಿ ಸಮಾಜದಲ್ಲಿ ಕೆಟ್ಟವರು ಎಷ್ಟಿರುತ್ತಾರೋ ಒಳ್ಳೆಯವರೂ ಸಹ ಇರುತ್ತಾರೆ. ಎಲ್ಲರೂ ಕೆಟ್ಟವರಾದರೆ ಆ ಸಮಾಜ ಬದುಕಿರುವುದಿಲ್ಲ.

ಇತಿಹಾಸವನ್ನು ಹಿಂದಿರುಗಿ ನೋಡಿದಾಗ ಕೆಟ್ಟವರ ಹೆಸರು ಇತಿಹಾಸದ ಪುಟಗಳಲ್ಲಿ ಜೀವಂತವಾಗಿರುವುದಿಲ್ಲ. ಆದರೆ ಒಳ್ಳೆಯವರ ಹೆಸರು ಇತಿಹಾಸದ ಪುಟಗಳಲ್ಲಿ ಶಾಶ್ವತವಾಗಿ ಉಳಿದಿದೆ, ಉಳಿಯುತ್ತದೆ. ಹಾಗಾಗಿಯೇ ಅಂಬೇಡ್ಕರ್ ರವರು ಓದುತ್ತಿದ್ದ ಪ್ರಾಥಮಿಕ ಶಾಲೆಯಲ್ಲಿ ಜಾತೀಯತೆ ಮಾಡುತ್ತಿದ್ದ ಶಿಕ್ಷಕರ ಹೆಸರು ಈಗ ಉಳಿದಿಲ್ಲ. ಆದರೆ ಸಹೃದಯಿಗಳಾದ ಪೇಂಡ್ಸೆ ಮತ್ತು ಅಂಬೇಡ್ಕರ್ ಎಂಬ ಶಿಕ್ಷಕರ ಹೆಸರು ಶಾಶ್ವತವಾಗಿ ಉಳಿದಿದೆ. ಎಂದರು

ಅಂಬೇಡ್ಕರ್ ಎಂಬ ಶಿಕ್ಷಕರಿಗೆ ಭೀಮನ ಮೇಲೆ ಬಹಳ ಪ್ರೀತಿಯಿತ್ತು. ಅವರ ಮನೆಯಿಂದ ತಂದಿದ್ದ ಊಟದಲ್ಲಿ ಒಂದು ಭಾಗವನ್ನು ಭೀಮನಿಗೆ ನೀಡುತ್ತಿದ್ದರು. ಭೀಮನ ಪೂರ್ವಿಕರ ಊರು ಅಂಬವಾಡೆ ಎಂಬ ಹಳ್ಳಿಯಾದ್ದರಿಂದ ತಂದೆ ರಾಮ್ ಜಿ ಸಕ್ಪಾಲರು ಭೀಮನಿಗೆ ಅಂಬವಾಡೇಕರ್ ಎಂದು ಹೆಸರಿಡಲು ನಿರ್ಧರಿಸಿದನ್ನು ಸ್ಮರಿಸಿ

ಈ ಹೆಸರು ಕರೆಯಲು ಅಷ್ಟು ಚೆನ್ನಾಗಿಲ್ಲ ಎಂದು ಭಾವಿಸಿದ ಶಿಕ್ಷಕರಾದ ಅಂಬೇಡ್ಕರರು ತನ್ನ ಪ್ರೀತಿಯ ನೆಚ್ಚಿನ ವಿದ್ಯಾರ್ಥಿಯಾದ ಭೀಮನಿಗೆ ತನ್ನ ಹೆಸರನ್ನೇ ಇಟ್ಟು, ಇದೇ ಹೆಸರನ್ನು ಶಾಲೆಯ ದಾಖಲಾತಿ ಪುಸ್ತಕದಲ್ಲಿ ಬರೆದುಬಿಟ್ಟರು. ಅಲ್ಲಿಂದ ಮುಂದೆ ಭೀಮನ ಹೆಸರು ತನ್ನ ನೆಚ್ಚಿನ *ಬ್ರಾಹ್ಮಣ ಸಮಾಜದ ಶಿಕ್ಷಕರಾದ* ಅಂಬೇಡ್ಕರ್ ಎಂಬ ಹೆಸರಿನಿಂದ ಜಗತ್ಪ್ರಸಿದ್ಧವಾಯಿತು.

ಪುಸ್ತಕ: ಡಾ.ಬಾಬಾಸಾಹೇಬ್ ಅಂಬೇಡ್ಕರ್.

ಪುಟಸಂಖ್ಯೆ: 158, ಶ್ರೀ ಎನ್ ಆರ್ ಶಿವರಾಂ. ಅಂತ ಮುಂದುವರಿದು ಮಾತನಾಡಿ

ನಾವೆಲ್ಲರೂ ಕ್ಷೌರಿಕ ವೃತ್ತಿಯನ್ನು ನಂಬಿ ಬದುಕುತ್ತಿರುವ ಸಮಾಜ. ನಮ್ಮ ವೃತ್ತಿ ನಮಗೆ ಹೆಮ್ಮೆ. ಇಂದು ಒಂದು ಪುಟ್ಟ ಹಳ್ಳಿಯಲ್ಲೂ ಓರ್ವ ಕ್ಷೌರಿಕನ ಸಂಪಾದನೆ ಪ್ರತಿದಿನ ಸಾವಿರಕ್ಕೂ ಅಧಿಕ ರೂಪಾಯಿ ಸಂಪಾದಿಸಬಲ್ಲ. ವ್ಯಸನ ವ್ಯಾಜ್ಯಗಳನ್ನು ಬದಿಗೊತ್ತಿ ಜೀವನ ನಡೆಸಿದರೆ ನಮ್ಮ ಸಮುದಾಯ ಎಂದಿಗೂ ಶ್ರೀಮಂತ ಸಮುದಾಯವೇ ಆಗಿದೆ. ಈ ಹಿಂದೆಯೂ ಶ್ರೀಮಂತ ಸಮುದಾಯವೇ ಆಗಿತ್ತು. ನಮ್ಮ ಬಲ ನಮ್ಮ ವೃತ್ತಿಯಲ್ಲಿದೆ ಎಂಬುದನ್ನು ನಾವು ಮರೆಯಬಾರದು. ಸಕಲ ಸಮುದಾಯಗಳ ಜಯಂತಿಯನ್ನು ಆಚರಣೆ ಮಾಡುವ ಮೂಲಕ ಸಾಮಾಜಿಕ ಸದ್ಭಾವ ಎಲ್ಲರಲ್ಲೂ ಜಾಗೃತವಾಗಲಿ. ಭೋಲೋ ಭಾರತ್ ಮಾತಾಕಿ ಜಯ್ ಘೋಷಣೆ ಕೂಗುವ ಮೂಲಕ ಮಾತು ಮುಗಿಸಿದ ನಾಮದೇವ್.ನಾಗರಾಜಮಾಲೀಕರು.ಸ್ಪಿನ್ ಸೇವಾ ಪ್ರತಿಷ್ಠಾನ ಬೆಂಗಳೂರು

# ಮುಸಲ್ಮಾನರು 'ಅಲ್ಲಾ', ಮುಸ್ಲಿಂ ಮನಸ್ಥಿತಿ ಹೊಂದಿರುವ ಹಿಂದೂಗಳೇ ದೇಶಕ್ಕೆ ಗಂಡಾಂತರ: ಛಲವಾದಿ ನಾರಾಯಣಸ್ವಾಮಿ



**ಬೆಂಗಳೂರು:** "ಮುಸ್ಲಿಮರಿಗೆ ಗುತ್ತಿಗೆ ಮೀಸಲಾತಿ ವಿಚಾರವಾಗಿ ಬಿಜೆಪಿ ಪರಿಷತ್ ಸದಸ್ಯ ಛಲವಾದಿ ನಾರಾಯಣ ಸ್ವಾಮಿ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

"ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿರುವ ಛಲವಾದಿ ನಾರಾಯಣ ಸ್ವಾಮಿ, ಮುಸ್ಲಿಮರಿಂದ ದೇಶಕ್ಕೆ ಗಂಡಾಂತರವಿಲ್ಲ. ಆದರೆ ಮುಸ್ಲಿಂ ಮನಸ್ಥಿತಿ ಹೊಂದಿರುವ ಈ ಹಿಂದೂಗಳಿಂದ ದೇಶಕ್ಕೆ ಗಂಡಾಂತರ ಇದೆ" ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ."ಸಂವಿಧಾನದ ಪ್ರಕಾರ ಧಾರ್ಮಿಕ ಮೀಸಲಾತಿ ಕೊಡಲು ಅವಕಾಶ ಇಲ್ಲ. ಈ ಹಿಂದೆ ಹಿಂದೆಯೂ ಮುಸ್ಲಿಮರಿಗೆ 4% ಮೀಸಲಾತಿ ಇದ್ದದ್ದನ್ನು ಬಸವರಾಜ ಬೊಮ್ಮಾಯಿ ಸಿಎಂ ಆಗಿದ್ದಾಗ ಹಿಂದಕ್ಕೆ ಪಡೆಯಲಾಯಿತು.ಕಾಂಗ್ರೆಸ್ ನವರು ಅಧಿಕಾರಕ್ಕೆ ಬಂದ ಮೇಲೆ ಮುಸ್ಲಿಮರಿಗೆ ಮೀಸಲಾತಿ ಕೊಡುವುದಾಗಿ ಹೇಳಿ ಈಗ ಇದರ ಭಾಗವಾಗಿ ಗುತ್ತಿಗೆಯಲ್ಲೂ ಮೀಸಲಾತಿ ಕೊಟ್ಟಿದ್ದಾರೆ. ಇದರ ವಿರುದ್ಧ ನಾವು ಸದನದ ಒಳಗೆ ಮತ್ತು ಹೊರಗೆ ಹೋರಾಡ ಮಾಡುತ್ತೇವೆ. ಸರ್ಕಾರದ ಈ ನಡೆ ಓಲೈಕೆ ರಾಜಕಾರಣ, ದೇಶಕ್ಕೆ ಗಂಡಾಂತರ ತರುವ ಕೆಲಸ" ಎಂದು ಛಲವಾದಿ ನಾರಾಯಣಸ್ವಾಮಿ ಆಕ್ರೋಶ ಹೊರಹಾಕಿದ್ದಾರೆ.ಅಲ್ಪಸಂಖ್ಯಾತರು ಎಂದರೆ ಕೇವಲ ಮುಸ್ಲಿಮರು ಅಲ್ಲ ಎಂಬ ಡಿಕೆ ಶಿವಕುಮಾರ್ ಸಮರ್ಥನೆಗೆ ಪ್ರತಿಕ್ರಿಯೆ ನೀಡಿರುವ ಛಲವಾದಿ ನಾರಾಯಣಸ್ವಾಮಿ, ಜೈನರನ್ನು ಕೇವಲ ನೆಪ ಮಾತ್ರಕ್ಕೆ ಉಲ್ಲೇಖಿಸಿದ್ದಾರೆ ಅಷ್ಟೇ. ಕೇವಲ ಮುಸ್ಲಿಮರನ್ನು ಗಮನದಲ್ಲಿಟ್ಟುಕೊಂಡು ಮೀಸಲಾತಿ ಕೊಡುವುದು ಅವರ ಉದ್ದೇಶವಾಗಿದೆ. ನಮ್ಮ ಸರ್ಕಾರ ಬಂದಾಗ ಯಾರನ್ನು ಎಲ್ಲಿ ಇಡಬೇಕು ಇಡ್ತೇವೆ" ಎಂದು ಟಾಂಗ್ ಕೊಟ್ಟಿದ್ದಾರೆ.

"ಇದೇ ವೇಳೆ ಒಳಮೀಸಲಾತಿ ಬಗ್ಗೆ ಮಾತನಾಡಿ, ಒಳಮೀಸಲಾತಿಯನ್ನು ಪರಿಶಿಷ್ಟ ವರ್ಗಕ್ಕೆ ಕೊಡಲೇಬೇಕು. ತೆಲಂಗಾಣದಲ್ಲಿ ಈಗಾಗಲೇ ಘೋಷಣೆ ಆಗಿದೆ. ಆದರೆ, ರಾಜ್ಯ ಸರ್ಕಾರ ವಿಳಂಬ ಮಾಡಿದೆ. ಬೇಗ ಸರ್ಕಾರ ಈ ಬಗ್ಗೆ ತೀರ್ಮಾನ ಕೈಗೊಳ್ಳಲಿ" ಎಂದು ಆಗ್ರಹಿಸಿದ್ದಾರೆ.

# ಡಿಕೆಶಿ ಔತಣಕೂಟದಲ್ಲಿ ಎಲ್ಲರೂ ಭಾಗಿಯಾಗಿದ್ದರು; ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ: ಎಂ.ಬಿ ಪಾಟೀಲ್



**ಬೆಳಗಾವಿ:** ರಾಜ್ಯ ಕಾಂಗ್ರೆಸ್‌ನಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಕರೆದಿದ್ದ ಔತಣಕೂಟದಲ್ಲಿ ಪಕ್ಷದ ಎಲ್ಲಾ ಶಾಸಕರು ಭಾಗವಹಿಸಿದ್ದರು ಎಂದು ಸಚಿವ ಎಂಬಿ ಪಾಟೀಲ್ ಅವರು ಶನಿವಾರ ಹೇಳಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷರಾಗಿ ಡಿಕೆ ಶಿವಕುಮಾರ್ ಐದು ವರ್ಷ ಪೂರೈಸಿದ ಕಾರಣ ಕಾಂಗ್ರೆಸ್ ಪಕ್ಷದ ಸಚಿವರು, ಶಾಸಕರಿಗೆ ಔತಣಕೂಟ ಏರ್ಪಡಿಸಿದ್ದರು. ಇದಕ್ಕೆ ಪರಮೇಶ್ವರ್ ಭಾಗವಹಿಸಿರಲಿಲ್ಲ. ಏಕೆಂದರೆ, ಅವರ ಆಪ್ತರೊಬ್ಬರು ನಿಧನರಾಗಿದ್ದ ಕಾರಣ ಅವರ ಬರಲು ಸಾಧ್ಯವಾಗಲಿಲ್ಲ ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ. ವಿಪಕ್ಷದವರು ಸುಮ್ಮನೇ ವಿವಾದಗಳನನ್ನೆಬ್ಬಿಸುತ್ತಾರೆ. ಈ ಭೋಜನಾಕೂಟದಲ್ಲಿ ಮುಖ್ಯಮಂತ್ರಿ ಸೇರಿದಂತೆ, ಸಚಿವ ಸತೀಶ್ ಜಾರಕಿಹೊಳಿ, ಸಹಕಾರ ಸಚಿವ ಕೆ.ಎನ್.ರಾಜಣ್ಣ ಭಾಗವಹಿಸುವ ಮೂಲಕ ಈ ವಿವಾದಗಳಿಗೆ ತೆರೆ ಎಳೆದಿದ್ದಾರೆ ಎಂದು ತಿಳಿಸಿದರು.

ಅಧಿವೇಶನ ನಡೆದಾಗ ಸಾಮಾನ್ಯವಾಗಿ ಸಚಿವರು, ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಔತಣಕೂಟ ಆಯೋಜಿಸುತ್ತಾರೆ. ಇದರಲ್ಲಿ ವಿಶೇಷವೇನೂ ಇಲ್ಲ ಎಂದರು.ಕೆಪಿಸಿಸಿಯ ಮುಖ್ಯಸ್ಥರು ಯಾರು ಎಂಬುದನ್ನು ಪಕ್ಷದ ಹೈಕಮಾಂಡ್ ನಿರ್ಧರಿಸುತದೆ. ರಾಜ್ಯ ಮಟ್ಟದಲ್ಲಿ ನಾಯಕತ್ವ ಬದಲಾವಣೆಯ ಬಗ್ಗೆ ಯಾವುದೇ ಚರ್ಚೆ ನಡೆಯುವುದಿಲ್ಲ ಎಂದು ಹೇಳಿದರು.

# ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ, ಕೆಪಿಸಿಸಿ ಅಧ್ಯಕ್ಷರಾಗಿ ಡಿಕೆಶಿ ಮುಂದುವರಿಯಲಿದ್ದಾರೆ: ತನ್ವೀರ್ ಸೇಠ್



**ಮೈಸೂರು:** ರಾಜ್ಯದಲ್ಲಿ ನಾಯಕತ್ವ ಬದಲಾವಣೆಯಿಲ್ಲ, ಕೆಪಿಸಿಸಿ ಅಧ್ಯಕ್ಷರಾಗಿ ಡಿಕೆ.ಶಿವಕುಮಾರ್ ಅವರೇ ಮುಂದುವರಿಯಲಿದ್ದಾರೆಂದು ಮಾಜಿ ಸಚಿವ ಮತ್ತು ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್ ಅವರು ಶನಿವಾರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ ಹುದ್ದೆ ಆಸೆ ಯಾರಿಗೆ ಇರುವುದಿಲ್ಲ ಹೇಳಿ. ನನಗೂ ಕೂಡ ಸಿಎಂ ಹುದ್ದೆ ಮೇಲೆ ಆಸೆ ಇದೆ. ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರ ಸಂಬಂಧ ಬದಲಾವಣೆ ಮಾಡೋವರೆಗೂ ಸಿದ್ದರಾಮಯ್ಯ ಅವರೇ ಸಿಎಂ ಆಗಿರುತಾರೆ. ಆ ಸ್ಥಾನದಲ್ಲಿಇರುವವರೆಗೆ ಅವರಿಗೆ ಗೌರವ ನೀಡಬೇಕು. ಬದಲಾವಣೆ ಆಗುತ್ತದೆ, ಆಗಲ್ಲ ಆ ಚರ್ಚೆ ಬಗ್ಗೆ ಏನು ಹೇಳಲ್ಲ. ನಮ್ಮ ವರಿಷ್ಠರು ಅಂತಿಮ ತೀರ್ಮಾನ ಮಾಡುತ್ತಾರೆಂದು ಹೇಳಿದರು.

ಅವಕಾಶ ಯಾವಾಗ, ಯಾರು ಕೊಡುತ್ತಾರೆ ಆವಾಗ ನಿರ್ವಹಣೆ ಮಾಡುತ್ತೇನೆ. ಸಿಎಂ ಅನ್ನೋದು ಕೇವಲ ಒಂದು ಹುದ್ದೆ ಅಲ್ಲ. ರಾಜ್ಯಕ್ಕೆ ದಿಕ್ಕು ದೆಸೆ ತೋರಿಸುವ ಹುದ್ದೆ. ಹೀಗಾಗಿ ಸದ್ಯಕ್ಕೆ ಆ ಬಗ್ಗೆ ಚರ್ಚೆ ಮಾಡಲ್ಲ, ನನಗೆ ಸಚಿವ ಸ್ಥಾನದ ಬಗ್ಗೆ ಸಾಕಷ್ಟು ಆಸೆ ಇದೆ. ಆದರೆ, ಯಾವುದು ಕೂಡ ಖಾಲಿ ಇಲ್ಲ. ನನಗೆ ಸಚಿವ ಸ್ಥಾನ ನೀಡಿದರೆ ಯಶಸ್ವಿಯಾಗಿ ನಿಭಾಯಿಸುವೆ ಎಂದು ತಿಳಿಸಿದರು.

ಯಾರಿಗೆ ಯಾವುದು ಶಾಶ್ವತವಲ್ಲ. ಯಾರಿಗೆ ಯಾವ ಹುದ್ದೆಯೂ ಶಾಶ್ವತವಲ್ಲ. ಡಿ.ಕೆ.ಶಿವಕುಮಾರ್ ಅವರು ಕಾಂಗ್ರೆಸ್ ಪಕ್ಷವನ್ನು ಸಂಕಷ್ಟದ ಸಮಯದಲ್ಲಿ ಮುನ್ನಡೆಸಿದ್ದಾರೆ. ಪಕ್ಷವನ್ನು ಅಧಿಕಾರಕ್ಕೆ ತಂದಿದ್ದಾರೆ. ರಾಜ್ಯಾಧ್ಯಕ್ಷ ಸ್ಥಾನದ ರೇಸ್‌ನಲ್ಲಿ ನಾನಿಲ್ಲ. ಕಾರ್ಯಕರ್ತರ ರೀತಿ ಕೆಲಸ ಮಾಡುತ್ತೇನೆ. ಚುನಾವಣೆಯಲ್ಲಿ ಕಾಂಗ್ರೆಸ್ ಅನ್ನು ಮತ್ತೆ ಅಧಿಕಾರಕ್ಕೆ ತರುವ ಸಾಮರ್ಥ್ಯ ಹೊಂದಿದ್ದಾರೆ. ಕಾಂಗ್ರೆಸ್ ಹೈಕಮಾಂಡ್‌ನಲ್ಲಿರುವವರು ಸೇರಿದಂತೆ ಎಲ್ಲರಿಗೂ ಕರ್ನಾಟಕದಲ್ಲಿ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿದ ಅವರ ಕಠಿಣ ಪರಿಶ್ರಮ ಮತ್ತು ತಂತ್ರದ ಬಗ್ಗೆ ತಿಳಿದಿದ್ದಾರೆ ಎಂದರು.

ಪ್ರತಾಪ್ ಸಿಂಹ ಕುರಿತು ಮಾತನಾಡಿ, ಅವರು ನನ್ನ ಸ್ನೇಹಿತ, ನನ್ನ ಅವನ ನಡುವೆ ಒಳ್ಳೆಯ ಸ್ನೇಹವಿದೆ. ಆದರೆ, ಆತನ ಮಾತು, ನಾಲಿಗೆ ಸ್ವಲ್ಪ ಸರಿಯಿಲ್ಲ. ಅವನ ಮಾತಿನಿಂದ ಹಲವರಿಗೆ ನೋವಾಗಿದೆ. ಸಭ್ಯತೆ ಮೀರಿ ಆತ ನಡೆದುಕೊಳ್ಳಬಾರದು. ಅದು ಕಂಟ್ರೋಲ್ ಮಾಡಿಕೊಳ್ಳಬೇಕು. ಹಜ್‌ಗೆ ನಾವು ದೇವಸ್ಥಾನದ ದುಡ್ಡು ಬಳಸಿಲ್ಲ. ಬೇಕಾದರೆ ಆರ್‌ಟಿಐ ಅರ್ಜಿ ಹಾಕಿ ಮಾಹಿತಿ ತೆಗೆದುಕೊಳ್ಳಬಹುದು ಎಂದರು.

# ಲಿಂಗಾಯತ ಸಮಾವೇಶ ಚಿಂತನೆ ಕೈಬಿಡಿ ರೇಣುಕಾಚಾರ್ಯಗೆ BSY ಸಲಹೆ



**ಬೆಂಗಳೂರು:** ಲಿಂಗಾಯತ ಸಮಾವೇಶಗಳ ಚಿಂತನೆಗಳ ಕೈಬಿಡುವಂತೆ ಮಾಜಿ ಮುಖ್ಯಮಂತ್ರಿ ಮತ್ತು ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರು ಎಂ.ಪಿ. ರೇಣುಕಾಚಾರ್ಯ ಅವರಿಗೆ ಸಲಹೆ ನೀಡಿದ್ದಾರೆ.

ರೇಣುಕಾಚಾರ್ಯ ಅವರನ್ನು ತಮ್ಮ ಮನೆಗೆ ಬುಧವಾರ ರಾತ್ರಿ ಕರೆಸಿಕೊಂಡಿದ್ದ ಯಡಿಯೂರಪ್ಪ ಅವರು, ?ಯಾವುದೇ ಸಭೆ? ಸಮಾವೇಶ ನಡೆಸಿ ಗೊಂದಲ ಸೃಷ್ಟಿಸುವುದು ಬೇಡ. ಇಂತಹ ಸಭೆಗಳು ಅನಗತ್ಯ ಒಡಕುಗಳನ್ನು ಮೂಡಿಸಲಿದೆ. ಏನೇ ಇದ್ದರೂ ಪಕ್ಷದ ಚೌಕಟ್ಟಿನಲ್ಲಿ ಮಾತುಕತೆ ಮಾಡಿ ಪರಿಹಾರ ಕಂಡುಕೊಳ್ಳಬೇಕು ಎಂದು ಹೇಳಿದರು ಎಂದು ಮೂಲಗಳು ತಿಳಿಸಿವೆ.

ಇದೇ ವೇಳೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರನ್ನು ಕರೆಸಿಕೊಂಡ ಯಡಿಯೂರಪ್ಪ ಅವರು, ಇಂತಹ ಚಟುವಟಿಕೆಗಳಿಗೆ ಅವಕಾಶ ನೀಡದಂತೆ ಸೂಚನೆ ನೀಡಿದ್ದಾರೆಂದು ವರದಿಗಳು ತಿಳಿಸಿವೆ.

ಯಡಿಯೂರಪ್ಪ ಸೂಚನೆ ಬೆನ್ನಲ್ಲೇ ಮಾಧ್ಯಮಗಳೊಂದಿಗೆ ಮಾತನಾಡಿದ ರೇಣುಕಾರ್ಯ ಅವರು, ಇದು ರಾಜಕೀಯ ಸಭೆಯಲ್ಲ. ಸಮುದಾಯವನ್ನು ಸಂಘಟಿಸಲು ನಡೆಸುತ್ತಿರುವ ಸಮಾವೇಶವಾಗಿದೆ. ಹೀಗಾಗಿ, ನಮ್ಮ ನಿರ್ಧಾರದಿಂದ ಹಿಂದೆ ಸರಿಯುವುದಿಲ್ಲ ಎಂದು ಹೇಳಿದ್ದಾರೆ.

ವೀರಶೈವ ಲಿಂಗಾಯತ ಸಮುದಾಯದ ನಿವೃತ್ತ ಅಧಿಕಾರಿಗಳು ಮತ್ತು ಅನೇಕ ಸಂಘಟನೆಗಳ ಸದಸ್ಯರು ಎಲ್ಲರೂ ಒಟ್ಟಾಗಿ ಸಮಾವೇಶಗಳನ್ನು ಆಯೋಜಿಸಲು ಮುಂದೆ ಬಂದಿದ್ದಾರೆ ಎಂದು ತಿಳಿಸಿದರು.

ಇದೇ ವೇಳೆ ಸಮುದಾಯಕ್ಕಾಗಿ ಒಟ್ಟಾಗಿ ಕೆಲಸ ಮಾಡುವಂತೆ ಬಿಜೆಪಿ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಸಮುದಾಯದ ಎಲ್ಲಾ ನಾಯಕರು ರೇಣುಕಾಚಾರ್ಯ ಅವರು ಆಹ್ವಾನ ನೀಡಿದರು.

ಮೇ 15 ರೊಳಗೆ ರಾಜ್ಯದ ವಿವಿಧ ಭಾಗಗಳಲ್ಲಿ ಸಮಾವೇಶಗಳನ್ನು ಮತ್ತು ದಾವಣಗೆರೆಯಲ್ಲಿ ಮೆಗಾ ರ್ಯಾಲಿಯನ್ನು ನಡೆಸುವ ಚಿಂತನೆಗಳಿವೆ ಎಂದು ಮಾಹಿತಿ ನೀಡಿದರು.

# ಬೇಸಿಗೆ ಕಾಲದಲ್ಲಿ ವಿದ್ಯಾರ್ಥಿಗಳಿಗೆ ನೀಡುವ ಆಹಾರ–ನೀರಿನ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸುವಂತೆ ಹೆಚ್ಡಿಕೆ ಸೂಚನೆ




**ಬೆಂಗಳೂರು:** ಬೇಸಿಗೆ ಕಾಲವಾದ್ದರಿಂದ ವಿದ್ಯಾರ್ಥಿಗಳಿಗೆ ನೀಡಲಾಗುವ ಆಹಾರ, ಕುಡಿಯುವ ನೀರಿನ ಬಗ್ಗೆ ಹೆಚ್ಚಿನ ಕಟ್ಟೆಚ್ಚರ ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿರುವುದಾಗಿ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಮಂಡ್ಯ ಲೋಕಸಭೆ ಕ್ಷೇತ್ರದ ಮಳವಳ್ಳಿ ತಾಲೂಕಿನ ಟಿ.ಕಾಗೇಪುರದ ಖಾಸಗಿ ವಸತಿ ಶಾಲೆಯಲ್ಲಿ ಕಲುಷಿತ ಆಹಾರ ಸೇವಿಸಿ ವಿದ್ಯಾರ್ಥಿ ಮೃತಪಟ್ಟಿರುವ ಘಟನೆ ಅತ್ಯಂತ ದುರದೃಷ್ಟಕರ.

ಇದರಿಂದ ನನಗೆ ಬಹಳ ನೋವುಂಟಾಗಿದೆ. ಮೃತ ವಿದ್ಯಾರ್ಥಿಯ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಮತ್ತೆ ಇಂಥ ಘಟನೆಗಳು ಮರುಕಳಿಸದಿರಲಿ ಎಂದು ಹೇಳಿದ್ದಾರೆ.

ಘಟನೆ ಬಗ್ಗೆ ಸಂಬಂಧಿತ ಅಧಿಕಾರಿಗಳಿಂದ ಮಾಹಿತಿ ಪಡೆದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಚಿಕಿತ್ಸೆ ಕೊಡಿಸಬೇಕೆಂದು ಸೂಚಿಸಿರುವುದಾಗಿ ಅವರು ತಿಳಿಸಿದ್ದಾರೆ.

# ನಿಡುವಾಳೆ ರಾಮೇಶ್ವರ ದೇವಾಲಯಕ್ಕೆ ಭೇಟಿ ನೀಡಿದ ನಟ ರಮೇಶ್ ಅರವಿಂದ್ ಕುಟುಂಬ



**ಚಿಕ್ಕಮಗಳೂರು:** ಕನ್ನಡ ಚಿತ್ರನಟ ರಮೇಶ್ ಅರವಿಂದ್ ಅವರು ಕುಟುಂಬ ಸಮೇತರಾಗಿ ಮೂಡಿಗೆರೆ ತಾಲೂಕಿನ ನಿಡುವಾಳೆ ರಾಮೇಶ್ವರ ದೇವಾಲಯಕ್ಕೆ ಭೇಟಿ ನೀಡಿ, ಶ್ರದ್ಧಾ ಭಕ್ತಿಯಿಂದ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರದ ಆಡಳಿತಾಧಿಕಾರಿ ಸುನೀಲ್ ಜೆ ಗೌಡ್ರು ಅವರು ರಮೇಶ್ ಅರವಿಂದ್ ಅವರಿಗೆ ಶಾಲು ಹೊದೆಸಿ ಸನ್ಮಾನಿಸಿದರು. ದೇವಾಲಯದ ವ್ಯವಸ್ಥಾಪಕರಾದ ಎನ್. ಆರ್. ನಾಗರಾಜ್ ಭಟ್, ಅರ್ಚಕರಾದ ನಾಗೇಂದ್ರ ಕಾರಂತ್, ಸಿಬ್ಬಂದಿ ಸೂರ್ಯನಾರಾಯಣ, ಹಾಗೂ ಸ್ಥಳೀಯ ಗ್ರಾಮಸ್ಥರು ಈ ಧಾರ್ಮಿಕ ಕಾರ್ಯದಲ್ಲಿ ಭಾಗವಹಿಸಿದರು.

ಪೂಜಾ ಕಾರ್ಯಕ್ರಮವು ಶ್ರದ್ಧಾ ಮತ್ತು ಭಕ್ತಿಯ ವಾತಾವರಣದಲ್ಲಿ ನಡೆಯಿತು. ದೇವಾಲಯಕ್ಕೆ ಆಗಮಿಸಿದ ರಮೇಶ್ ಅರವಿಂದ್ ಅವರ ಅಭಿಮಾನಿಗಳು ಹಾಗೂ ಭಕ್ತರು

ಅವರೊಂದಿಗೆ ಕ್ಷಣಕಾಲ ಸಂವಾದ ನಡೆಸಿ ಸಂತೋಷ ವ್ಯಕ್ತಪಡಿಸಿದರು

# ಬಸ್ಸಿನಲ್ಲಿ ಸಂಚರಿಸಿ ಮಲೆನಾಡಿನ ಸೌಂದರ್ಯ ಸವಿದ ತೇಜಸ್ವಿ ದಂಪತಿ



ಚಿಕ್ಕಮಗಳೂರು, ಮಾ.17– ದಾಂಪತ್ಯ ಜೀವನಕ್ಕೆ ಕಾಲಿಟ್ಟಿರುವ ಸಂಸದ ತೇಜಸ್ವಿ ಸೂರ್ಯ ಹಾಗೂ ಶಿವಶ್ರೀ ನವದಂಪತಿಗಳು ಜಿಲ್ಲೆಯ ಕಳಸ ಮತ್ತು ಹೊರನಾಡು ಪ್ರವಾಸಿ ತಾಣಗಳಿಗೆ ಬಸ್ಸಿನಲ್ಲಿ ಪ್ರಯಾಣಿಸುವ ಮೂಲಕ ಗಮನ ಸೆಳೆದಿದ್ದಾರೆ.

ತಮ್ಮ ಖಾಸಗಿ ವಾಹನ ಬಿಟ್ಟು, ಕಳಸ–ಹೊರನಾಡಿನ ಅಂಕು ಡೊಂಕಿನ ರಸ್ತೆಗಳಲ್ಲಿ ಖಾಸಗಿ ಬಸ್ಸಿನಲ್ಲಿ ಸಂಚಾರ ಮಾಡಿ ಮಲೆನಾಡಿನ ಸೌಂದರ್ಯ ಸವಿದರು. ಹೊರನಾಡಿನ ಶ್ರೀ ಅನ್ನಪೂರ್ಣೇಶ್ವರಿ ದೇವಾಲಯಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ದೇವಾಲಯದ ಧರ್ಮ ಕರ್ತ ಭೀಮೇಶ್ವರ ಜೋಶಿಯವರು ನವದಂಪತಿಗಳಿಗೆ ಆಶೀರ್ವದಿಸಿ ದೇವರ ಸನ್ನಿಧಿಯಲ್ಲಿ ಸನ್ಮಾನಿಸಿದರು.ದೇವಾಲಯ ದರ್ಶನದ ನಂತರ, ಕಳಸ ತಾಲೂಕಿನ ಪ್ರಮುಖ ಪ್ರವಾಸಿ ತಾಣಗಳಿಗೆ ಬಸ್ ಮೂಲಕ ಭೇಟಿ ನೀಡಿದರು. ಹಸಿರಿನಿಂದ ಕೂಡಿದ ಪರ್ವತ ಪ್ರದೇಶದಲ್ಲಿ ಬಸ್‌ನಲ್ಲಿ ಸಂಚಾರಿಸಿ ವಿಶೇಷ ಅನುಭವ ಪಡೆದರು. ತೇಜಸ್ವಿ ದಂಪತಿ ತಮ್ಮ ಪ್ರವಾಸದ ಸಮಯದಲ್ಲಿ ಜನ ಸಾಮಾನ್ಯರೊಂದಿಗೆ ಸಂವಾದ ನಡೆಸಿದ್ದು, ಅಪರೂಪಕ್ಕೆ ರಾಜಕೀಯ ನಾಯಕರು ಬಸ್ಸಿನಲ್ಲಿ ಪ್ರಯಾಣ ನಡೆಸಿದ್ದು.

# ಚಂದ್ರಯಾನ–5 ಮಿಷನ್‌ಗೆ ಕೇಂದ್ರ ಸರ್ಕಾರ ಅನುಮೋದನೆ

**ಚೆನ್ನೈ:** ಚಂದ್ರನ ಅಧ್ಯಯನಕ್ಕಾಗಿ ಮಹತ್ವಾಕಾಂಕ್ಷೆಯ ಚಂದ್ರಯಾನ–5 ಮಿಷನ್‌ಗೆ ಕೇಂದ್ರವು ಇತ್ತೀಚೆಗೆ ಅನುಮೋದನೆ ನೀಡಿದೆ ಎಂದು ಇಸ್ರೋ ಅಧ್ಯಕ್ಷ ವಿ ನಾರಾಯಣನ್ ಹೇಳಿದ್ದಾರೆ.

ಬೆಂಗಳೂರಿನ ಪ್ರಧಾನ ಕಛೇರಿಯ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಿದ್ದಕ್ಕಾಗಿ ಅವರನ್ನು ಅಭಿನಂದಿಸುವ ಕಾರ್ಯಕ್ರಮದಲ್ಲಿ, ನಾರಾಯಣನ್ ಅವರು 25 ಕೆಜಿ ರೋವರ್ ಪ್ರಯಾಗ್ಯಾನ್ ಅನ್ನು ಹೊತ್ತ ಚಂದ್ರಯಾನ–3 ಮಿಷನ್‌ಗಿಂತ ಭಿನ್ನವಾಗಿ, ಚಂದ್ರಯಾನ–5 ಮಿಷನ್ ಚಂದ್ರನ ಮೇಲೆಯನ್ನು ಅಧ್ಯಯನ ಮಾಡಲು 250 ಕೆಜಿ ರೋವರ್ ಅನ್ನು ಹೊತ್ತೊಯ್ಯುತ್ತದೆ ಎಂದು ಹೇಳಿದರು.

. ಕಳೆದ 2008 ರಲ್ಲಿ ಯಶಸ್ವಿಯಾಗಿ ಉಡಾವಣೆಯಾದ ಚಂದ್ರಯಾನ–1, ಚಂದ್ರನ ರಾಸಾಯನಿಕ, ಖನಿಜ ಮತ್ತು ಫೋಟೋ–ಭೂವೈಜ್ಞಾನಿಕ ಮ್ಯಾಪಿಂಗ್ ಅನ್ನು ತೆಗೆದುಕೊಂಡಿತು. ಚಂದ್ರಯಾನ–2 ಮಿಷನ್ (2019) ಶೇಕಡಾ 98 ರಷ್ಟು ಯಶಸ್ವಿಯಾಗಿದೆ ಆದರೆ ಅಂತಿಮ ಹಂತದಲ್ಲಿ ಕೇವಲ ಎರಡು ಶೇಕಡಾ ಮಿಷನ್ ಸಾಧಿಸಲು ಸಾಧ್ಯವಾಗಲಿಲ್ಲ ಎಂದರು.ನ್ಯೂ ಚಂದ್ರಯಾನ–2 ರ ಆನ್‌ಬೋರ್ಡ್ ಹೈ ರೆಸಲ್ಯೂಶನ್ ಕ್ಯಾಮೆರಾ ನೂರಾರು ಚಿತ್ರಗಳನ್ನು ಕಳುಹಿಸುತ್ತಿದೆ ಎಂದು ಬಾಹ್ಯಾಕಾಶ ಇಲಾಖೆಯ ಕಾರ್ಯದರ್ಶಿಯೂ ಆಗಿರುವ ನಾರಾಯಣನ್ ಹೇಳಿದ್ದಾರೆ.ಚಂದ್ರಯಾನ–3 ಮಿಷನ್ ಚಂದ್ರನ ಮೇಲೆಯಲ್ಲಿ ಸುರಕ್ಷಿತ ಲ್ಯಾಂಡಿಂಗ್ ಮತ್ತು ರೋವಿಂಗ್‌ನಲ್ಲಿ ಅಂತ್ಯದಿಂದ ಅಂತ್ಯದ ಸಾಮರ್ಥ್ಯವನ್ನು ಪ್ರದರ್ಶಿಸಲು ಚಂದ್ರಯಾನ–2 ಗೆ ಫಾಲೋ–ಆನ್ ಮಿಷನ್ ಆಗಿದೆ.ಆಗಸ್ಟ್ 23,2023 ರಂದು ಚಂದ್ರನ ದಕ್ಷಿಣ ಧ್ರುವದಲ್ಲಿ ಲ್ಯಾಂಡರ್ ವಿಕ್ರಮ್ ಯಶಸ್ವಿಯಾಗಿ ಸಾಫ್ಟ್–ಲ್ಯಾಂಡಿಂಗ್ ನೊಂದಿಗೆ ಚಂದ್ರಯಾನ–3 ಮಿಷನ್ ಅನ್ನು ಇಸ್ರೋ ಯಶಸ್ವಿಯಾಗಿ ಪ್ರಾರಂಭಿಸಿತು.

# ಯುಪಿಯಲ್ಲಿ ಬಿಹಾರ ಮೂಲದ ಬಾಲಕಿಯನ್ನು ಅಪಹರಿಸಿ ಸಾಮೂಹಿಕ ಅತ್ಯಾಚಾರ

**ಬಲ್ಲಿಯಾ :** ತನ್ನ ಅತ್ತಿಗೆಯ ಮನೆಗೆ ಬಂದಿದ್ದ ಬಿಹಾರ ಮೂಲದ ಬಾಲಕಿಯನ್ನು ಬಂದೂಕುತೋರಿಸಿ ಬಯಪಡಿಸಿ ಅಪಹರಿಸಿದ ದುಷ್ಕರ್ಮಿಗಳು ಸಾಮೂಹಿಕ ಅತ್ಯಾಚಾರ ಎಸಗಿರುವ ಘಟನೆನ ಇಲ್ಲಿನ ದೋಕಾಟಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.ಕಳೆದ ಮಾರ್ಚ್ 14 ರಂದು ರಾತ್ರಿ 10 ಗಂಟೆ ಸಮಯದಲ್ಲಿ ಬಾಲಕ ಸೂರಜ್ ಸೋನಿ ಮತ್ತು ಇತರ ಇಬ್ಬರು ಯುವಕರು ಬಂದೂಕು ತೋರಿಸಿ 14 ವರ್ಷದ ಬಾಲಕಿಯನ್ನು ಅಪಹರಿಸಿ, ಮೂವರು ಆಕೆಯ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಸಂಬಂಧ ಮೂವರ ವಿರುದ್ಧ ಪೋಕ್ಸ್ ಅಡಿ ಪ್ರಕರಣ ದಾಖಲಾಗಿದ್ದು ಅವರ ಪತ್ತೆಗೆ ಬಲೆ ಬೀಸಲಾಗಿದೆ ಎಂದು ಬೈರಿಯಾದ ಸರ್ಕಲ್ ಇನ್ಸ್‌ಪೆಕ್ಟರ್ ಮೊಹಮ್ಮದ್ ಫಹೀಮ್ ಖುರೇಷಿ ತಿಳಿಸಿದ್ದಾರೆ.

ಬಾಲಕಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ದುಷ್ಕರ್ಮಿಗಳಿಗೆ ಬಂದೂಕು ಹೇಗೆ ಸಿಕ್ಕಿದೆ ಮತ್ತು ಅಪಹರಣ ಬಳಸಿದ ವಾಹನ ಪತ್ತೆಯಾಗಿದೆ.ಈ ಘಟನೆಯಿಂದ ಗ್ರಾಮಸ್ಥರು ಆತಂಕಗೊಂಡಿದ್ದಾರೆ.

## ಶಾಲೆಯ ಅಭಿವೃದ್ಧಿಗೆ ಅನುದಾನ ನೀಡುವಂತೆ ಮನವಿ

**ಶೃಂಗೇರಿ:** ಮೆಣಸೆ ಗ್ರಾಮ ಪಂಚಾಯಿತಿಯ ಮಸಿಗೆ ಗ್ರಾಮದ ಕೆರೆಮನೆ ಸರಕಾರಿ ಶಾಲೆಯ ದುರಸ್ತಿಗಾಗಿ ಶಾಲೆಯ ಹಿರಿಯ ವಿದ್ಯಾರ್ಥಿಗಳು ಸರಕಾರದಿಂದ ಅನುದಾನ ಕೋರಿ ಅನಿವಾಸಿ ಭಾರತೀಯ ಸಮಿತಿ ಉಪಾಧ್ಯಕ್ಷೆ ಡಾ.ಆರತಿಕೃಷ್ಣರವರಿಗೆ ವಿಕಾಸಸೌದದಲ್ಲಿ ಮನವಿ ಸಲ್ಲಿಸಲಾಯಿತು.ಶಾಲೆಯ ಹಿರಿಯ ವಿದ್ಯಾರ್ಥಿ ಲಾವಣ್ಯ ಮನವಿ ನೀಡಿ ಮಾತನಾಡಿ, 1964 ರಲ್ಲಿ ಆರಂಭಗೊಂಡಿದ್ದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯು ವಿದ್ಯಾರ್ಥಿಗಳ ಕೊರತೆಯಿಂದ 2016 ರಲ್ಲಿ ಮುಚ್ಚಿದೆ.ಶಾಲೆಯಲ್ಲಿ ವ್ಯಾಸಂಗ ಮಾಡಿದ ಸಾವಿರಾರು ವಿದ್ಯಾರ್ಥಿಗಳು ದೇಶ, ಹೊರದೇಶದಲ್ಲಿ ವಿವಿಧ ಉದ್ಯೋಗದಲ್ಲಿದ್ದಾರೆ. ಶಾಲೆ ಮುಚ್ಚಿದ ನಂತರ ಗ್ರಾಮದ ಸಂಘ, ಸಂಸ್ಥೆಯ ಮೀಟಿಂಗ್ ಮತ್ತು ಸಾರ್ವಜನಿಕ ಸಭೆಗಳಗೆ ಬಳಸಿಕೊಳ್ಳಲಾಗುತ್ತಿತ್ತು. ಶಾಲೆ ಮುಚ್ಚಿದ ನಂತರ ಶಾಲೆಯ ಚಟುವಟಿಕೆ ಇಲ್ಲದ ಕಾರಣ ನಿರ್ವಹಣೆ ಇಲ್ಲದೇ ಇದೀಗ ಶಾಲೆಯ ಮೇಲ್ಚಾವಣಿ, ಕಿಟಕಿ ಬಾಗಿಲು ಗೆದ್ದಲು ತಿಂದು ಶಾಲೆ ಕುಸಿಯುವ ಸ್ಥಿತಿ ನಿರ್ಮಾಣವಾಗಿದೆ. ದುರಸ್ತಿ ಮಾಡದಿದ್ದರೆ ಕುಸಿಯುವುದರಿಂದ ಸರಕಾರದಿಂದ ಅನುದಾನ ಕೊಡಿಸಿಕೊಡುವಂತೆ ತಿಳಿಸಿದರು.ಮನವಿ ಸ್ವೀಕರಿಸಿ ಮಾತನಾಡಿದ ಅನಿವಾಸಿ ಭಾರತೀಯ ಸಮಿತಿ ಉಪಾಧ್ಯಕ್ಷೆ ಡಾ.ಆರತಿಕೃಷ್ಣ, ಸರಕಾರಿ ಕಟ್ಟಡವನ್ನು ಉಳಿಸುವುದು ಸಾರ್ವಜನಿಕರ ಕರ್ತವ್ಯವೂ ಆಗಿದೆ. ಶಾಲೆಯ ದುರಸ್ತಿ ಮಾಡದಿದ್ದಲ್ಲಿ ಲಕ್ಷಾಂತರ ರೂ ಕಟ್ಟಡ ಹಾಳಾಗಲಿದೆ. ಸರಕಾರಿ ಕಟ್ಟಡ ಮತ್ತು ಆಸ್ತಿ ಹಾಳಾಗದಂತೆ ನಿರ್ವಹಣೆ ಮಾಡುವುದು ಅಗತ್ಯವಿದೆ. ಸರಕಾರಿ ಆಸ್ತಿಯನ್ನು ಉಳಿಸಲು ಈ ಬಗ್ಗೆ ಸಂಬಂಧಿಸಿದ ಸಚಿವ ಮಧು ಬಂಗಾರಪ್ಪರವರಿಗೆ ಮನವಿ ಮಾಡಿದ್ದೇನೆ. ಅಗತ್ಯ ಅನುದಾನ ಕೊಡಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತದೆ ಎಂದರು. ಶಾಲೆಯ ಹಿರಿಯ ವಿದ್ಯಾರ್ಥಿಗಳಾದ ಕೆರೆಮನೆ ಪ್ರಭಾಕರ್, ಕೆ.ಎಲ್. ಗೋಪಾಲಕೃಷ್ಣ ಇದ್ದರು.

## ಪ.ಪಂ.ನಿಂದ ಮಂಗಗಳ ಸ್ಥಳಾಂತರ, ಬೀದಿನಾಯಿಗಳಿಗೆ ಸಂತಾನಹರಣ ಚಿಕಿತ್ಸೆ

**ತೀರ್ಥಹಳ್ಳಿ :** ಇಲ್ಲಿನ ಪಟ್ಟಣ ಪಂಚಾಯಿತಿ ಸಾರ್ವಜನಿಕರ ಅಹವಾಲಿನ ಮೇರೆಗೆ ಮಂಗಗಳನ್ನು ಹಿಡಿದು ದೂರ ಪ್ರದೇಶಕ್ಕೆ ಬಿಡುವ ಕಾರ್ಯವನ್ನು ಕೈಗೆತ್ತಿಕೊಂಡಿದೆ. ಜೊತೆಯಲ್ಲಿ ಬೀದಿನಾಯಿಗಳ ನಿಯಂತ್ರಣಕ್ಕಾಗಿ ಸಂತಾನಹರಣ ಶಸ್ತ್ರಚಿಕಿತ್ಸೆಗೂ ಮುಂದಾಗಿದೆ. ಈಗಾಗಲೇ ಪಟ್ಟಣ ವ್ಯಾಪ್ತಿಯಲ್ಲಿ ಸುಮಾರು ನೂರಾರು ಮಂಗಗಳನ್ನು ಸ್ಥಳಾಂತರಗೊಳಿಸಿದ್ದು ಇನ್ನೂ ಕಾರ್ಯಮುಂದುವರೆಸಲಾಗಿದೆ. ಪಶುಸಂಗೋಪನಾ ಇಲಾಖೆಯ ಸಹಕಾರದೊಂದಿಗೆ ನಾಯಿಗಳ ಸಂತಾನ ಹರಣ ಶಸ್ತ್ರ ಚಿಕಿತ್ಸೆಗೆ ಮುಂದಾಗಿದ್ದು, ಮಂಗಗಳನ್ನು ಹಿಡಿಯುವ ಸಲುವಾಗಿ ಮೀರಜ್‌ನಿಂದ ನಾಲ್ವರ ತಂಡವನ್ನು ಕರೆಸಲಾಗಿದೆ. ಈಗ್ಗೆ ನಾಲ್ಕಾರು ವರ್ಷಗಳ ಕೆಳಗೂ ಒಮ್ಮೆ ಮಂಗಗಳನ್ನು ಹಿಡಿಸಲಾಗಿತ್ತು. ಆದರೆ ಕೆಲವೇ ದಿನದಲ್ಲಿ ಮತ್ತೊಂದು ಕಡೆಯಿಂದ ಮಂಗಗಳು ಆಗಮಿಸಿದ್ದವು. ಆದ್ದರಿಂದ ಒಂದು ಹಂತದ ಕಾರ್ಯಾಚರಣೆ ನಂತರ ಕನಿಷ್ಟ ಒಂದುವಾರಗಳ ಕಾಲವಾದರೂ ಅವರನ್ನು ಇಲ್ಲಿಯೇ ಇಟ್ಟು- ಕೊಂಡು ಅಗತ್ಯ ಬಿದ್ದಲ್ಲಿ ಮತ್ತೊಮ್ಮೆ ಕಾರ್ಯಾಚರಣೆ ನಡೆಸುವ ಮೂಲಕ ಸಾರ್ವಜನಿಕರಿಗೆ ಮಂಗಗಳ ಕಾಟದಿಂದ ಮುಕ್ತಿಕೊಡಿಸುವಂತೆ ಸ್ಥಳೀಯರು ಆಗ್ರಹಿಸಿದ್ದಾರೆ.

## ನಿವೃತ್ತ ಯೋಧನಿಗೆ ಅದ್ದೂರಿ ಸ್ವಾಗತ

**ಶಿವಮೊಗ್ಗ:** ಹೊಳೆಹೊನ್ನೂರು ಪಟ್ಟಣದ ಎಚ್. ಅನಿಲ್ ಕುಮಾರ್ 21 ವರ್ಷಗಳ ಕಾಲ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿಯಾಗಿ ತನ್ನ ಹುಟ್ಟೂರಿಗೆ ಆಗಮಿಸುತ್ತಿದ್ದಂತೆ ಭಾನುವಾರ ಗ್ರಾಮಸ್ಥರೆಲ್ಲ ಸೇರಿ ಭವ್ಯವಾದ ಸ್ವಾಗತವನ್ನು ನೀಡಿದರು. ನಂತರ ಊರಿನ ಪ್ರಮುಖರು, ತನ್ನೊಟ್ಟಿಗೆ ಕಲಿತ ಗೆಳೆಯರು. ನೆರೆಹೊರೆಯವರು, ಸುತ್ತಮುತ್ತಲಿನ ನಾಗರೀಕರು ಎಲ್ಲಾ ಸೇರಿ ಎಚ್. ಅನಿಲ್ ಕುಮಾರ್ ಅವರನ್ನು ತೆರೆದ ವಾಹನದಲ್ಲಿ ಅದ್ದೂರಿಯಾಗಿ ಮೆರವಣಿಗೆ ಮಾಡಿದರು. ಈ ಸಂರ್ಭದಲ್ಲಿ ಮಾತನಾಡಿದ ಯೋಧ ಅನಿಲ್ ಕುಮಾರ್, ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸುವುದು ಪ್ರತಿಯೊಬ್ಬ ಭಾರತೀಯನ ಹೆಮ್ಮೆ. ಸೇನೆ ಅಂದ ಮಾತ್ರಕ್ಕೆ ಬರೀ ಮದ್ದು ಗುಂಡು, ಯುದ್ಧ, ಹೋರಾಟ ಎಂದಲ್ಲ. ಭಾರತೀಯ ಸೇನೆ ಅಂದರೆ ಅದೊಂದು ಶಿಸ್ತು, ಸಂಯಮ, ಮಾತಾಡುವ ಕಲೆ, ಜೀವನ ಮೌಲ್ಯಗಳನ್ನು ಅರ್ಥ ಮಾಡಿಸುವ ಶಾಲೆ ಇದ್ದಂತೆ. ಪ್ರತಿಯೊಬ್ಬ ಭಾರತೀಯ ಸೇನೆಯಲ್ಲಿ ಸೇವೆ ಮಾಡುವ ಹಂಬಲ ಹೊಂದಿರಬೇಕು. ಇತ್ತೀಚಿನ ದಿನಗಳಲ್ಲಿ ಕನಿಷ್ಠ 4 ವರ್ಷಗಳ ಸೇವೆ ಸಲ್ಲಿಸುವಂತಹ ಅವಕಾಶವನ್ನು ಭಾರತ ಸರ್ಕಾರ ಒದಗಿಸಿದೆ. ಈ ಸೌಲಭ್ಯವನ್ನು ಪ್ರತಿಯೊಬ್ಬರೂ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ಅನಿಲ್ ಕುಮಾರ್, ಪಟ್ಟಣದ ಹಳದಪ್ಪ ಕೆಂಚಮ್ಮನವರ 7ನೇ ಮಗನಾಗಿ ಜನಿಸಿದರು.ಇವರಿಗೆ 23-01-2004 ರಲ್ಲಿ ಸೇನೆಗೆ ನೇಮಕವಾದರು, ಹೈದರಬಾದ್ ನಲ್ಲಿ ಒಂದು ವರ್ಷ ತರಬೇತಿ, ಜಮ್ಮೂ ಕಾಶ್ಮೀರದ ರಜೌರಿ ಜಿಲ್ಲೆಗೆ ಮೊದಲ ಪೋಸ್ಟಿಂಗ್, ನಂತರ ಪಂಜಾಬ್ ನ ಪಠಾಣ್ ಕೋಟ್, ಜಮ್ಮು ಕಾಶ್ಮೀರದ ಲೈನ್ ಆಫ್ ಕಂಟ್ರೋಲ್, ಹಿಮಾಲಯ ಪ್ರದೇಶದ ಧರ್ಮಶಾಲಾ, ಜಮ್ಮು ಕಾಶ್ಮೀರದ ಅಥಣಿ ಟಾಪ್, ಲಡಾಕ್, ಚನ್ನೈನ ಆವಡಿ, ಉತ್ತರಾಖಾಂಡ್ ನ ಡೆಹರಾಡೂನ್, ಪಶ್ಚಿಮ ಬಂಗಾಳದ ಚಾಲ್ಸಾ, ಕೊನೆಯದಾಗಿ ಮಹಾರಾಷ್ಟ್ರದ ನಾಸಿಕ್ ಸೇರಿದಂತೆ 8 ರಾಜ್ಯಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಈ ಅವಧಿಯಲ್ಲಿ ಒಟ್ಟು ಆರು ಸೇವಾ ಪದಕಗಳನ್ನು ಪಡೆದಿರುವುದು ಹೆಮ್ಮೆಯ ಸಂಗತಿಯಾಗಿದೆ.ಈ ಸಂದರ್ಭದಲ್ಲಿ ಯೋಧನ ತಾಯಿ, ಪತ್ನಿ ಮತ್ತು ಮಕ್ಕಳು, ಬಿ.ಮಂಜುನಾಥ, ಪರಶುರಾಮ್ ರಾವ್, ರಘು, ಮಾರುತಿ, ಬಸವರಾಜ್, ಆರ್.ಉಮೇಶ್, ನಾಗೇಶ್, ರಮೇಶ್ ಸೇರಿದಂತೆ ನೂರಾರು ಜನ ಅಭಿಮಾನಿಗಳು ಇದ್ದರು.



# ನಾಯಕನಹಟ್ಟಿಯಲ್ಲಿ ರಥೋತ್ಸವ ಸಂಭ್ರಮ

**ನಾಯಕನಹಟ್ಟಿ:** ಮಾಡಿದಷ್ಟು ನೀಡು ಭಿಕ್ಷೆ ಎಂಬ ತತ್ವ ಸಂದೇಶ ಸಾರಿ ಶ್ರೀಕ್ಷೇತ್ರ ನಾಯಕನಹಟ್ಟಿ ನೆಲಸಿರುವ ಕಾಯಕಯೋಗಿ ಶ್ರೀಗುರು ತಿಪ್ಪೇರುದ್ರಸ್ವಾಮಿ ರಥೋತ್ಸವ ಭಾನುವಾರ ವಿಜೃಂಭಣೆಯಿಂದ ನೆರವೇರಿತು.

ಸುಡು ಬಿಸಿಲ ನಡುವೆಯೂ ಲಕ್ಷಾಂತರ ಭಕ್ತರು ವೈಭವದ ತಿಪ್ಪೇರುದ್ರಸ್ವಾಮಿ ರಥೋತ್ಸವಕ್ಕೆ ಸಾಕ್ಷೀಯಾದರು. ಭಕ್ತಿ ಭಾವ ಸಮರ್ಪಿಸಿದರು.

ಮಧ್ಯ ಕರ್ನಾಟಕದ ಐತಿಹಾಸಿಕ ನಾಯಕನಹಟ್ಟಿ ಗುರು ತಿಪ್ಪೇರುದ್ರಸ್ವಾಮಿ ದೊಡ್ಡ ರಥೋತ್ಸವ ಕಣ್ತುಂಬಿಕೊಳ್ಳಲು ಭಕ್ತರು ಬೆಳಿಗ್ಗೆಯಿಂದಲೇ ನಾಯಕನಹಟ್ಟಿಯತ್ತ ಮುಖ ಮಾಡಿದ್ದರು. ಹೊರಮಠ ಹಾಗೂ ಒಳಮಠ ಎರಡೂ ಕಡೆಗಳಲ್ಲಿ ಬೆಳಗ್ಗೆಯಿಂದಲೇ ಬಿಡುವಿಲ್ಲದಂತೆ ಪೂಜಾ ಕಾರ್ಯಗಳು ನಡೆದವು. ದೇವರ ದರ್ಶನಕ್ಕೆ ಸಹಸ್ರಾರು ಮಂದಿ ಸಾಲುಗಟ್ಟಿ ನಿಂತಿದ್ದರು.

ಮಧ್ಯಾಹ್ನ 2 ಗಂಟೆಯಿಂದಲೇ ಒಳಮಠದಲ್ಲಿ ಮುಖ್ಯ ಅರ್ಚಕರ ನೇತೃತ್ವದಲ್ಲಿ ಉತ್ಸವ ಮೂರ್ತಿ ಹೊತ್ತು ತರುವ ಪಲ್ಲಕ್ಕಿಯನ್ನು ಧಾರ್ಮಿಕ ವಿಧಿ ವಿಧಾನಗಳಿಂದ ಸಿಂಗರಿಸಲಾಯಿತು. ಪಲ್ಲಕ್ಕಿಯಲ್ಲಿ ಉತ್ಸವ ಮೂರ್ತಿ ಪ್ರತಿಷ್ಠಾಪಿಸಿ, ರಥೋತ್ಸವದ ಬಳಿ ತಂದು ಸಜ್ಜುಗೊಳಿಸಲಾಯಿತು. ಮಧ್ಯಾಹ್ನ 4 ಗಂಟೆಗೆ ಚಿತ್ತಾ ನಕ್ಷತ್ರದಲ್ಲಿ ಅಸಂಖ್ಯ ಭಕ್ತರು ತಿಪ್ಪೇರುದ್ರಸ್ವಾಮಿ ತೇರನ್ನು ರಥ ತೇರುಬೀದಿಯಿಂದ ಹೊರಮಠದವರೆಗೆ ಎಳೆಯುವ ಮೂಲಕ ಭಕ್ತಿ ಸಮರ್ಪಣೆ ಮಾಡಿದರು.

ರಥವು ತೇರು ಬೀದಿಯಿಂದ ಪಾದಗಟ್ಟೆಯವರೆಗೆ ಚಲಿಸುವಾಗ ಭಕ್ತರು ರಥಕ್ಕೆ ಬಾಳೆಹಣ್ಣು, ಕಾಳುಮೆಣಸು, ಧವನ, ಹೂವು, ಚೂರು ಬೆಲ್ಲವನ್ನು ಸಮರ್ಪಿಸಿ ತಮ್ಮ ಇಷ್ಟಾರ್ಥವನ್ನು ಈಡೇರಿಸುವಂತೆ ಭಕ್ತಿ ಪೂರ್ವಕವಾಗಿ ಪ್ರಾರ್ಥಿಸಿದರು. ತಿಪ್ಪೇರುದ್ರಸ್ವಾಮಿಗೆ ಜಯವಾಗಲಿ, ಕಾಯಕ ಯೋಗಿಗೆ ಜಯವಾಗಲಿ, ತಿಪ್ಪೇರುದ್ರಸ್ವಾಮಿ ಮಹಾರಾಜ್ ಕಿ ಜೈ ಎನ್ನುವ ಜಯಘೋಷ ಮೊಳಗಿಸಿದರು. ರಥದ ದೊಡ್ಡ ಗಾತ್ರದ ಮಿಣಿ ಹಗ್ಗ ಎಳೆದು ಧನ್ಯರಾದರು. ನಾಡಿನ ಸುಭೀಕ್ಷೆ ಹಾಗೂ ಉತ್ತಮ ಮಳೆ ಬೆಳೆಗಾಗಿ ಪ್ರಾರ್ಥಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಸಂಸದ ಗೋವಿಂದ ಕಾರಜೋಳ, ಶಾಸಕರಾದ ಟಿ. ರಘುಮೂರ್ತಿ, ಕೆ.ಸಿ.ವೀರೇಂದ್ರ ಪಪ್ಪಿ, ಎನ್.ವೈ. ಗೋಪಾಲಕೃಷ್ಣ, ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ ಬಾಬು, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮಹಬೂಬ್ ಜಿಲಾನ್ ಮತ್ತಿತರರು ಪಾಲ್ಗೊಂಡಿದ್ದರು.



### ರಾಶಿ ರಾಶಿ ಕೊಬ್ಬರಿ

ಒಳಮಠದ ಆವರಣದಲ್ಲಿ ಸಹಸ್ರಾರು ಭಕ್ತರು ಒಣಕೊಬ್ಬರಿ ಸುಟ್ಟು ಹರಕೆ ಸಲ್ಲಿಸುತ್ತಿದ್ದ ದೃಶ್ಯ ರಾತ್ರಿಯವರೆಗೆ ಕಂಡುಬಂತು. ನಿರಂತರವಾಗಿ ರಾಶಿ ರಾಶಿ ಕೊಬ್ಬರಿ ಸುಡುತ್ತಿದ್ದ ಕಾರಣ ದಟ್ಟವಾದ ಹೊಗೆ ಆವರಿಸಿಕೊಂಡಿತ್ತು. ದೇವಸ್ಥಾನ ಸಮಿತಿಯಿಂದ ಒಣಕೊಬ್ಬರಿ ಶಾಸ್ತ್ರಕ್ಕೆ ಸುಟ್ಟು, ಉಳಿದಿದ್ದನ್ನು ದಾಸೋಹಕ್ಕೆ ನೀಡಿ ದೇವರ ಕೃಪೆಗೆ ಪಾತ್ರರಾಗುವಂತೆ ಮೈಕ್‌ನಲ್ಲಿ ಹೇಳುತ್ತಿದ್ದರು.

### ಮಜ್ಜಿಗೆ, ನೀರು ವಿತರಣೆ

ವಿವಿಧ ಸಂಘ-ಸಂಸ್ಥೆಗಳು ಪಟ್ಟಣದ ವಿವಿಧೆಡೆ ನೀರು, ಮಜ್ಜಿಗೆ ಉಚಿತವಾಗಿ ವಿತರಿಸುವ ಮೂಲಕ ಜನರ ಬಾಯಾರಿಕೆ ತಣಿಸುವ ಕೆಲಸ ಮಾಡಿದರು. ಜತೆಗೆ ಪಟ್ಟಣ ಪಂಚಾಯಿತಿ, ತಾಲ್ಲೂಕು ಆಡಳಿತ, ದೇವಸ್ಥಾನ ಸಮಿತಿಯಿಂದ ವಿವಿಧೆಡೆ ಶುದ್ಧ ಕುಡಿಯುವ ನೀರಿನ ಪೂರೈಕೆಗೆ ವ್ಯವಸ್ಥೆ ಮಾಡಿದ್ದರು. ಧೂಳು ಹೆಚ್ಚಾಗದ ರೀತಿ ಟ್ಯಾಂಕರ್‌ಗಳ ಮೂಲಕ ನೀರು ರಸ್ತೆಗೆ ಹಾಕಲಾಗುತ್ತಿತ್ತು.



### ವಾಹನ ನಿಲುಗಡೆ

ಕಿಮೀ ದೂರದಲ್ಲಿಯೇ ಖಾಸಗಿ ವಾಹನಗಳ ನಿಲುಗಡೆಗೆ ಪೊಲೀಸ್ ಇಲಾಖೆ ವ್ಯವಸ್ಥೆ ಮಾಡಲಾಗಿತ್ತು. ಬೈಕ್, ಕಾರುಗಳಲ್ಲಿ ಆಗಮಿಸಿದವರು ವಿಶಾಲ ಜಾಗದಲ್ಲಿ ನಿಲ್ಲಿಸಿ, 1 ಕಿಮೀ ದೂರ ನಡೆದುಕೊಂಡು ಹೋಗಿ ದೇವರ ದರ್ಶನ ಪಡೆದು, ಹಿಂತಿರುಗುತ್ತಿದ್ದ ದೃಶ್ಯ ಕಂಡುಬಂತು.



### ಅಳಿಯನ ಭಕ್ತಿ

ರಥೋತ್ಸವಕ್ಕೂ ಮುನ್ನ ಜಾತ್ರೆಯ ವಿಶೇಷಗಳಲ್ಲಿ ಒಂದಾಗಿರುವ ಮುಕ್ತಿ ಬಾವುಟದ ಹರಾಜು ಪ್ರಕ್ರಿಯೆ ನಡೆಸಲಾಯಿತು. ಈ ಬಾರಿ ರಥದ ಮುಂದೆ ನಡೆದ ಹಟ್ಟಿ ತಿಪ್ಪೇಶನ ಮುಕ್ತಿ ಭಾವುಟ ಭರ್ಜರಿ ಮೊತ್ತಕ್ಕೆ ಹರಾಜಾಯಿತು. ಬೆಂಗಳೂರು ಮೂಲದ, ನಾಯಕನಹಟ್ಟಿ ಅಳಿಯ ಉದ್ಯಮಿ ತೇಜಸ್ವಿ ಆರಾಧ್ಯ ಅವರು 63 ಲಕ್ಷ ರೂಪಾಯಿಗೆ ಪಡೆದುಕೊಂಡರು.

### ಹೆಚ್ಚುವರಿ 200 ಬಸ್

ಸಾರಿಗೆ ನಿಗಮ ಜಾತ್ರೆಗೆ ಆಗಮಿಸುವ ಭಕ್ತರಿಗೆ ಸಮಸ್ಯೆ ಆಗದ ರೀತಿ ಹೆಚ್ಚುವರಿ 200 ಬಸ್ ಓಡಾಟಕ್ಕೆ ವ್ಯವಸ್ಥೆ ಮಾಡಿತ್ತು. ಚಿತ್ರದುರ್ಗ, ಚಳ್ಳಕೆರೆ, ಜಗಳೂರು ಸೇರಿ ವಿವಿಧೆಡೆಯಿಂದ ಎಡೆಬಿಡದೆ ಬಸ್‌ಗಳು ಸಂಚರಿಸಿದವು.

### ಮೂಲ ಸೌಲಭ್ಯ


ಲಕ್ಷಾಂತರ ಜನರು ಆಗಮಿಸುವ ನಿರೀಕ್ಷೆ ಹಿನ್ನೆಲೆಯಲ್ಲಿ ಪೂರ್ವಸಿದ್ಧತೆಯಾಗಿ ಕುಡಿಯುವ ನೀರು, ತಾತ್ಕಾಲಿಕ ಶೌಚಗೃಹ ವ್ಯವಸ್ಥೆ ಮಾಡಲಾಗಿತ್ತು. ಜತೆಗೆ ಆರೋಗ್ಯ ಇಲಾಖೆ, ಪಪಂ ಸಿಬ್ಬಂದಿ ಜನರಲ್ಲಿ ಸ್ವಚ್ಛತೆ, ಆರೋಗ್ಯ ಜಾಗೃತಿಗಾಗಿ ಕರಪತ್ರ ವಿತರಣೆ, ಮೈಕ್‌ನಲ್ಲಿ ಪ್ರಚಾರ ಕಾರ್ಯ ನಡೆಸಿದರು.

## ಎಂಸಿಸಿ ಬಿ ಬ್ಲಾಕ್ ನಲ್ಲಿ ಜನಸೇವೆಯ ಜನಪ್ರತಿನಿಧಿ ಪಡೆದ ನಾವೇ ಧನ್ಯರು: ನಿವೃತ್ತ ಎಸ್ಪಿ ಲಿಂಗಾರೆಡ್ಡಿ

**ದಾವಣಗೆರೆ:** ಎಂಸಿಸಿ ಬಿ ಬ್ಲಾಕ್ ಇಡೀ ದಾವಣಗೆರೆಯಲ್ಲಿ ಮಾದರಿ ವಾರ್ಡ್ ಆಗಿಸುವಲ್ಲಿ ಮಹಾನಗರ ಪಾಲಿಕೆ ಸದಸ್ಯರಾಗಿದ್ದ ಜಿ. ಎಸ್. ಮಂಜುನಾಥ್ ಗಡಿಗುಡಾಳ್ ಅವರ ಕಾರ್ಯ ಶ್ಲಾಘನೀಯ ಮತ್ತು ಮಾದರಿ ಎಂದು ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಲಿಂಗಾರೆಡ್ಡಿ ಹೇಳಿದರು.

ಎಂಸಿಸಿ ಬಿ ಬ್ಲಾಕ್ 10ನೇ ಕ್ರಾಸ್ ನಾಗರಿಕ ಸಮಿತಿಯ ಉದ್ಯಾನವನದಲ್ಲಿ ಜಿ.ಎಸ್.ಮಂಜುನಾಥ್ ಗಡಿಗುಡಾಳ್ ಅವರಿಗೆ ಸನ್ಮಾನ ಹಾಗೂ ಪೌರ ಕಾರ್ಮಿಕರ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಏನೇ ಸಮಸ್ಯೆಗಳಿದ್ದರೂ ಸದಾ ಸ್ಪಂದಿಸಿದ ಪಾಲಿಕೆ ಸದಸ್ಯರು ಅಭಿವೃದ್ಧಿ ವಿಚಾರದಲ್ಲಿ ನಿಪುಣ- ರು. ವಾರ್ಡ್ ಗೆ ಸಂಬಂಧಿಸಿದಂತೆ ಯಾವುದೇ ಕೆಲಸಗಳಿದ್ದರೂ ಬಿಡದೇ ಸಾಧಿಸುವಂಥ ಛಲವಿಕ್ರಮರು. ನಾವು ನೋಡಿದ ಒಳ್ಳೆಯ, ಆದರ್ಶನೀಯವಾದ ಜನಪ್ರತಿನಿಧಿ ಹೇಗೆ ಇರಬೇಕೆಂದು ತೋರಿಸಿಕೊಟ್ಟವರು ಗಡಿಗುಡಾಳ್ ಎಂದು ಬಣ್ಣಿಸಿದರು.



ಸನ್ಮಾನ ಸ್ವೀಕರಿಸಿ ಮಾತನಾಡಿದ ಮಂಜುನಾಥ್ ಗಡಿಗುಡಾಳ್ ಅವರು, ವಾರ್ಡ್ ಜನರು ತೋರಿಸಿರುವ ಪ್ರೀತಿ, ನೀಡಿರುವ ಗೌರವಕ್ಕೆ ಸದಾ ಚಿರಋಣಿ. ಯಾಕೆಂದರೆ ಕಸ ವಿಲೇವಾರಿ, ಕೊರೊನಾ ಸಂಕಷ್ಟ, ವಾರ್ಡ್ ಸ್ವಚ್ಛವಾಗಿಟ್ಟುಕೊಳ್ಳುವಿಕೆ,

ಅಭಿವೃದ್ಧಿಗೆ ಸಹಕಾರ ನೀಡಿದ್ದಾರೆ. ಜನರೆಲ್ಲರ ಸಹಕಾರದಿಂದಲೇ ಇಷ್ಟೊಂದು ಅಭಿವೃದ್ಧಿ ಆಗಲು ಸಾಧ್ಯವಾಗಿದ್ದು. ಅವರ ನನ್ನ ಮೇಲೆ ಇಟ್ಟಿರುವ ನಂಬಿಕೆ ಹುಸಿಯಾಗಲು ಬಿಡುವುದಿಲ್ಲ ಎಂದು ಹೇಳಿದರು.

ರಾಜಕಾರಣಕ್ಕೆ ಬರಲು ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಅವರೇ ಪ್ರೇರಣೆ. ಮಲ್ಲಿಕಾರ್ಜುನ್ ಅವರ ನಾಯಕತ್ವ, ನೇರ ನುಡಿ, ಅಭಿವೃದ್ಧಿ ವಿಚಾರದಲ್ಲಿ ರಾಜಿಯಾಗದ, ದೂರದೃಷ್ಟಿತ್ವ, ಜನರ ಮೇಲಿರುವ ಕಾಳಜಿ, ಗುಣಮಟ್ಟದ ಕೆಲಸವೇ ಕಾರಣ. ನನಗೆ ಮಾತ್ರವಲ್ಲ, ಜಿಲ್ಲೆಯ ಎಲ್ಲಾ ಯುವ ನಾಯಕರು, ಹಿರಿಯ ನಾಯಕರಿಗೆ ಅವರೇ ಆದರ್ಶ ಎಂದು ತಿಳಿಸಿದರು.

ಕಾಂಗ್ರೆಸ್ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರೂ ಸಹ ವಾರ್ಡ್ ನ ಸಮಗ್ರ ಅಭಿವೃದ್ಧಿಗೆ ಸಹಕಾರ, ಮಾರ್ಗದರ್ಶನ ನೀಡಿದ್ದಾರೆ. ಅನುದಾನವನ್ನೂ ಕೊಟ್ಟಿದ್ದಾರೆ. ಜನರಿಗಾಗಿ ಎಷ್ಟೋ ಅಭಿವೃದ್ಧಿ ಕೆಲಸಗಳನ್ನು ಕೊಟ್ಟಿದ್ದಾರೆ. ಜನರ ಆಶೋತ್ತರಕ್ಕೆ ತಕ್ಕಂತೆ ಕಾರ್ಯನಿರ್ವಹಿಸುತ್ತಿದ್ದಾರೆ. ಎಲ್ಲರಿಗೂ ಒಳಿತು ಮಾಡುವ ಸಂಕಲ್ಪದಲ್ಲಿಯೇ ಮುನ್ನಡೆಯುತ್ತಿದ್ದಾರೆ.

**PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**